15 May 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜಗತ್ತು ಎಷ್ಟೇ ಮುಂದುವರಿದರೂ ದ್ವೇಷ, ಮತ್ಸರಗಳು ಮಾತ್ರ ಮೂಢ ನಂಬಿಕೆಯ ಹಾಗೆ ಬೆಳೆಯುತ್ತಲೇ ಇವೆ !

-ಸ್ನೇಹಾ ಆನಂದ್

info.varthaman@gmail.com



ಶೇ.56 ಮೀಸಲಾತಿ ಸಂವಿಧಾನದಲ್ಲಿ ಸೇರಿಸಿ — ಪುಟ ಸಂ. 2


ಹೈಕಮಾಂಡ್ ಈಗ ಗೊಂದಲ ಬಗೆಹರಿಸಲಿ: ತನ್ವೀರ್‌ಸೇಠ್ — ಪುಟ ಸಂ. 3


ಉಡಿಗಾಲ ಆನೆಮಡುವಿನ ಕೆರೆಗೆ ನೀರು ತುಂಬಿಸುವಂತೆ ಒತ್ತಾಯ — ಪುಟ ಸಂ. 4


9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 89 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಸರ್ಕಾರದ 'ರಿಯಲ್ ಎಸ್ಟೇಟ್' ಕೆಲಸ

## ಡಿಕೆಶಿ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ

**ಬೆಂಗಳೂರು:** ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರ ಸ್ವತಃ ತಾನೇ ರಿಯಲ್ ಎಸ್ಟೇಟ್ ವಹಿವಾಟು ನಡೆಸಲು ಹೊರಟಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್‌ನಲ್ಲಿ ನಿವೇಶನ ಮಾರಾಟ, ತೆರಿಗೆ ಮತ್ತಿತರ ಮೂಲಗಳಿಂದ 15 ವರ್ಷಗಳಲಿ 33,000 ಕೋಟಿ ಆದಾಯ ಬರುತ್ತದೆ ಎಂದು ಅಧ್ಯಯನ ವರದಿಯಲ್ಲಿ ಉಲ್ಲೇಖಿಸಿದ್ದಾರೆ. ಸಚಿವ ಸಂಪುಟ ಸಭೆಯಲ್ಲೂ ಇದನ್ನು ಒಪ್ಪಿದ್ದಾರೆ. ಸರ್ಕಾರ ರಿಯಲ್ ಎಸ್ಟೇಟ್ ದಲ್ಲಾಳಿಯ ಕೆಲಸ ಮಾಡುತ್ತಿದೆ ಎಂದರು.

ಯಾವುದೋ ಒಬ್ಬ ವ್ಯಕ್ತಿಯ ದಾಕ್ಷಿಣ್ಯಕ್ಕೆ ಬಲಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಿಯಲ್ ಎಸ್ಟೇಟ್ ದಲ್ಲಾಳಿ ಆಗಬಾರದು. ಆ ವ್ಯಕ್ತಿ ಹೇಳಿದಂತೆ ಕೇಳಿದರೆ ಇನ್ನೂ ಎರಡು ವರ್ಷ ಕುರ್ಚಿ ಉಳಿಯಬಹುದು ಎಂದು ಸಿದ್ದರಾಮಯ್ಯ ಹೀಗೆ ಮಾಡುತ್ತಿದ್ದಾರೆ. ಕುರ್ಚಿ ಉಳಿಸಿಕೊಳ್ಳಲು ತಮ್ಮ ಸಹಿಯನ್ನು ಮಾರಾಟ ಮಾಡಿಕೊಳ್ಳುತ್ತಿದ್ದಾರೆ. ಅವರು ಅಧಿಕಾರದ ಕೊನೆಯಗಾಲದಲ್ಲಿ ಹೆಸರು ಕೆಡಿಸಿಕೊಳ್ಳದೆ ಹೋಗಿ ಎಂದು ಡಿಕೆಶಿ ಹೆಸರು ಹೇಳಿದೆ ವಾಗ್ದಾಳಿ ನಡೆಸಿದರು.

2006ರಲ್ಲಿ ನಾನು ಬೆಂಗಳೂರಿನ ಸುತ್ತ ಐದು ಟೌನ್‌ಶಿಪ್‌ಗಳನ್ನು ನಿರ್ಮಾಣ ಮಾಡಲು ಆದೇಶ ಹೊರಡಿಸಿದ್ದೆ. ಅದರ ವಿರುದ್ಧ ಕಾಂಗ್ರೆಸ್‌ನ ಎಚ್.ಕೆ.ಪಾಟೀಲರ ಅಧ್ಯಕ್ಷತೆಯಲ್ಲಿ ಸತ್ಯಶೋಧನಾ ಸಮಿತಿ ರಚಿಸಿ, ಒಂದು ವರದಿ ಸಿದ್ಧಪಡಿಸಿದ್ದರು. ಆಗ ಟೌನ್‌ಶಿಪ್ ವಿರೋಧಿಸಿದ್ದವರು ಈಗ ತಾವೇ ಬಿಡದಿ ಟೌನ್‌ಶಿಪ್ ನಿರ್ಮಿಸಲು ಹೊರಟಿದ್ದಾರೆ. ಕಾನೂನು ತಜ್ಞ ಎಚ್.ಕೆ.ಪಾಟೀಲರು ತಮ್ಮ ಸತ್ಯಶೋಧನಾ ಸಮಿತಿ ವರದಿಯನ್ನು ಜನರ ಮುಂದೆ ಪುಟ 2ಕ್ಕೆ




### ಜನ ದುಡ್ಡು ಕಳೆದುಕೊಳ್ಳಬೇಡಿ

ಎ ಖಾತಾ, ಇ ಖಾತಾ ಹೆಸರಿನಲ್ಲಿ ದುಡ್ಡು ಹೊಡೆಯಲು ಬೆಂಗಳೂರು ಅಭಿವೃದ್ಧಿ ಸಚಿವರು ಹೊರಟಿದ್ದಾರೆ. ಅವರು ಹೇಳುತ್ತಿರುವುದೆಲ್ಲಾ ಸುಳ್ಳು. ಜನರು ದುಡ್ಡು ಕಟ್ಟಬೇಡಿ. ಎರಡು ವರ್ಷದ ನಂತರ ನಮ್ಮ ಸರ್ಕಾರ ಬರುತ್ತದೆ. ಈ ಕೆಲಸವನ್ನು ಉಚಿತವಾಗಿಯೇ ಮಾಡಿಕೊಡುತ್ತೇವೆ ಎಂದು ಕುಮಾರಸ್ವಾಮಿ ಹೇಳಿದರು.

# ಸಂಪುಟ ಪುನರಚನೆಗೆ ಸಿದ್ದು ಒಲವು

## ಕೇಸರಿ ಶಾಲಿಗೆ ಅವಕಾಶವಿಲ್ಲ | ಮುಖ್ಯಮಂತ್ರಿ ಸಿದ್ದರಾಮಯ್ಯ

**ಮೈಸೂರು:** ಸಚಿವ ಸಂಪುಟ ಪುನಾರಚನೆ ಮಾಡಬೇಕು. ಆದರೆ, ಹೈಕಮಾಂಡ್ ಕರೆದರೆ ಮಾತ್ರ ನಾನು ದೆಹಲಿಗೆ ಹೋಗುತ್ತೇನೆ. ನಾಳೆ 15ನೇ ತಾರೀಖು ದೆಹಲಿಗೆ ಹೋಗುತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ತಮ್ಮ ಮೈಸೂರಿನ ಮನೆಯ ಮುಂಭಾಗ ಗುರುವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಹಿಜಾಬ್ ನಿಷೇಧ ಹಿಂದಕ್ಕೆ ಪಡೆದ ವಿಚಾರದಲ್ಲಿ ಬಿಜೆಪಿಯವರು ವಿರೋಧ ಮಾಡಿದ್ದರ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಹಿಜಾಬ್ ಒಂದೇ ಅಲ್ಲ, ಜನಿವಾರ, ಶಿವದಾರ, ರುದ್ರಾಕ್ಷಿ ಎಲ್ಲವನ್ನು 12ನೇ ತರಗತಿಯವರೆಗೆ ಮಾತ್ರ ಹಾಕಲು ಅವಕಾಶ ಇದೆ. ಆದರೆ, ಕೇಸರಿ ಶಾಲು ಹಾಕಿಕೊಳ್ಳಲು ಅವಕಾಶ ಇಲ್ಲ. ಆದರೆ, ಕೇಸರಿ ಪೇಟ ಹಾಕಿಕೊಳ್ಳಲು ಅವಕಾಶ ಇದೆ ಎಂದರು.

ನಮ್ಮಲ್ಲಿ ಸದ್ಯಕ್ಕೆ ಆಚರಣೆಯಲ್ಲಿ ಇರುವ ಪದ್ಧತಿಗಳನ್ನು ಅನುಸರಣೆ ಮಾಡಲು ಅವಕಾಶ ಇದೆ. ಹೊಸ ಪದ್ಧತಿಗಳಿಗೆ ಅವಕಾಶವಿಲ್ಲ ಎಂದು ಹೇಳಿದ್ದಾರೆ.

ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮಿತ ಬಳಕೆಯ ಹಿನ್ನೆಲೆಯಲ್ಲಿ ಪ್ರಧಾನಿಯವರು ತಮ್ಮ ಬೆಂಗಾವಲು ವಾಹನ ಕಡಿಮೆ ಮಾಡಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು. ರಾಜ್ಯದಲ್ಲಿ ಇದನ್ನು ಬೆಂಬಲಿಸುವ ಬಗ್ಗೆ ಮಾತನಾಡಿದ ಅವರು, ಈ ಬಗ್ಗೆ ಬೇರೆ ರಾಜ್ಯಗಳಲ್ಲಿನ ಪ್ರಕ್ರಿಯೆಗಳನ್ನ ಪರಿಶೀಲನೆ ಮಾಡುತ್ತೇವೆ. ಪುಟ 2ಕ್ಕೆ



### ಸಂಪುಟ ಪುನಾರಚನೆ ತಪ್ಪೇನು?: ಬೈರತಿ ಸುರೇಶ್

**ಬೆಂಗಳೂರು:** ಸಚಿವ ಸಂಪುಟ ಪುನಾರಚನೆಯಾದರೆ ತಪ್ಪೇನು? ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಪ್ರಶ್ನಿಸಿದರು.



ಸಚಿವ ಸಂಪುಟ ಪುನಾರಚನೆಯಾದರೆ ಎಲ್ಲರಿಗೂ ಅವಕಾಶ ಸಿಗುತ್ತದೆ. ನಾವೆಲ್ಲಾ ಹೈಕಮಾಂಡ್ ಹೇಳಿದಂತೆ ಕೇಳುವವರು, ಕಾಂಗ್ರೆಸ್ ಹೈಕಮಾಂಡ್ ಜನತೆಗೆ ಪುಟ 2ಕ್ಕೆ

## ನೀಟ್ ರದ್ದು: ಕೇಂದ್ರದ ದ್ರೋಹ

### ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ

**ಬೆಂಗಳೂರು:** ದೇಶಾದ್ಯಂತ 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಬರೆದಿದ್ದ ನೀಟ್–ಯುಜಿ 2026 ಪರೀಕ್ಷೆಯನ್ನು ರದ್ದುಗೊಳಿಸಿರುವ ಕೇಂದ್ರ ಸರ್ಕಾರದ ನಿರ್ಧಾರವು ಆಡಳಿತಾತ್ಮಕ ವೈಫಲ್ಯ ಮಾತ್ರವಲ್ಲ. ದೇಶದ ಯುವಜನತೆಗೆ ಬಗೆದ ಕ್ರೂರ ದ್ರೋಹವಾಗಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ನಂತರ ಪರೀಕ್ಷೆ ರದ್ದು ವಿಚಾರಕ್ಕೆ ಸಂಬಂಧಿಸಿದಂತೆ ಮಾಧ್ಯಮ ಪ್ರಕಟಣೆ ಮೂಲಕ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ, ಕರ್ನಾಟಕದ ಒಂದು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಸೇರಿದಂತೆ ದೇಶದ 22 ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ತಿಂಗಳುಗಟ್ಟಲೆ ಶ್ರಮಪಟ್ಟು ಈ ಪರೀಕ್ಷೆ ಪುಟ 2ಕ್ಕೆ

## ದೆಹಲಿ ಸರ್ಕಾರಿ ನೌಕರರಿಗೂ 'ವರ್ಕ್ ಫ್ರಮ್ ಹೋಮ್'

**ನವದೆಹಲಿ:** ಜಾಗತಿಕ ತೈಲ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಇಂಧನ ಉಳಿತಾಯಕ್ಕಾಗಿ 'ವರ್ಕ್ ಫ್ರಮ್ ಹೋಮ್' ಮಾಡುವಂತೆ ಸಲಹೆ ನೀಡಿರುವುದರಿಂದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಗುರುವಾರ ಸರ್ಕಾರಿ ನೌಕರರಿಗೆ ವಾರಕ್ಕೆ ಎರಡು ದಿನ ಮನೆಯಿಂದಲೇ ಕೆಲಸ ಮಾಡಲು ಸೂಚಿಸಿದ್ದಾರೆ. ಅಲ್ಲದೆ, ವಾಹನಗಳ ಕನಿಷ್ಠ ಬಳಕೆ ಮಾಡುವಂತೆ ತಿಳಿಸಿದ್ದಾರೆ.

ದೆಹಲಿ ಸರ್ಕಾರದ ಈ ನಿರ್ಧಾರ ನಾಳೆಯಿಂದಲೇ ಜಾರಿಗೆ ಬರಲಿದೆ. ಇಂಧನ ಉಳಿತಾಯ ಮತ್ತು ದಕ್ಷ ಆಡಳಿತವನ್ನು ಉತ್ತೇಜಿಸಲು ಬಿಜೆಪಿ ನೇತೃತ್ವದ ಸರ್ಕಾರ ರಾಷ್ಟ್ರ ರಾಜಧಾನಿಯಲ್ಲಿ ಮೇರಾ ಭಾರತ್ ಮೇರಾ ಯೋಗದಾನ್ (ನನ್ನ ಭಾರತ, ನನ್ನ ಕೊಡುಗೆ) ಅಭಿಯಾನವನ್ನು ಪ್ರಾರಂಭಿಸುತ್ತಿದೆ.

ಪ್ರತಿ ಸೋಮವಾರ ಮೆಟ್ರೋ ಸೋಮವಾರ ಎಂದು ಆಚರಿಸಲಾಗುವುದು ಎಂದು ಸರ್ಕಾರ ತಿಳಿಸಿದೆ. ಈ ದಿನ ಎಲ್ಲಾ ಸಚಿವರು, ಅಧಿಕಾರಿಗಳು ಮತ್ತು ಉದ್ಯೋಗಿಗಳು ಮೆಟ್ರೋದಲ್ಲಿ ಪ್ರಯಾಣಿಸಬೇಕು ಪುಟ 2ಕ್ಕೆ

# ಮೋದಿಗೂ ರಾಜ್ಯಕ್ಕೂ ಏನು ಸಂಬಂಧ?

## ಸರ್ಕಾರದ ಆಂತರಿಕ ವಿಚಾರ: ಕೆ.ಎನ್.ರಾಜಣ್ಣ ಗರಂ

**ತುಮಕೂರು:** ತಮಿಳುನಾಡು ಮುಖ್ಯಮಂತ್ರಿ ವಿಜಯ್ ಜೋಸೆಫ್ ಅವರಿಗೆ ಆಡಳಿತ ಅನುಭವದ ಕೊರತೆಯಿದೆ. ಹಣಕಾಸು ನಿರ್ವಹಣೆ ಬಗ್ಗೆ ಯೋಚನೆ ಮಾಡದೆ ಅವರು ಏಕಾಏಕಿ 700ಕ್ಕೂ ಹೆಚ್ಚು ಮದ್ಯದಂಗಡಿಗಳನ್ನು ಮುಚ್ಚುವಂತೆ ಆತುರದ ನಿರ್ಧಾರ ತೆಗೆದುಕೊಂಡು ಆದೇಶಿಸಿದ್ದಾರೆ ಎಂದು ಮಾಜಿ ಸಚಿವ ಕೆ.ಎನ್ ರಾಜಣ್ಣ ಟೀಕಿಸಿದ್ದಾರೆ.



ಮಧುಗಿರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದ್ಯದಂಗಡಿಗಳಿಂದ ಹೆಚ್ಚಿನ ಆದಾಯ ಬರುತ್ತದೆ. ಆದಾಯದ ಹಾದಿ ಮುಚ್ಚಿಕೊಂಡರೆ ಫ್ರೀ ಬೀಸ್ ನೀಡಲು ಸಾಧ್ಯವೇ, ವಿಜಯ್ ಮುಂದಿನ ದಿನಗಳಲ್ಲಿ ಎಲ್ಲವನ್ನೂ ನೋಡಿಕೊಂಡು ನಿರ್ಧಾರ ತೆಗೆದುಕೊಳ್ಳಬೇಕು ಎಂದರು.

> **700ಕ್ಕೂ ಹೆಚ್ಚು ಮದ್ಯದಂಗಡಿಗಳನ್ನು ಮುಚ್ಚು ವಂತೆ ಆತುರದ ನಿರ್ಧಾರ**

ರಾಹುಲ್ ಗಾಂಧಿಯವರು ಹೋಗಿ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಅವರು ಹೋದರೆ ಎಲ್ಲಾ ಕಾಂಗ್ರೆಸ್ ನಾಯಕರು ಭಾಗಿಯಾದಂತೆ, ವಿಜಯ್ ಅವರಿಗೆ ಕಾಂಗ್ರೆಸ್ ಪಕ್ಷ ಒಂದೇ ಅಲ್ಲ, ಬೇರೆ ಪಕ್ಷಗಳೂ ಬೆಂಬಲ ನೀಡಿದ್ದಾರೆ ಎಂದರು.

ವಿಜಯ್ ಅವರು ಹೋಗುವ ಹಾದಿ ಬಹಳ ಮುಳ್ಳಿನದ್ದಾಗಿದೆ. ಕರ್ನಾಟಕದಲ್ಲಿ ಉಚಿತ ಭಾಗ್ಯಗಳನ್ನು ಕೊಟ್ಟು ಸರ್ಕಾರದಲ್ಲಿ ಆಗುತ್ತಿರುವ ಬೆಳವಣಿಗೆಗಳನ್ನು ನೋಡುತ್ತಿದ್ದೇವೆ. ಆತರ ತಮಿಳುನಾಡು ಸರ್ಕಾರದಲ್ಲಿ ಕೂಡ ಆಗ ದಂತೆ ಎಚ್ಚರಿಕೆ ವಹಿಸಬೇಕು ಎಂದರು. ಇನ್ನು ಕರ್ನಾಟಕದಲ್ಲಿ ಮುಖ್ಯಮಂತ್ರಿ ಕುರ್ಚಿ ಅಲು ಗಾಡುತ್ತಿದೆ ಎಂಬ ಪ್ರಧಾನಿ ನರೇಂದ್ರ ಮೋದಿಯವರ ಹೇಳಿಕೆಯನ್ನು ಟೀಕಿಸಿದ್ದಾರೆ. ನಮ್ಮಲ್ಲಿ ಮುಖ್ಯಮಂತ್ರಿ ಕುರ್ಚಿ ಅಲು ಗಾಡುತ್ತಿದೆಯೋ ಇಲ್ಲವೋ ಅದು ನಮ್ಮ ಪಕ್ಷದ ಆಂತರಿಕ ವಿಚಾರ, ನಮಗೂ ಪುಟ 2ಕ್ಕೆ

# 3ನೇ ಹಂತದ ಎಸ್‌ಐಆರ್

## ಕರ್ನಾಟಕ ಸೇರಿ 16 ರಾಜ್ಯಗಳಲ್ಲಿ ಆರಂಭ: ಚುನಾವಣಾ ಆಯೋಗ ಘೋಷಣೆ

**ನವದೆಹಲಿ:** ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಮೂರನೇ ಹಂತ ಆರಂಭಿಸುವುದಾಗಿ ಕೇಂದ್ರ ಚುನಾವಣಾ ಆಯೋಗ ಘೋಷಿಸಿದೆ.

ಕೇಂದ್ರ ಚುನಾವಣಾ ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್ ಅವರು ಗುರುವಾರ ಕರ್ನಾಟಕ ಸೇರಿದಂತೆ 16 ರಾಜ್ಯಗಳು ಹಾಗೂ ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹಂತ–3 ಪ್ರಕ್ರಿಯೆಯನ್ನು ಆರಂಭಿಸಲಾಗುವುದು ಎಂದು ಘೋಷಿಸಿದರು.

ಈ ಅಭಿಯಾನದಲ್ಲಿ ಮತದಾರರು ಉತ್ಸಾಹದಿಂದ ಭಾಗವಹಿಸಿ ತಮ್ಮ ಎಣಿಕೆ ಫಾರ್ಮ್ಗಳನ್ನು ಭರ್ತಿ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಈ ಪರಿಷ್ಕರಣೆಯ ಉದ್ದೇಶ ಅರ್ಹ ಮತದಾರರ ಹೆಸರುಗಳು ಮಾತ್ರ ಮತದಾರರ ಪಟ್ಟಿಯಲ್ಲಿ ಉಳಿಯುವಂತೆ ಮಾಡುವುದು ಮತ್ತು ಅನರ್ಹ ಹೆಸರುಗಳನ್ನು ತೆಗೆದುಹಾಕುವುದು ಎಂದು ಅವರು ತಿಳಿಸಿದ್ದಾರೆ.

ಭಾರತೀಯ ಚುನಾವಣಾ ಆಯೋಗ ಬಿಡುಗಡೆ ಮಾಡಿದ ಅಧಿಕೃತ ಪ್ರಕಟಣೆಯ ಪ್ರಕಾರ, ಹಂತ–3 ಅಭಿಯಾನವು




ಹಂತ ಹಂತವಾಗಿ ಸುಮಾರು 36 ಕೋಟಿ ಮತದಾರರನ್ನು ಒಳಗೊಂಡಿರಲಿದೆ. ಪ್ರಸ್ತುತ ನಡೆಯುತ್ತಿರುವ ಜನಗಣತಿಯ ಮನೆ ಪಟ್ಟಿ ಪ್ರಕ್ರಿಯೆಯೊಂದಿಗೆ ಇದನ್ನು ಸಂಯೋಜಿಸಲಾಗಿದ್ದು, ಕ್ಷೇತ್ರ ಸಿಬ್ಬಂದಿಯ ಬಳಕೆಯನ್ನು ಪರಿಣಾಮಕಾರಿಯಾಗಿ ಮಾಡುವ ಉದ್ದೇಶ ಹೊಂದಿದೆ ಎನ್ನಲಾಗಿದೆ.

ಆಯೋಗದ ಪ್ರಕಾರ, ಹಿಮಾಚಲ ಪುಟ 2ಕ್ಕೆ

## ಪೋಕ್ಸೋ ಕೇಸ್: ವಚನಾನಂದ ಶ್ರೀ ವಿಚಾರಣೆ

**ದಾವಣಗೆರೆ:** ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಅವರಿಗೆ ಈಗ ಪೋಕ್ಸೋ ಉರುಳು ಬಿಗಿಗೊಂಡಿದೆ. ಹರಿಹರ ಗ್ರಾಮಾಂತರ ಪೊಲೀಸರು ಗುರುವಾರ ಶ್ರೀಗಳನ್ನು ಐದು ಗಂಟೆಗಳ ಕಾಲ ಸುದೀರ್ಘ ವಿಚಾರಣೆ ನಡೆಸಿದರು.

ಮಠದ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ದೌರ್ಜನ್ಯ ಎಸಗಿದ ಆರೋಪದ ಮೇಲೆ ಶ್ರೀಗಳ ವಿರುದ್ಧ ಪೋಕ್ಸೋ ಕೇಸ್ ದಾಖಲಾಗಿತ್ತು. ಇಂದು ವಚನಾನಂದ ಶ್ರೀಗಳನ್ನು ನಿರಂತರ ಐದು ಗಂಟೆಗಳ ಕಾಲ ಸುದೀರ್ಘ ವಿಚಾರಣೆಗೆ ನಡೆಸಿ, ಮೆಡಿಕಲ್ ಟೆಸ್ಟ್ ಒಳಪಡಿಸಿದ್ದಾರೆ. ಆದರೆ ಸ್ವಾಮೀಜಿ ಕೋರ್ಟ್ನಿಂದ ನಿರೀಕ್ಷಣಾ ಜಾಮೀನು ಪಡೆದುಕೊಂಡಿದ್ದು, ಬಂಧನದಿಂದ ಬಚಾವ್ ಆಗಿದ್ದಾರೆ.

## ತಮಿಳುನಾಡಿನಲ್ಲಿ ಮದ್ಯ ಖರೀದಿಗೆ 21 ವರ್ಷ ನಿಗದಿ

**ಚೆನ್ನೈ:** ಜೋಸೆಫ್ ವಿಜಯ್ ನೇತೃತ್ವದ ತಮಿಳುನಾಡು ಸರ್ಕಾರ ರಾಜ್ಯದಲ್ಲಿ ಮದ್ಯಪಾನ ನಿಯಮಗಳನ್ನು ಕಠಿಣಗೊಳಿಸುವ ಮಹತ್ವದ ನಿರ್ಧಾರ ಕೈಗೊಂಡಿದೆ. ಇನ್ನು ಮುಂದೆ ಮದ್ಯ ಖರೀದಿ ಅಥವಾ ಮಾರಾಟ ಮಾಡಲು ಕನಿಷ್ಠ 21 ವರ್ಷ ನಿಗದಿಪಡಿಸಿ ಮಹತ್ವದ ಆದೇಶ ಹೊರಡಿಸಿದೆ.




ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ವಿಜಯ್ ಸರ್ಕಾರ ಈ ಕ್ರಮ ಜಾರಿಗೆ ತಂದಿದೆ. ರಾಜ್ಯದಲ್ಲಿ ಮದ್ಯಪಾನ ನಿಯಂತ್ರಣ ಮತ್ತು ಸಾರ್ವಜನಿಕ ಕಲ್ಯಾಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಈಗಾಗಲೇ ದೇವಾಲಯಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಬಸ್ ನಿಲ್ದಾಣಗಳ ಸಮೀಪದಲ್ಲಿದ್ದ 717 ಮದ್ಯದಂಗಡಿಗಳನ್ನು ಮುಚ್ಚಲು ಸರ್ಕಾರ ಆದೇಶಿಸಿದ ಬೆನ್ನಲ್ಲೇ ಮತ್ತೊಂದು ಕ್ರಮವನ್ನು ಕೈಗೊಂಡಿದೆ.

## ಸತೀಶನ್ ಕೇರಳಂ ಮುಖ್ಯಮಂತ್ರಿ

**ತಿರುವನಂತಪುರಂ:** ಕೇರಳ ರಾಜ್ಯದ ನೂತನ ಮುಖ್ಯಮಂತ್ರಿ ಆಯ್ಕೆ ವಿಚಾರವಾಗಿ ಕಳೆದೊಂದು ವಾರದಿಂದ ನಡೆದಿದ್ದ ರಾಜಕೀಯ ಪ್ರಹಸನಕ್ಕೆ ಕೊನೆಗೂ ತೆರೆ ಬಿದ್ದಿದ್ದು ಯುಡಿಎಫ್ ಮತ್ತು ಕಾಂಗ್ರೆಸ್ ಮೈತ್ರಿಕೂಟ ವಿ.ಡಿ. ಸತೀಶನ್ ಅವರನ್ನು ನೂತನ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಿದೆ.

ಕೇರಳ ಮುಖ್ಯಮಂತ್ರಿ ಆಯ್ಕೆ ಕುರಿತ ಕಾಂಗ್ರೆಸ್‌ನ ಸಸ್ಪೆನ್ಸ್ ಅಂತ್ಯವಾಗಿದ್ದು, ವಿ.ಡಿ.ಸತೀಶನ್ ಅವರೇ ನೂತನ ಮುಖ್ಯಮಂತ್ರಿ ಎಂದು ಘೋಷಣೆ ಮಾಡಲಾಗಿದೆ.

61 ವರ್ಷದ ಮಾಜಿ ವಿರೋಧ ಪಕ್ಷದ ನಾಯಕನಾಗಿದ್ದ ಅವರನ್ನು ಕಾಂಗ್ರೆಸ್ ತನ್ನ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಆಯ್ಕೆ ಮಾಡಿದೆ. ಈ ಮುಖ್ಯಮಂತ್ರಿ ಪದವಿ ರೇಸ್ ನಲ್ಲಿ ವೇಣುಗೋಪಾಲ್ ಹೆಸರು ಬಲವಾಗಿ ಕೇಳಿಬಂದಿತ್ತಾದರೂ ವಿ.ಡಿ ಸತೀಶನ್ ಮುನ್ನಡೆ ಸಾಧಿಸಿ ಈ ಸ್ಥಾನವನ್ನು ಪಡೆದಿದ್ದಾರೆ.



2026ರ ವಿಧಾನಸಭಾ ಚುನಾವಣೆಯಲ್ಲಿ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ ಭರ್ಜರಿ ಜಯ ಸಾಧಿಸಿದ ಬಳಿಕ ಮುಖ್ಯಮಂತ್ರಿ ಆಯ್ಕೆ ಕುರಿತು ನಡೆಯುತ್ತಿದ್ದ ಚರ್ಚೆಗೆ ಕಾಂಗ್ರೆಸ್ ಹೈಕಮಾಂಡ್ ಅಂತಿಮ ತೀರ್ಮಾನಕ್ಕೆ ಬಂದಿದೆ.

## ರಾಜ್ಯಪಾಲರ ಬೆಂಗಾವಲು ಪಡೆ ಇಳಿಕೆ

**ಬೆಂಗಳೂರು:** ತೈಲ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಉಳಿತಾಯಕ್ಕಾಗಿ ಕರೆ ನೀಡಿರುವ ಹಿನ್ನೆಲೆಯಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಗುರುವಾರ ತಮ್ಮ ಅಧಿಕೃತ ಬೆಂಗಾವಲು ಪಡೆಯನ್ನು ಅರ್ಧದಷ್ಟು ಕಡಿಮೆ ಮಾಡಿದ್ದಾರೆ.



ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಮಧ್ಯೆ ಇಂಧನ ಸಂರಕ್ಷಣೆ ಮತ್ತು ವಿದೇಶಿ ವಿನಿಮಯ ವೆಚ್ಚವನ್ನು ಕಡಿಮೆ ಮಾಡುವ ಪ್ರಧಾನಿಯವರ ಮನವಿಗೆ ಪ್ರತಿಕ್ರಿಯೆಯಾಗಿ ಗೆಹ್ಲೋಟ್ ಈ ಕ್ರಮ ಕೈಗೊಂಡಿದ್ದಾರೆ ಎಂದು ಲೋಕಭವನ ಪೋಸ್ಟ್ ಮಾಡಿದೆ.

ಹೈದರಾಬಾದ್‌ನಲ್ಲಿ ಬಿಜೆಪಿ ಆಯೋಜಿಸಿದ್ದ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯ ನಡುವೆ ವಿದೇಶಿ ವಿನಿಮಯವನ್ನು ಸಂರಕ್ಷಿಸುವ ಮತ್ತು ಆಮದಿನ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕರೆ ನೀಡಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

# ತವರಲ್ಲಿ ಸಿಎಂ ಸಿದ್ದರಾಮಯ್ಯ ರೌಂಡ್ಸ್

## ನೂತನ ಬಸ್ ನಿಲ್ದಾಣ, ಅಂಡರ್ ಕೇಬಲ್ ನಿರ್ಮಾಣ, ವೈಟ್ ಮ್ಯಾಪಿಂಗ್ ಕಾಮಗಾರಿ ವೀಕ್ಷಣೆ

**ಮೈಸೂರು:** ಮುಖ್ಯಮಂತ್ರಿ ಸಿದ್ಧರಾಮಯ್ಯ ತವರು ಜಿಲ್ಲೆಯ ನಗರದಲ್ಲಿ ನೂತನ ಬಸ್ ನಿಲ್ದಾಣ, ಅಂಡರ್ ಕೇಬಲ್ ನಿರ್ಮಾಣ, ವೈಟ್ ಮ್ಯಾಪಿಂಗ್ ಕಾಮಗಾರಿ ಸೇರಿ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿ ಗುಣಮಟ್ಟದ ಕಾಮಗಾರಿಯೊಂದಿಗೆ ನಿಗಧಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಮೊದಲಿಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ಮೈಸೂರು ನಗರ ವ್ಯಾಪ್ತಿಯಲ್ಲಿ ರಿಂಗ್ ರೋಡ್ ಒಳ ಭಾಗದಲ್ಲಿ ಹಾಲಿ ಇರುವ 11ಕೆ.ವಿ. ಓವರ್ ಹೆಡ್ ವಿದ್ಯುತ್ ಮಾರ್ಗಗಳನ್ನು ಭೂಗತ ಕೇಬಲ್‌ನಿಂದ ಬದಲಾಯಿಸುವ ಕಾಮಗಾರಿಯನ್ನು ಶ್ರೀರಾಂಪುರದ ಬಳಿ ಇರುವ ನಾಯ್ಡು ಸ್ಟೋರ್ ಬಳಿ ಪರಿಶೀಲನೆ ನಡೆಸಿದರು. ಸದರಿ ಕಾಮಗಾರಿಯ ಒಟ್ಟು ಕಾರ್ಯಾಪ್ರೇಷಣಾ ಮೊತ್ತ 588.24 ಕೋಟಿ ರೂ.ಗಳ ಕಾಮಗಾರಿಯನ್ನು ಪೂರ್ಣಗೊಳಿಸಲು 2 ವರ್ಷ ಅವಧಿಯನ್ನು ನಿಗಧಿಪಡಿಸಲಾಗಿದ್ದು ಗುಣಮಟ್ಟ ಕಾಪಾಡುವಂತೆ ಸೂಚಿಸಿದರು. ಕೆಪಿಟಿಸಿಎಲ್‌ನ ವತಿಯಿಂದ ಸುಮಾರು 871 ಕಿ.ಮೀ. ಕೇಬಲ್‌ಗಳನ್ನು ಹಾಕಲಾಗುತ್ತಿದ್ದು, ಇದುವರೆಗೆ 277 ಕಿ.ಮೀ.ಪೂರ್ಣಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಇದರಿಂಧ ಮೈಸೂರು ನಗರದ ಸೌಂದರ್ಯೀಕರಣಕ್ಕೆ ಸಹಕಾರಿಯಾಗಿದೆ ಎಂದರು.



ಲೋಕೋಪಯೋಗಿ ಇಲಾಖೆವತಿಯಿಂದ ನಗರದ 12 ರಸ್ತೆಗಳಲ್ಲಿ 50 ಕಿ.ಮೀ ಉದ್ದ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದು, ಮಾನಂದವಾಡಿ ರಸ್ತೆ ಎನ್.ಐ.ಕಾಲೇಜು ಬಳಿ ರಸ್ತೆಯಲ್ಲಿ ಪುಟ 2ಕ್ಕೆ



### ಲ್ಯಾನ್ಸ್‌ಡೌನ್, ದೇವರಾಜ ಮಾರುಕಟ್ಟೆ ಅಭಿವೃದ್ಧಿ: ಸಿಎಂ

ಮೈಸೂರಿನ ರಸ್ತೆಗಳು, ಒಳಚರಂಡಿ ವ್ಯವಸ್ಥೇ ಸೇರಿದಂತೆ ಎಲ್ಲ ಅಭಿವೃದ್ದಿ ಕಾರ್ಯಗಳನ್ನು ನಮ್ಮ ಸರ್ಕಾರವೇ ಕೈಗೊಂಡಿದ್ದು, ಬಿಜೆಪಿಯವರು ಕೇವಲ ಸರ್ಕಾರವನ್ನು ವಿರೋಧಿಸುವ, ಟೀಕಿಸುವ, ಸುಳ್ಳು ಹೇಳುವ ಕೆಲಸದಲ್ಲಿ ನಿರತವಾಗಿದೆ. ಜನರಿಗೆ ಅನುಕೂಲ ಕಲ್ಪಿಸುವ ಯಾವುದೇ ಯೋಜನೆಗಳನ್ನು ಬಿಜೆಪಿಯು ತನ್ನ ಅಧಿಕಾರಾವಧಿಯಲ್ಲಿ ಕೈಗೊಳ್ಳಲಿಲ್ಲ ಎಂದರು. ಮೈಸೂರು ನಗರದಲ್ಲಿ ದೇವರಾಜ ಮಾರ್ಕೆಟ್, ಲ್ಯಾನ್ಸ್‌ಡೌನ್ ಕಟ್ಟಡಗಳ ಪಾರಂಪರಿಕ ವಿನ್ಯಾಸವನ್ನು ಕಾಯ್ದುಕೊಂಡು ನಿರ್ಮಿಸುವ ಉದ್ದೇಶವಿದ್ದರೂ, ಈ ವಿಷಯ ಕೋರ್ಟ್ ಮೆಟ್ಟಿಲೇರಿದೆ. ಆದರೂ ಈ ವಿಷಯದ ಬಗ್ಗೆ ನಾನು ಹಾಗೂ ಸ್ಥಳೀಯ ಶಾಸಕರು ಮುತುವರ್ಜಿ ವಹಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು. ಕೇರಳದಲ್ಲಿ ಮುಖ್ಯಮಂತ್ರಿಗಳ ಆಯ್ಕೆಗೆ ಪಕ್ಷದ ವರಿಷ್ಠರು, ಅಲ್ಲಿನ ರಾಜಕೀಯ ನಾಯಕರೊಂದಿಗೆ ಚರ್ಚೆ ನಡೆಸಿ ಸೂಕ್ತ ತೀರ್ಮಾನ ಕೈಗೊಂಡಿದ್ದಾರೆ. ಕೇರಳಂನಲ್ಲಿ ಮೂರು ನಾಯಕರು ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಗಳಾಗಿದ್ದು, ಅವರಲ್ಲಿ ವಿ.ಡಿ.ಸತೀಶನ್ ರನ್ನು ಕೇರಳ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ. ಹೈಕಮಾಂಡ್ ಹೇಳಿದ ಹಾಗೇ ಕೇಳಲೇಬೇಕು ಎಂದರು.

# ಶೇ.56 ಮೀಸಲಾತಿ ಸಂವಿಧಾನದಲ್ಲಿ ಸೇರಿಸಿ

## ವಿ.ಎಸ್.ಉಗ್ರಪ್ಪ ಆಗ್ರಹ | 9ನೇ ವಿಧಿಯಲ್ಲಿ ಸೇರಿಸದ ಹೊರತು ಕಾನೂನು ಊರ್ಜಿತವಾಗುವುದಿಲ್ಲ

ರಾಮನಗರ: ರಾಜ್ಯದಲ್ಲಿ ಜಾರಿಯಲ್ಲಿರುವ ಶೇ 56 ಮೀಸಲಾತಿ ಪ್ರಮಾಣ ಸಂವಿಧಾನದ 9ನೇ ವಿಧಿಯಲ್ಲಿ ಸೇರಿಸದ ಹೊರತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರಿಗೆ ನ್ಯಾಯ ಸಿಗುವುದಿಲ್ಲ, ಈ ವಿಚಾರದಲ್ಲಿ ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ವಿಪಕ್ಷ ನಾಯಕ ವಿ.ಎಸ್.ಉಗ್ರಪ್ಪ ಆಗ್ರಹಿಸಿದರು.

ನಗರದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಯುವ ಘಟಕ ಆಯೋಜಿಸಿದ್ದ ಸುದ್ದಿ ಗೋಷ್ಠಿಯಲ್ಲಿ ಅವರು ಮಾತನಾಡಿದರು. ತಮಿಳುನಾಡು ರಾಜ್ಯದಲ್ಲಿ ಶೇ 69 ಮೀಸಲಾತಿ ಇದೆ. ಸಂವಿಧಾನದ 9ನೇ ವಿಧಿಯಲ್ಲಿ ಇದನ್ನು ಸೇರಿಸಲಾಗಿದ್ದು, ಕಾನೂನು ಊರ್ಜಿತವಾಗಿದೆ. ಹೀಗಾಗಿ ಕೋರ್ಟುಗಳು ಈ ವಿಚಾರದಲ್ಲಿ ತಡೆಯಾಜ್ಞೆ ನೀಡುತ್ತಿಲ್ಲ. ಆದರೆ ರಾಜ್ಯದಲ್ಲಿ ಜಾರಿಯಲ್ಲಿರುವ ಶೇ 56 ಮೀಸಲಾತಿ ಷೆಡ್ಯೂಲ್ 9ರಲ್ಲಿ ನಮೂದಾಗಿಲ್ಲ, ಕಾನೂನು ಊರ್ಜಿತವಾಗಿಲ್ಲ, ರಾಜ್ಯ ಹೈಕೋರ್ಟ್ ತಡೆ ಕೊಟ್ಟಿದೆ, 2023–24, 2024–25ರಲ್ಲಿ ಪರಿಶಿಷ್ಠ ಜಾತಿ, ವರ್ಗ, ಹಿಂದುಳಿದ ಮತ್ತು ಅಲ್ಪಸಂಖ್ಯಾತರು ಶೇ 56 ಮೀಸಲಾತಿ ಅಡಿಯಲ್ಲಿ ಉನ್ನತ ವಿದ್ಯಾಭ್ಯಾಸಕ್ಕೆ ಪ್ರವೇಶ ಮತ್ತು ಉದ್ಯೋಗದಲ್ಲಿ ಬಡ್ತಿ ಪಡೆದುಕೊಂಡಿದ್ದಾರೆ. ಈಗ ರಾಜ್ಯ ಹೈಕೋರ್ಟ್ ತಡೆ ನೀಡಿರುವುದರಿಂದ ಈ ಸಮುದಾಯಗಳಿಗೆ ಅನ್ಯಾಯವಾಗಿದೆ. ಸಂವಿಧಾನದ 9ನೇ ವಿಧಿಯಲ್ಲಿ ಸೇರಿಸಿದ್ದರೆ, ಬಹುಶಃ ಹೈಕೋರ್ಟ್‌ನಿಂದ ತಡೆಗೆ ಅವಕಾಶವಾಗುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟರು.

**ಸಂವಿಧನದ 9ನೇ ವಿಧಿಯಲ್ಲಿ ಸೇರಿಸಬೇಕು ಏಕೆ?**

ಸರ್ವೋಚ್ಚ ನ್ಯಾಯಾಲದಯದ ತೀರ್ಪಿನಂತೆ ಒಟ್ಟು ಮೀಸಲಾತಿ ಶೇ 50 ಮೀರುವಂತಿಲ್ಲ. ಆದರೆ ಮೀಸಲಾತಿ ಹೆಚ್ಚಳಕ್ಕೆ ಮಾರ್ಗದರ್ಶನಗಳಿಗೆ ಅನುಗುಣವಾಗಿ ಏರಿಸ ಬಹುದು ಎಂದು ತೀರ್ಪಿನಲ್ಲಿದೆ. ಆದರೆ ಈ ಹೆಚ್ಚಳ ಸಂವಿಧನದ 9ನೇ ವಿಧಿಯಲ್ಲಿ ಸೇರಿಸುವುದು ಅವಶ್ಯಕ ವಾಗಿದೆ. ಬೊಮ್ಮಾಯಿ ಸರ್ಕಾರದಲ್ಲಿ ಅಂದಿನ ಮುಖ್ಯ ಕಾರ್ಯದರ್ಶಿಗಳು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು 9ನೇ ವಿಧಿಯಲ್ಲಿ ಸೇರಿಸುವಂತೆ ಮನವಿ ಮಾಡಿದ್ದರು. ಆದರೆ ಕೇಂದ್ರ ಸರ್ಕಾರ ಈ ಮನವಿಯನ್ನು ತಿರಸ್ಕರಿಸಲು ಇಲ್ಲ, ಪುರಸ್ಕರಿಸಲೂ ಇಲ್ಲ. ಇತ್ತ ರಾಜ್ಯದಲ್ಲಿ ಮೂರು ವರ್ಷಗಳ ಕಾಲ ವಿದ್ಯಾಭ್ಯಾಸದಲ್ಲಿ ಮೀಸಲಾತಿಯ ಅವಕಾಶ ಪಡೆದಿದ್ದರಿಂದ ಈ ಸಮುದಾಯದ ವಿದ್ಯಾರ್ಥಿಗಳಿಗೆ ಉನ್ನತ ವಿದ್ಯಾಭ್ಯಾಸಕ್ಕೆ ಅನುಕೂಲವಾಗಿದೆ. ಆದರೆ ಇತ್ತೀಚೆಗೆ ರಾಜ್ಯ ಹೈಕೋರ್ಟ್ ಮೀಸಲಾತಿ ಪ್ರಮಾಣದ ಹೆಚ್ಚಳಕ್ಕೆ ತಡೆಕೊಟ್ಟಿರುವುದರಿಂದ ಸುಮಾರು 4 ಕೋಟಿ ಕನ್ನಡಿಗರಿಗೆ ಅನ್ಯಾಯವಾಗುತ್ತಿದೆ. ಹೀಗಾಗಿ ತಾವು ಷೆಡ್ಯೂಲ್ 9ರಲ್ಲಿ ಸೇರಿಸುವಂತೆ ಒತ್ತಾಯಿಸಿತ್ತಿರುವುದಾಗಿ ವಿವರಿಸಿದರು.

**ತಡೆಯಾಜ್ಞೆ ತೆರವಿಗೆ ಒತ್ತಾಯ**

ಇದೇ ವಿಚಾರದಲ್ಲಿ ತಾವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾಗಿ, ನ್ಯಾಯಾಲಯ ವಿಧಿಸಿರುವ ತಡೆಯ ತೆರವಿಗೆ ಒತ್ತಾಯಿಸಿರುವುದಾಗಿ ತಿಳಿಸಿದರು. ಇದರೊಟ್ಟಿಗೆ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ಪತ್ತೆ ಹಚ್ಚಿ ರದ್ದು ಮಾಡಬೇಕು, 9ನೇ ವಿಧಿಯಲ್ಲಿ ಸೇರಿಸಲು ಸರ್ವ ಪಕ್ಷಗಲ ನಿಯೋಗವನ್ನು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲು ಕರೆದೊಯ್ಯಬೇಕು ಎಂದು ಒತ್ತಾಯಿಸಲಾಗಿದೆ. ಮುಖ್ಯಮಂತ್ರಿಗಳು ಸಹ ಇದಕ್ಕೆ ಸ್ಪಂದಿಸಿದ್ದಾರೆ. ಅವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕು. ತಕ್ಷಣ ಕಾರ್ಯ ಪ್ರವೃತ್ತರಾಗಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಯುವ ಘಟಕದ ರಾಜ್ಯಾಧ್ಯಕ್ಷ ಟಿ.ಆರ್.ತುಳಸೀರಾಂ, ಜಿಲ್ಲಾಧ್ಯಕ್ಷ ಅಂಜನಾಪುರ ವಾಸು, ಮಹಿಳಾ ವಿಭಾಗದ ಅಧ್ಯಕ್ಷೆ ಜಯಶ್ರೀ, ವಿಶ್ರಾಂತ ಉಪಕುಲಪತಿ ಶ್ರೀರಾಮುಲು, ಕನಕಪುರ ತಾಲ್ಲೂಕು ಘಟಕದ ಅಧ್ಯಕ್ಷ ಡಿ.ಶ್ರೀನಿವಾಸ್, ಹಾರೋಹಳ್ಳಿ ತಾಲ್ಲೂಕು ಅಧ್ಯಕ್ಷ ಮುನಿರಾಜು, ಪ್ರಮುಖರಾದ ರಮೇಶ್, ಕೊತ್ತಿಪುರ ಆನಂದ, ಕೃಷ್ಣಮೂರ್ತಿ ಇರುಳಿಗ, ಎಸ್.ಕೃಷ್ಣಪ್ಪ, ಎಚ್.ಹುಮಂತು, ಡಾ.ಶಾರದ ಬಡಿಗೇರಿ, ಶಿವರಾಜಕುಮಾರ್ ಮುಂತಾದವರು ಉಪಸ್ಥಿತರಿದ್ದರು.



### ಎಚ್.ಡಿ.ಕುಮರಸ್ವಾಮಿ ಸರ್ಕಾರದ ಪ್ರಯತ್ನ

ಈ ಹಿಂದೆ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದ ಜೆಡಿಎಸ್ ಮತ್ತು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮೀಸಲಾತಿ ಪ್ರಮಾಣ ಹೆಚ್ಚಿಸಲು ನ್ಯಾಯಾಧೀಶ ನಾಗಮೋಹನ ದಾಸ್ ಆಯೋಗವನ್ನು ರಚಿಸಿದ್ದರು. ಈ ಆಯೋಗದ ವರದಿಯಂತೆ ಎಸ್ಸಿ ಸಮುದಾಯಕ್ಕೆ ಶೇ 17.1 ಮತ್ತು ಎಸ್ಟಿ ಸಮುದಾಯಕ್ಕೆ ಶೇ 7 ಮೀಸಲಾತಿ, ಹಿಂದುಳಿದ ವರ್ಗಗಳಿಗೆ ಶೇ 32 ಮೀಸಲಾತಿ ನೀಡಲು ಶಿಪಾರಸ್ಸು ಮಾಡಿತ್ತು. ತದನಂತರ ಅಧಿಕಾರಕ್ಕೆ ಬಂದ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಸುಭಾಷ್ ಆದಿ ಆಯೋಗ ರಚಿಸಿತು. ಈ ಆಯೋಗವು ಸಹ ನಾಗಮೋಹನ ದಾಸ್ ಆಯೋಗ ನೀಡಿದ್ದ ಶಿಪಾರಸ್ಸುಗಳ ಜಾರಿಗೆ ತಿಳಿಸಿತ್ತು. ಹೀಗಾಗಿ ಸರ್ವ ಪಕ್ಷಗಳ ಸಹಕಾರದಲ್ಲಿ 2022ರಲ್ಲಿ ಕರ್ನಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ 2022 ಜಾರಿಗೆ ಬಂದಿದೆ. ಹೀಗೆ ಜಾರಿಯಾದ ನಿಯಮದಂತೆ ಎಸ್ಸಿಗಳಿಗೆ ಇದ್ದ ಶೇ15 ಮೀಸಲಾತಿ 17.1ಕ್ಕೇರಿತು. ಪರಿಶಿಷ್ಠ ವರ್ಗಗಳಿಗೆ ಇದ್ದ ಶೇ 3 ಮೀಸಲಾತಿ ಶೇ 7ಕ್ಕೇರಿ ಈ ಸಮುದಾಯಗಳಿಗೆ ಉಪಯುಕ್ತವಾಯಿತು ಎಂದರು.

### ಬಿಜೆಪಿ ಸಂಸದರು ಪ್ರಧಾನಿಗಳನ್ನು ಒತ್ತಾಯಿಸಲಿ

ರಾಜ್ಯ ಹೈಕೋರ್ಟ್ ತಡೆಯಾಜ್ಞೆ ನೀಡಿದಾಕ್ಷಣ ರಾಜ್ಯ ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಮುಖ್ಯಮಂತ್ರಿ ಬೊಮ್ಮಾಯಿ, ಬಿಜೆಪಿ ನಾಯಕ ನಾರಾಯಣ ಸ್ವಾಮಿ ಅವರು ರಾಜ್ಯ ಕಾಂಗ್ರೆಸ್ ಸರ್ಕಾರದ ಮೇಲೆ ಗೂಬೆ ಕೂರಿಸಲು ಯತ್ನಿಸುತ್ತಿದ್ದಾರೆ. ಎಸ್ಸಿಗಳಿಗೆ ಶೇ 17.1 ಮತ್ತು ಎಸ್ಟಿಗಳಿಗೆ ಶೇ 7 ಮೀಸಲಾತಿ ನೀಡಿದ್ದು ಬಿಜೆಪಿ ಸರ್ಕಾರ, ಇದು ಅವರ ಕೂಸು, ಹೀಗಾಗಿ ರಾಜ್ಯದಿಂದ ಆಯ್ಕೆಯಾಗಿರುವ ಬಿಜೆಪಿ ಸಂಸದರೇ ಪ್ರಧಾನಿ ಮೋದಿ ಅವರ ಮೇಲೆ ಒತ್ತಡ ತಂದು ಷೆಡ್ಯೂಲ್ 9ರಲ್ಲಿ ನಮೂದಿಸುವಂತೆ ಒತ್ತಾಯಿಸಬೇಕು. ಆಗ ಮಾತ್ರ ಯಾವ ಸಮಸ್ಯೆಯೂ ಇಲ್ಲದೆ ಮೀಸಲಾತಿಯ ಲಾಭವನ್ನು ಅರ್ಹರು ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದರು.

### ದೇವೇಗೌಡರ ಬಗ್ಗೆ ಶ್ಲಾಘನೆ

ಮೀಸಲಾತಿ ವಿಚಾರದಲ್ಲಿ ಮಾಜಿ ಮುಖ್ಯಮಂತ್ರಿಗಳು, ಮಾಜಿ ಪ್ರಧಾನಿಗಳೂ ಆಗಿರುವ ಹೆಚ್.ಡಿ.ದೇವೇಗೌಡರು ಸ್ಪಂದಿಸಿದ್ದರು. ಚಂದ್ರಶೇಖರ್ ಅವರು ಪ್ರಧಾನಿಯಾಗಿದ್ದ ವೇಳೆ ಈ ವಿಚಾರಗಳನ್ನು ಪ್ರಸ್ತಾಪಿಸಿದ್ದರಿಂದ ಮೀಸಲಾತಿ ಪ್ರಮಾಣ ಹೆಚ್ಚಿಸಲು ಸಾಧ್ಯವಾಗಿತ್ತು. ಈಗಲೂ ಹೆಚ್.ಡಿ.ದೇವೇಗೌಡರು ಮನಸ್ಸು ಮಾಡಿದರೆ 9ನೇ ಷೆಡ್ಯೂಲ್‌ನಲ್ಲಿ ರಾಜ್ಯದ ಶೇ 56 ಮೀಸಲಾತಿ ನಮೂದಾಗುತ್ತದೆ. ಹೆಚ್.ಡಿ.ದೇವೇಗೌಡರು ಸಹ ಈ ವಿಚಾರದಲ್ಲಿ ಮನಸ್ಸು ಮಾಡಬೇಕು ಎಂದು ಮನವಿ ಮಾಡಿದರು.

---

**ಮೊದಲ ಪುಟದಿಂದ**

## ತವರಲ್ಲಿ ಸಿಎಂ ಸಿದ್ದರಾಮಯ್ಯ ರೌಂಡ್ಸ್

ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ವೀಕ್ಷಿಸಿದರು. ಇಂತಹ ರಸ್ತೆಗಳು ಸುಮಾರು 30 ವರ್ಷಗಳ ವರೆಗೆ ಸಂಚಾರಯೋಗ್ಯವಾಗಿರುತ್ತವೆ. ಮೊದಲನೇ ಹಂತದಲ್ಲಿ 4 ಪಥವಿರುವ ರಸ್ತೆಯಲ್ಲಿ ಕಾಮಗಾರಿ ಕೈಗೊಳ್ಳಲಾಗಿದ್ದು, ಸಾಂಸ್ಕೃತಿಕ, ಪಾರಂಪರಿಕ ಮತ್ತು ಪ್ರವಾಸಿ ತಾಣವಾಗಿದ್ದು, ಇತ್ತೀಚಿನ ದಿನಗಳಲ್ಲಿ ನಗರವು ವೇಗವಾಗಿ ಬೆಳೆಯುತ್ತಿದೆ. ಪ್ರವಾಸೋದ್ಯಮ ಬೆಳವಣಿಗೆಗಳನ್ನು ಉತ್ತೇಜಿಸಲು ನಾಗರೀಕರಿಗೆ ಹಾಗೂ ಪ್ರವಾಸಿಗರಿಗೆ ಉತ್ತಮ ರಸ್ತೆ ಸಂಚಾರ ವ್ಯವಸ್ಥೆಗೆ ಅವಕಾಶ ಕಲ್ಪಿಸಲು ಕಾಮಗಾರಿ ನಡೆಯುತ್ತಿದೆ. ಬಳಿಕ ಮಹಾರಾಣಿ ಕಾಲೇಜಿನ ವಿದ್ಯಾರ್ಥಿ ನಿಲಯಗಳಿಗೆ ಸೂಕ್ತ ಸ್ಥಳಾವಕಾಶವಿರದ ಕಾರಣ, ಪ್ರಸ್ತುತ 1400 ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೊಸ ವಿದ್ಯಾರ್ಥಿ ನಿಲಯವನ್ನು ನಿರ್ಮಿಸಲಾಗುತ್ತಿದೆ ಎಂದರು. ಸಮಾಜ ಕಲ್ಯಾಣ ಇಲಾಖೆ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್ ಗೌಡ, ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ಧರಾಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಜಿ.ಪಂ.ಸಿಇಓ ಎಸ್.ಯುಕೇಶ್ ಕುಮಾರ್, ಸಿಎಂ ವಿಶೇಷ ಕರ್ತವ್ಯಾಧಿಕಾರಿ ರಾಮಯ್ಯ ಸೇರಿ ಅನೇಕರು ಉಪಸ್ಥಿತರಿದ್ದರು.

**129ಕೋಟಿ ರೂ. ಬಸ್ ನಿಲ್ದಾಣದ ಕಾಮಗಾರಿ ಪರಿಶೀಲನೆ**

ಮೈಸೂರು: 129ಕೋಟಿ ರೂ ವೆಚ್ಚದ ಮೈಸೂರು ನಗರದ ಬನ್ನಿಮಂಟಪದಲ್ಲಿನ ನೂತನ ಬಸ್ ನಿಲ್ದಾಣದ ಕಾಮಗಾರಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪರಿಶೀಲನೆ ನಡೆಸಿದರು.

ಬಸ್ ನಿಲ್ದಾಣದ ನೆಲಮಾಳಿಗೆ (10,538 ಚ.ಮೀ) ಇಲ್ಲಿ ಕೇವಲ ವಾಹನ ನಿಲುಗಡೆಗೆ ಆದ್ಯತೆ ನೀಡಲಾಗಿದ್ದು, ಏಕಕಾಲಕ್ಕೆ 4,000 ದ್ವಿಚಕ್ರ ವಾಹನಗಳು ಮತ್ತು 200 ಕಾರುಗಳ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ನೆಲಮಹಡಿ (18,370 ಚ.ಮೀ): ಇದು ಬಸ್ ಟರ್ಮಿನಲ್ ಪ್ರಮುಖ ಭಾಗವಾಗಿದ್ದು, ಪ್ರಯಾಣಿಕರ ಆಗಮನ ಮತ್ತು ನಿರ್ಗಮನ ದ್ವಾರಗಳು, ಟಿಕೆಟ್ ಬುಕ್ಕಿಂಗ್ ಕೌಂಟರ್ ಹಾಗೂ ಸುಂದರವಾದ ಗಾರ್ಡನ್ ಮತ್ತು ಲ್ಯಾಂಡ್ಸ್ಕೇಪಿಂಗ್ ವ್ಯವಸ್ಥೆ ಇರಲಿದೆ. ಮೊದಲನೇ ಮಹಡಿ (8,478 ಚ.ಮೀ): ಈ ಭಾಗವು ಸಂಪೂರ್ಣವಾಗಿ ಸಿಬ್ಬಂದಿ ವಿಶ್ರಾಂತಿ ಕೊಠಡಿಗಳು, ಡಾರ್ಮಿಟರಿ ಮತ್ತು ಕಛೇರಿಗಳಿಗಾಗಿ ಮೀಸಲಿರಿಸಲಾಗಿದೆ. ನಿಲ್ದಾಣಕ್ಕೆ ಬರುವ ಸಾರ್ವಜನಿಕರಿಗಾಗಿ ಆಧುನಿಕ ಸೌಕರ್ಯಗಳನ್ನು ಅಳವಡಿಸಲಾಗುತ್ತಿದೆ. ಒಟ್ಟು 75 ಬಸ್ ಅಂಕಣಗಳು ಲಭ್ಯವಿದ್ದು, 35 ಬಸ್‌ಗಳ ನಿಲುಗಡೆಗೆ ಪ್ರತ್ಯೇಕ ಸ್ಥಳಾವಕಾಶ ಕಲ್ಪಿಸಲಾಗಿದೆ. ಮಹಿಳೆಯರಿಗಾಗಿ ಪ್ರತ್ಯೇಕ ವಿಶ್ರಾಂತಿ ಗೃಹ ಮತ್ತು ಸಾಮಾನ್ಯ ಪ್ರಯಾಣಿಕರಿಗಾಗಿ ವಿಶಾಲವಾದ ಆಸನ ವ್ಯವಸ್ಥೆ ಇರಲಿದೆ.

ಮಹಿಳೆಯರು ಮತ್ತು ಪುರುಷರಿಗಾಗಿ ತಲಾ 6 ಬ್ಲಾಕ್‌ಗಳನ್ನು ಶೌಚಾಲಯಗಳಲ್ಲದೆ, ವಿಕಲಚೇತನರು ಮತ್ತು ತೃತೀಯ ಲಿಂಗಿಗಳಿಗಾಗಿ ಪ್ರತ್ಯೇಕ ಶೌಚಾಲಯಗಳ ವ್ಯವಸ್ಥೆ ಮಾಡಲಾಗಿದೆ. ಸುಲಭ ಓಡಾಟಕ್ಕಾಗಿ 4 ಲಿಫ್ಟ್ ಗಳು ಮತ್ತು 2 ಎಲಿವೇಟರ್‌ಗಳು, ಜ್ಞಾನದಾಹಿಗಳಿಗಾಗಿ ಗ್ರಂಥಾಲಯ, ಉಪಹಾರ ಗೃಹ ಮತ್ತು ನಿರಂತರ ಮಾಹಿತಿ ನೀಡಲು ವಿಚಾರಣಾ ಕೇಂದ್ರಗಳು ಕಾರ್ಯನಿರ್ವಹಿಸಲಿವೆ. ನಿಲ್ದಾಣದ ಒಳಭಾಗದಲ್ಲಿ ಪ್ರಯಾಣಿಕರಿಗೆ ಬಿಸಿಲು ಮತ್ತು ಮಳೆಯಿಂದ ರಕ್ಷಣೆ ನೀಡಲು ಮೇಲ್ಭಾಗದಲ್ಲಿ ಮುಚ್ಚಳ ಹೊದಿಕೆ ವ್ಯವಸ್ಥೆ ಮಾಡಲಾಗುತ್ತಿದೆ. ನಿಲ್ದಾಣದ ಸಂಪೂರ್ಣ ನಿರ್ವಹಣೆಗಾಗಿ ನಿಲ್ದಾಣಾಧಿಕಾರಿಗಳ ಕೊಠಡಿ ಮತ್ತು ಪ್ರತ್ಯೇಕ ಕಛೇರಿ ಸ್ಥಳಗಳನ್ನು ನಿಗದಿಪಡಿಸಲಾಗಿದೆ.

ಪ್ರಯಾಣಿಕರ ಅನುಕೂಲಕ್ಕಾಗಿ ಈ ನಿಲ್ದಾಣದಲ್ಲಿ ಉನ್ನತ ದರ್ಜೆಯ ಹವಾನಿಯಂತ್ರಿತ ವೇಯ್ಟಿಂಗ್ ಹಾಲ್ಗಳನ್ನು ನಿರ್ಮಿಸಲಾಗುತ್ತಿದೆ. ಇದು ವಿಮಾನ ನಿಲ್ದಾಣಗಳ ಲಾಂಜ್ ಮಾದರಿಯಲ್ಲಿ ಇರಲಿದ್ದು, ಸುದೀರ್ಘ ಪ್ರಯಾಣ ಮಾಡುವವರಿಗೆ ಆರಾಮದಾಯಕ ಅನುಭವ ನೀಡಲಿದೆ. ಇದರೊಂದಿಗೆ ಸಾಮಾನ್ಯ ಕಾಯುವಿಕೆಗಾಗಿ ವಿಶಾಲವಾದ ಹಾಲ್ ಹಾಗೂ ಉಚಿತ ಮೊಬೈಲ್ ಚಾರ್ಜಿಂಗ್ ಪಾಯಿಂಟ್ಗಳ ವ್ಯವಸ್ಥೆ ಇರಲಿದೆ.

ಅಂತರ–ರಾಜ್ಯ ಬಸ್ ಗಳು ಮತ್ತು ನಗರ ಸಾರಿಗೆ ಬಸ್ಗಳಿಗಾಗಿ ಪ್ರತ್ಯೇಕ ಅಂಕಣಗಳ ವ್ಯವಸ್ಥೆ. ಪ್ರಯಾಣಿಕರು ಗೊಂದಲಕ್ಕೀಡಾಗದಂತೆ ಪ್ರತಿ ಅಂಕಣಕ್ಕೂ ಸ್ಪಷ್ಟ ಮಾರ್ಗಸೂಚಿಗಳು, ನಿಲ್ದಾಣದ ಆವರಣದಲ್ಲೇ ಆಟೋ ಮತ್ತು ಟ್ಯಾಕ್ಸಿಗಳಿಗೆ ಸುಸಜ್ಜಿತ ನಿಲುಗಡೆ ನಿಲ್ದಾಣ. ಪ್ರವಾಸಿ ಮಾಹಿತಿ ಕೇಂದ್ರ ಪ್ರವಾಸಿಗರಿಗೆ ಮಾರ್ಗದರ್ಶನ ನೀಡಲು ವಿಶೇಷ ಮಾಹಿತಿ ಕೇಂದ್ರ ಮತ್ತು ಮುಂಗಡ ಕಾಯ್ದಿರಿಸುವಿಕೆ ಕೌಂಟರ್‌ಗಳು. ಈ ಯೋಜನೆಯು ಕೇವಲ ಸಾರಿಗೆಗೆ ಸೀಮಿತವಾಗದೆ, ಸಾರ್ವಜನಿಕರಿಗೆ ಒಂದು ಸುಸಜ್ಜಿತ ವಾಣಿಜ್ಯ ಮತ್ತು ಸೇವಾ ಕೇಂದ್ರವಾಗಿ ಮಾರ್ಪಡಲಿದೆ ಎಂದು ವಿವರಿಸಿದರು.

---

**ಮೊದಲ ಪುಟದಿಂದ**

## ‘ರಿಯಲ್ ಎಸ್ಟೇಟ್’ ಕೆಲಸ

ಇಡಲಿ ಎಂದು ಸವಾಲು ಹಾಕಿದರು. ಬಿಡದಿ ರೈತರು, ರೈತರೇ ಅಲ್ಲ ಎಂದು ಉಪ ಮುಖ್ಯಮಂತ್ರಿ ಹೇಳುತ್ತಿದ್ದಾರೆ. ಜತೆಗೆ ಶೇ 80ರಷ್ಟು ರೈತರು ಒಪ್ಪಿಗೆ ನೀಡಿದ್ದಾರೆ ಎಂದೂ ಹೇಳುತ್ತಿದ್ದಾರೆ. ರೈತರೇ ಇಲ್ಲ ಎಂದಾದಮೇಲೆ ಶೇ 80ರಷ್ಟು ರೈತರು ಒಪ್ಪಿಗೆ ನೀಡಿದ್ದು ಹೇಗೆ? ಅವರ ತಮ್ಮ ಬಮೂಲ್ ಅಧ್ಯಕ್ಷನಾಗಿದ್ದು, ಈ ಎಂಟು ಹಳ್ಳಿಗಳಲ್ಲಿ ಎಷ್ಟು ಹಾಲು ಉತ್ಪಾದನೆ ಆಗುತ್ತದೆ ಎಂಬುದನ್ನು ವರದಿ ತರಿಸಿಕೊಂಡು ನೋಡಲಿ. ಎಷ್ಟು ಮಂದಿ ರೈತರು ಇದ್ದಾರೆ ಎಂಬುದು ಗೊತ್ತಾಗುತ್ತದೆ ಎಂದರು. ಬಿಡದಿ ಟೌನ್‌ಶಿಪ್ ಯೋಜನೆಯಲ್ಲಿ ಸಾವಿರಾರು ಎಕರೆ ಭೂಮಿ ಕಬಳಿಕೆ ಆಗುತ್ತಿದೆ. ಅಲ್ಲದೆ, ಸಾಲು ಸಾಲು ಅಕ್ರಮಗಳು ನಡೆಯುತ್ತಿವೆ ಎಂದು ಕುಮಾರಸ್ವಾಮಿ ಆರೋಪಿಸಿದರು..

ಬಿಡದಿಯ ಈಗಲ್‌ಟನ್ ರೆಸಾರ್ಟ್ ಸುತ್ತಮುತ್ತಲಿನ ಗ್ರಾಮಗಳನ್ನೇ ಟೌನ್‌ಶಿಪ್‌ಗೆ ಆಯ್ಕೆ ಮಾಡಿಕೊಳ್ಳಲಾಗಿದೆ. ಈ ರೆಸಾರ್ಟ್ ಒಟ್ಟು 77 ಎಕರೆ ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿತ್ತು. ಆ ಜಮೀನಿಗೆ ತಲಾ ಎಕರೆಗೆ 12 ಕೋಟಿಯಂತೆ ಸರ್ಕಾರಕ್ಕೆ 980 ಕೋಟಿ ಪಾವತಿ ಮಾಡಬೇಕು ಎಂದು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಯಿತು. 10 ವರ್ಷಗಳ ಹಿಂದೆ ಎಕರೆಗೆ 12 ಕೋಟಿ ನಿಗದಿ ಮಾಡಿ, ಈಗ ಪಕ್ಕದ ಜಮೀನಿಗೆ ಎಕರೆಗೆ 2 ಕೋಟಿ ನಿಗದಿ ಮಾಡಿದ್ದಾರೆ. ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

### ಸಂಪುಟ ಪುನಾರಚನೆ ತಪ್ಪೇನು?

ಒಳ್ಳೆಯ ಕೆಲಸ ಮಾಡು ಅಂತ ಸಿಎಂ, ಡಿಸಿಎಂ ಹಾಗೂ ಮಂತ್ರಿಗಳಿಗೆ ಹೇಳುತ್ತದೆ. ಹೈಕಮಾಂಡ್ ಹೇಳುವ ತನಕ ನಾವು ಅಧಿಕಾರದಲ್ಲಿರುತ್ತೇವೆ. ಇಲ್ಲ ಎಂದರೆ ಸಾಮಾನ್ಯ ಶಾಸಕರಾಗಿರುತ್ತೇವೆ ಎಂದರು.

### ಸಂಪುಟ ಪುನಾರಚನೆ ಅಗತ್ಯ

ಆದರೆ, ಪ್ರಧಾನಿಯವರ ಮಿತ ಬಳಕೆ ಹೇಳಿಕೆ ಸರಿಯಲ್ಲ. ಇದೊಂದು ತಾತ್ಕಾಲಿಕ ಪರಿಹಾರ. ಸದ್ಯ ಈ ಪರಿಸ್ಥಿತಿಯಲ್ಲಿ ಪ್ರಧಾನಿ ಬೇರೆ ದೇಶಗಳ ಜೊತೆ ಮಾತನಾಡಬೇಕು ಎಂದಿದ್ದಾರೆ.

### ಮೋದಿಗೂ ರಾಜ್ಯಕ್ಕೂ ಏನು ಸಂಬಂಧ?

ಅದಕ್ಕೂ ಏನು ಸಂಬಂಧ ಎಂದು ಪ್ರಶ್ನಿಸಿದರು.

ಇಂದಿರಾ ಗಾಂಧಿ ಕಾಲದ ಪರಿಸ್ಥಿತಿ ಬೇರೆ, ಇಂದಿನ ಪರಿಸ್ಥಿತಿಯೇ ಬೇರೆ. ಅಂದು ಬರಗಾಲವಿತ್ತು, ಇಂದಿನ ಪರಿಸ್ಥಿ ತಿಗೆ ಅಂದಿನ ಹೇಳಿಕೆ

ತಾಳೆಯಾಗುವುದಿಲ್ಲ. ರಾಜಕೀಯದಲ್ಲಿ ಯಾರೂ ಶಾಶ್ವತ ಅಲ್ಲ, ವಾಸ್ತವ ಅರಿಯಲಿ, ಪ್ರಧಾನಿ ಮೋದಿ ಆಕಾಶದಿಂದ ಇಳಿದು ಮಾತನಾಡಲಿ, ಭೂಮಿಯ ಮೇಲಿದ್ದು ಹೇಳಿಕೆ ನೀಡಲಿ ಎಂದರು.

### ‘ವರ್ಕ್ ಫ್ರಮ್ ಹೋಮ್’

ಎಂದು ಸರ್ಕಾರ ಸೂಚಿಸಿದೆ. ವಾರದಲ್ಲಿ ಒಂದು ದಿನ ವಾಹನ ರಹಿತ ದಿನವನ್ನು ಆಚರಿಸಲು ಸರ್ಕಾರ ಸಾರ್ವಜನಿಕರಿಗೆ ಮನವಿ ಮಾಡಿದೆ. ದೆಹಲಿಯಲ್ಲಿ ಮುಂದಿನ ಆರು ತಿಂಗಳವರೆಗೆ ಯಾವುದೇ ಹೊಸ ಪೆಟ್ರೋಲ್, ಡೀಸೆಲ್ ಅಥವಾ ಎಲೆಕ್ಟ್ರಿಕ್ ವಾಹನ ಖರೀದಿ ಮಾಡುವಂತಿಲ್ಲ ಎಂದು ಸರ್ಕಾರ ತಿಳಿಸಿದೆ. ಸರ್ಕಾರಿ ನೌಕರರಿಗೆ ಸಾರಿಗೆ ಭತ್ಯೆಯನ್ನು ಶೇ.10ರಷ್ಟು ಹೆಚ್ಚಿಸಲಾಗುವುದು ಎಂದು ಸರ್ಕಾರ ತಿಳಿಸಿದೆ.

---

**ಮೊದಲ ಪುಟದಿಂದ**

## 3ನೇ ಹಂತದ ಎಸ್‌ಐಆರ್

ಪ್ರದೇಶ ಹಾಗೂ ಜಮ್ಮು ಮತ್ತು ಕಾಶ್ಮೀರ, ಕೇಂದ್ರಾಡಳಿತ ಪ್ರದೇಶ ಲಡಾಕ್ ಅನ್ನು ಹೊರತುಪಡಿಸಿ ದೇಶದ ಬಹುತೇಕ ಭಾಗಗಳಲ್ಲಿ ಈ ಹಂತದ ಪರಿಷ್ಕರಣೆ ನಡೆಯಲಿದೆ. ಹಿಮ ಪ್ರದೇಶಗಳಲ್ಲಿ ಹವಾಮಾನ ಪರಿಸ್ಥಿತಿ ಹಾಗೂ ನಡೆಯುತ್ತಿರುವ ಜನಗಣತಿ ಕಾರ್ಯಾಚರಣೆಗಳ ಹಿನ್ನೆಲೆಯಲ್ಲಿ ಆ ಪ್ರದೇಶಗಳ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು ಎಂದು ಆಯೋಗ ತಿಳಿಸಿದೆ. ಈ ಅಭಿಯಾನ ನಡೆಯಲಿರುವ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ರಾಜಧಾನಿ ದೆಹಲಿ, ಒಡಿಶಾ, ಮಿಜೋರಾಂ, ಸಿಕ್ಕಿಂ, ಉತ್ತರಾಖಂಡ, ಆಂಧ್ರ ಪ್ರದೇಶ, ಅರುಣಾಚಲ ಪ್ರದೇಶ, ಹರ್ಯಾಣ, ಚಂಡೀಗಢ, ತೆಲಂಗಾಣ, ಪಂಜಾಬ್, ಕರ್ನಾಟಕ, ಮೇಘಾಲಯ, ಮಹಾರಾಷ್ಟ್ರ, ಜಾರ್ಖಂಡ್, ನಾಗಾಲ್ಯಾಂಡ್, ತ್ರಿಪುರಾ ಹಾಗೂ ದಾದ್ರಾ ಮತ್ತು ನಗರ್ ಹವೇಲಿ, ಡಿಯು ಡಾಮನ್ ಸೇರಿವೆ. ಚುನಾವಣಾ ಆಯೋಗದ ಮಾಹಿತಿ ಪ್ರಕಾರ, ಈ ಹಂತದಲ್ಲಿ 3.94 ಲಕ್ಷಕ್ಕಿಂತ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಇದಕ್ಕೂ ಮೊದಲು ನಡೆದ ಮೊದಲ ಎರಡು ಹಂತಗಳಲ್ಲಿ 13 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ 59 ಕೋಟಿಗೂ ಹೆಚ್ಚು ಮತದಾರರನ್ನು ಒಳಗೊಂಡ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಂಡಿತ್ತು. ಅದರಲ್ಲಿ 6.3 ಲಕ್ಷಕ್ಕೂ ಹೆಚ್ಚು ಃಐಔಗಳು ಹಾಗೂ 9.2 ಲಕ್ಷ ಃಐಂ ಸಹಕರಿಸಿದ್ದರು ಎಂದು ಆಯೋಗ ತಿಳಿಸಿದೆ. ಈ ಪರಿಷ್ಕರಣೆ ಪ್ರಕ್ರಿಯೆಯನ್ನು ಹಲವು ಹಂತಗಳಲ್ಲಿ ರೂಪಿಸಲಾಗಿದ್ದು, ತರಬೇತಿ, ಎಣಿಕೆ, ಕರಡು ಪಟ್ಟಿ ಪ್ರಕಟಣೆ, ಆಕ್ಷೇಪಣೆ ಮತ್ತು ದೂರುಗಳ ಪರಿಶೀಲನೆ, ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮುಂತಾದ ಹಂತಗಳನ್ನು ಒಳಗೊಂಡಿದೆ.

ಇದಕ್ಕೂ ಮುನ್ನ ಬಿಹಾರ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ, ಪುದುಚೇರಿ, ಉತ್ತರ ಪ್ರದೇಶ, ರಾಜಸ್ಥಾನ, ಮಧ್ಯಪ್ರದೇಶ, ಗುಜರಾತ್, ಛತ್ತೀಸ್‌ಗಢ, ಗೋವಾ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪಗಳುಗಳಲ್ಲಿ ಈ ವಿಶೇಷ ತೀವ್ರ ಪರಿಷ್ಕರಣೆ ಪೂರ್ಣಗೊಂಡಿದೆ. ಇದಲ್ಲದೆ ಅಸ್ಸಾಂನಲ್ಲಿ ಪ್ರತ್ಯೇಕ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯನ್ನೂ ನಡೆಸಲಾಗಿದೆ ಎಂದು ಆಯೋಗ ತಿಳಿಸಿದೆ.

---

**ಮೊದಲ ಪುಟದಿಂದ**

## ನೀಟ್ ರದ್ದು: ಕೇಂದ್ರದ ದ್ರೋಹ

ಬರೆದಿದ್ದರು. ಪೋಷಕರು ತಮ್ಮ ಮಕ್ಕಳ ಭವಿಷ್ಯಕ್ಕಾಗಿ ತರಬೇತಿ, ಪ್ರಯಾಣ ಸೇರಿದಂತೆ ಸಾಕಷ್ಟು ಖರ್ಚು ಗಳನ್ನು ಮಾಡಿದ್ದರು. ಆದರೆ ಕೇಂದ್ರದ ಒಂದು ನಿರ್ಧಾರ ಇಡೀ ವಿದ್ಯಾರ್ಥಿ ಸಮುದಾಯವನ್ನು ಅನಿಶ್ಚಿತತೆ ಮತ್ತು ಸಂಕಷ್ಟಕ್ಕೆ ತಳ್ಳಿದೆ.

2024ರಲ್ಲೇ ನಮ್ಮ ಸರ್ಕಾರವು ನೀಟ್ ಪರೀಕ್ಷೆಯು ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತದೆ. ಶಾಲಾ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತದೆ ಮತ್ತು ದಾಖಲಾತಿ ವಿಚಾರದಲ್ಲಿ ರಾಜ್ಯಗಳ ಅಧಿಕಾರವನ್ನು ಕಸಿದುಕೊಳ್ಳುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿ, ಸದನ ನಿರ್ಣಯ ಕೈಗೊಂಡಿದ್ದೆವು. ಅಂದಿನ ನಮ್ಮ ಕಾಳಜಿ ಎಷ್ಟು ಸತ್ಯ ಮತ್ತು ಅನಿವಾರ್ಯವಾಗಿತ್ತು ಎನ್ನುವುದನ್ನು ಇಂದಿನ ಪರೀಕ್ಷಾ ರದ್ದತಿಯು ಸಾಬೀತುಪಡಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಹರಿಹಾಯ್ದಿದ್ದಾರೆ.

ನೇಮಕಾತಿ ಪರೀಕ್ಷೆಗಳಿಂದ ಹಿಡಿದು ರಾಷ್ಟ್ರೀಯ ಪ್ರವೇಶ ಪರೀಕ್ಷೆಗಳವರೆಗೆ ಪೇಪರ್ ಲೀಕ್ ಪ್ರಕರಣಗಳು ಪ್ರತಿಭಾವಂತ ವಿದ್ಯಾರ್ಥಿಗಳ ಹಿತ ರಕ್ಷಣೆಯಲ್ಲಿ ನರೇಂದ್ರ ಮೋದಿ ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿವೆ. ಹೊಣೆ ಹೊರಬೇಕಾದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಮಾಧ್ಯಮಗಳಿಂದ ದೂರ ಉಳಿದಿದ್ದಾರೆ. ಯುವಜನತೆಯ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲದ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಸಿಎಂ ಸಿದ್ದರಾಮಯ್ಯ ಆಗ್ರಹಿಸಿದರು.

ಈ ಬಗ್ಗೆ ಪಾರದರ್ಶಕ, ಕಾಲಮಿತಿಯ ತನಿಖೆ ನಡೆಸಬೇಕು. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಬೇಕು. ಹೊಸ ಪರೀಕ್ಷಾ ವೇಳಾಪಟ್ಟಿಯ ಬಗ್ಗೆ ಕೂಡಲೇ ಸ್ಪಷ್ಟನೆ ನೀಡಬೇಕು ಮತ್ತು ಅಂತಹ ಪ್ರವೇಶ ಪರೀಕ್ಷೆಗಳನ್ನು ನಡೆಸುವ ರಾಜ್ಯಗಳ ಅಧಿಕಾರವನ್ನು ಪುನಃಸ್ಥಾಪಿಸಬೇಕು ಎಂಬುದು ನಮ್ಮ ಒತ್ತಾಯವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಪೇಪರ್ ಲೀಕ್ ನಿಂದ ತೊಂದರೆಗೀಡಾಗಿರುವ ಪ್ರತಿಯೊಬ್ಬ ವಿದ್ಯಾರ್ಥಿ ಮತ್ತು ಪೋಷಕರ ಜೊತೆ ನಾವಿದ್ದೇವೆ. ಅವರ ಪರಿಶ್ರಮಕ್ಕೆ ತಕ್ಕ ಫಲ ಸಿಗುವಂತೆ ಮಾಡುವುದು ಮತ್ತು ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸುವುದು ನಮ್ಮ ಕರ್ತವ್ಯ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

---

**ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ**

## ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸುರಕ್ಷಿತ ವಾಹನ ಚಾಲನೆಗೆ ನಾಮಫಲಕ ಅಳವಡಿಸಿ

ಚಾಮರಾಜನಗರ, ಜಿಲ್ಲಾ ವ್ಯಾಪ್ತಿಗೆ ಒಳಪಡುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಡುಬ್ಬ, ತಿರುವುಗಳು, ಕೂಡು ರಸ್ತೆಗಳ ಬಗ್ಗೆ ವಾಹನ ಚಾಲಕರು, ಸವಾರರಿಗೆ ಮಾರ್ಗದರ್ಶನ ಮಾಡುವ ನಾಮಫಲಕಗಳನ್ನು ಅಳವಡಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ಇತ್ತೀಚೆಗೆ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿದೆ. ಸುರಕ್ಷಿತ ಚಾಲನೆಗಾಗಿ ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಾಹನ ಚಾಲಕರಿಗೆ ಮಾರ್ಗದರ್ಶನ ಮಾಡುವ ಫಲಕಗಳನ್ನು ಎದ್ದು ಕಾಣುವಂತೆ ಅಳವಡಿಸಬೇಕು. ಪಟ್ಟಣದ ಹೊರ ವಲಯದ ಹೆದ್ದಾರಿಗಳಲ್ಲಿ ವಿದ್ಯುತ್ ದೀಪ ವ್ಯವಸ್ಥೆ ಇರಬೇಕು. ಸುರಕ್ಷತಾ ದೃಷ್ಟಿಯಿಂದ ಈ ಕೆಲಸ ಆದ್ಯತೆ ಮೇರೆಗೆ ಅಗಬೇಕು. ಇದರಿಂದ ಅನೇಕ ಸಮಸ್ಯೆಗಳು ತಪ್ಪಲಿವೆ ಎಂದು ತಿಳಿಸಿದರು.

ಅಪಘಾತ ಪ್ರಕರಣಗಳ ತಡೆಗಾಗಿ ಚಾಲಕರಿಗೆ ವಿಶೇಷವಾದ ತರಬೇತಿ ನೀಡಬೇಕಿದೆ. ಕೆಎಸ್‌ಆರ್ಟಿಸಿ ವತಿಯಿಂದಲೂ ಸಂಸ್ಥೆಯ ಚಾಲಕರಿಗೆ ಸುರಕ್ಷಿತ ಚಾಲನೆಗಾಗಿ ತರಬೇತಿ ಮಾರ್ಗದರ್ಶನ ಮಾಡುವ ಕಾರ್ಯಕ್ರಮಗಳನ್ನು ವ್ಯಾಪಕವಾಗಿ ಹಮ್ಮಿಕೊಳ್ಳಬೇಕು.



ಮಲೆಮಹದೇಶ್ವರಬೆಟ್ಟ ಭಾಗಕ್ಕೆ ತೆರಳುವ ಬಸ್ಸಿನ ಚಾಲಕರಿಗೆ ಜಾಗರೂಕವಾಗಿ ಚಾಲನೆ ಮಾಡಲು ಸೂಚಿಸಬೇಕು ಎಂದರು. ಬಿಳಿಗಿರಿರಂಗನ ಬೆಟ್ಟದ ರಸ್ತೆಯ ಇಕ್ಕೆಲಗಳಲ್ಲಿ ಸಣ್ಣಪುಟ್ಟ ಗುಂಡಿಗಳನ್ನು ಮುಚ್ಚಬೇಕು. ಇದರಿಂದ ವಾಹನಗಳ ಸುರಕ್ಷಿತ ಸಂಚಾರಕ್ಕೆ ಅವಕಾಶವಾಗಲಿದೆ. ಲೋಕೋಪಯೋಗಿ ಇಲಾಖೆ, ಕೆ.ಎಸ್.ಆರ್.ಟಿಸಿ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು.

ಹೆದ್ದಾರಿಗಳಲ್ಲಿ ಬರುವ ಜನಸಂದಣಿ ಗ್ರಾಮಗಳಲ್ಲಿ ರಸ್ತೆ ದಾಟುವುದರಿಂದ ಅಪಘಾತಕ್ಕೆ ಕಾರಣವಾಗುತ್ತದೆ. ಇದಕ್ಕಾಗಿ ನಿಗದಿತ ಸ್ಥಳ ಗುರುತು ಮಾಡಬೇಕು. ಎಲ್ಲೆಂದಲ್ಲಿ ರಸ್ತೆ ದಾಟದಿರಲು ರಸ್ತೆ ಬದಿಯಲ್ಲಿ ರೈಲಿಂಗ್ಸ್ ಬ್ಯಾರಿಕೇಡ್‌ಗಳನ್ನು ಹಾಕಬೇಕು. ಕೆಲವೆಡೆ ಕ್ರಾಸ್ ಬ್ಯಾರಿಯರ್ಗಳನ್ನು ಕಿತ್ತುಹಾಕಿ ರಸ್ತೆ ಸುರಕ್ಷತೆಗೆ ಅಡ್ಡಿಯಾಗುತ್ತಿರುವ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಬೇಕು ಎಂದರು.

ಗುಂಡ್ಲುಪೇಟೆ ಭಾಗದಲ್ಲಿ ಅಪಘಾತ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಇದರ ತಡೆಗಾಗಿ ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಮಿತಿಮೀರಿದ ಸಾಗಾಣಿಕೆ ವಾಹನಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಆರ್.ಟಿ.ಓ, ಪೊಲೀಸ್, ಗಣಿ ಮತ್ತು ಭೂ ವಿಜ್ಞಾನ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ತಂಡ ಜಂಟಿಯಾಗಿ ಕಾರ್ಯಾಚರಣೆ ನಡೆಸಬೇಕು. ಯಾವುದೇ ಅಕ್ರಮಗಳಿಗೆ ಅವಕಾಶವಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ನಗರ, ಪಟ್ಟಣ ಪ್ರದೇಶಗಳಲ್ಲಿ ವಾಹನಗಳ ನಿಲುಗಡೆ, ಫುಟ್‌ಪಾತ್ ಗಳ ನಿರ್ಮಾಣ, ಸಂಚಾರಿ ವ್ಯವಸ್ಥೆಗಳನ್ನು ಕೈಗೊಳ್ಳುವಾಗ ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಬೇಕು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿರುವ ಬಗ್ಗೆ ಪರಿಶೀಲನೆಯನ್ನು ಇನ್ನಷ್ಟು ಚುರುಕುಗೊಳಿಸಬೇಕು. ಇಬ್ಬರಿಗಿಂತ ಹೆಚ್ಚು ಸವಾರರು ವಾಹನಗಳಲ್ಲಿ ಸಂಚರಿಸುವುದನ್ನು ತಡೆಗಟ್ಟಿ ದಂಡ ವಿಧಿಸಬೇಕು. ಹೆದ್ದಾರಿಗಳಲ್ಲಿ ವಾಹನ ಸವಾರರ ಸುರಕ್ಷಿತ ಚಾಲನೆಗೆ ಮನವರಿಕೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್ ಅವರು ಮಾತನಾಡಿ ಗುಂಡ್ಲುಪೇಟೆ ಭಾಗದಲ್ಲಿ ಹೆಚ್ಚಾಗಿ ಅಪಘಾತ ಪ್ರಕರಣಗಳು ಸಂಭವಿಸುತ್ತಿವೆ. ಮಲೆ ಮಹದೇಶ್ವರಬೆಟ್ಟ ಭಾಗದಲ್ಲಿ ಕೆಎಸ್.ಆರ್.ಟಿಸಿ ಬಸ್ಸುಗಳು ಅಪಘಾತಕ್ಕೀಡಾಗುತ್ತಿವೆ. ಇಲ್ಲಿನ ವಾಹನ ಚಾಲಕರಿಗೆ ಹೆಚ್ಚಿನ ಜಾಗೃತಿ ತರಬೇತಿ ನೀಡುವ ಅಗತ್ಯವಿದೆ. ಹೆದ್ದಾರಿಗಳಲ್ಲಿ ಸೂಚನಾ ಫಲಕಗಳನ್ನು ಅಳವಡಿಸಬೇಕು ಎಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಎಸ್. ಗಾಯತ್ರಿ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ರೇಣುಕಾ, ಕೆಎಸ್.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಪಿ. ನಾಗರಾಜು, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬಿ.ವಿ. ವೆಂಕಟೇಶ್, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಶಾಂತಮ್ಮ, ತಾಂತ್ರಿಕ ಸಹಾಯಕರಾದ ಬಿ. ಮಾದೇಶ್, ನಗರಾಭಿವೃದ್ಧಿ ಪ್ರಾಧಿಕಾರದ ಸಹಾಯಕ ಎಂಜಿನಿಯರ್ ಎಂ.ಹೆಚ್. ರಿತೇಶ್, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಮೇ 16ರಂದು ಕರುನಾಡ ಜಾನಪದ ಕಲಾ ಮಹೋತ್ಸವ: ರೇಣುಕಾ ಪ್ರಸಾದ್



ರಾಮನಗರ: ಇದೇ ಮೇ 16ರ ಶನಿವಾರ ಕಲಾಜ್ಯೋತಿ ಚಾರಿಟಬಲ್ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ ನಗರದ ಅಂಬೇಡ್ಕರ್ ಭವನದಲ್ಲಿ ಎಬಿಸಿಡಿ ಡ್ಯಾನ್ಸ್ ಅಕಾಡೆಮಿ ವಾರ್ಷಿಕೋತ್ಸವ ಅಂಗವಾಗಿ ಕರುನಾಡ ಜಾನಪದ ಕಲಾ ಮಹೋತ್ಸವ – 2026 ಮತ್ತು ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಿದೆ ಎಂದು ಟ್ರಸ್ಟ್ ಸಂಸ್ಥಾಪಕ ಎಸ್.ರೇಣುಕಾಪ್ರಸಾದ್ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ವಾರ್ಷಿಕೋತ್ಸವ ಪ್ರಯುಕ್ತ ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಹಿರಿಯ ಕಲಾವಿದರಿಗೆ ಕಲಾಜ್ಯೋತಿ ಜಾನಪದ ರತ್ನ ಪ್ರಶಸ್ತಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ಕಲಾಜ್ಯೋತಿ ಕನ್ನಡರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ಬೆಳಗ್ಗೆ ಶ್ರೀ ರೇವಣಸಿದ್ದೇಶ್ವರಸ್ವಾಮಿ ದಾಸೋಹ ಮಠದ ಶ್ರೀ ರಾಜಶೇಖರ ಶಿವಾಚಾರ್ಯ ಸ್ವಾಮಿಗಳ ಸಾನಿಧ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ರವರ ಘನ ಉಪಸ್ಥಿತಿಯಲ್ಲಿ ಶಾಸಕ ಇಕ್ಬಾಲ್ ಹುಸೇನ್ ರವರು ಸಮಾರಂಭ ಉದ್ಘಾಟಿಸಲಿದ್ದು, ಪದ್ಮಶ್ರೀ ಪುರಸ್ಕೃತ ಡಾ.ಹಾಸನ ರಘು ಅಧ್ಯಕ್ಷತೆ ವಹಿಸಲಿದ್ದಾರೆ.

ಅತಿಥಿಗಳಾಗಿ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸತೀಶ್ , ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಚೇತನ್ ಕುಮಾರ್ , ಜಾನಪದ ವಿದ್ವಾಂಸ ಡಾ.ಕಾಳಯ್ಯ, ಉಪನ್ಯಾಸಕ ಡಾ.ಅಂಕನಹಳ್ಳಿ ಪಾರ್ಥ, ಎಂಐನ ಸಿಟಿಸಿ ಹೇಮಂತ್ ಕುಮಾರ್, ಪತ್ರಕರ್ತೆ ಸುಧಾರಣಿ, ವಿಶೇಷ ಆಹ್ವಾನಿತರಾಗಿ ಡ್ಯಾನ್ಸ್ ಮಾಸ್ಟರ್ ರವಿಕುಮಾರ್ , ರುದ್ರ ಮಾಸ್ಟರ್ , ಶಶಿ ಮಾಸ್ಟರ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸಂಜೆ 4 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿರವರ ಅಧ್ಯಕ್ಷತೆಯಲ್ಲಿ ಜಾನಪದ ವಿದ್ವಾಂಸ ಎಂ.ಬೈರೇಗೌಡ ಉದ್ಘಾಟಿಸುವರು. ಸಮಾಜ ಸೇವಕ ಮಹೇಂದ್ರ ಮುನ್ನೂತ್ , ಶ್ರೀ ಗಣೇಶ್ ಜ್ಯುವೆಲರ್ಸ್ ಮಾಲೀಕ ಲಕ್ಷ್ಮಣ್ , ವಕೀಲ ದರ್ಶನ್ , ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ರಾಜು, ಪತ್ರಕರ್ತರಾದ ಸೂರ್ಯಪ್ರಕಾಶ್ ,ರಾಜು ಪಾದರಹಳ್ಳಿ, ಸಾಹಿತಿ ಪೂರ್ಣಚಂದ್ರ ಮತ್ತಿತರರು ಪಾಲ್ಗೊಳ್ಳುವರು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಕಾರ್ಯದರ್ಶಿ ಶಶಿಕಲಾ, ಎನ್.ವಿ.ಲೋಕೇಶ್, ಗೋವಿಂದಯ್ಯ, ಚಂದನ್ ಇದ್ದರು.

### ಕಲಾಜ್ಯೋತಿ ಕನ್ನಡರತ್ನ ಪ್ರಶಸ್ತಿ ಪುರಸ್ಕೃತರು:

ಪತ್ರಕರ್ತರಾದ ಸು.ತಾ.ರಾಮೇಗೌಡ, ಚೆಲುವರಾಜು, ರುದ್ರೇಶ್ , ಕೆ.ಅರುಣ್ , ಕರುನಾಡ ಸೇನೆ ರಾಜ್ಯ ಉಪಾಧ್ಯಕ್ಷ ಜಗದೀಶ್ , ಕನ್ನಡಪರ ಹೋರಾಟಗಾರ ಗೋವಿಂದರಾಜು, ಆರ್ ಬಿಎಲ್ ಮಾಲೀಕ ಲೋಕೇಶ್ , ಭರತನಾಟ್ಯ ಕಲಾವಿದೆ ಕಾವ್ಯಶ್ರೀ, ಗಾಯಕ ರಘುನಂದನ್ , ರೇಣುಕಾ ಟಿಫಾನಿಸ್ ಮಾಲೀಕ ನಾಗರಾಜ್ .

### ಕಲಾಜ್ಯೋತಿ ಜಾನಪದ ರತ್ನ ಪ್ರಶಸ್ತಿ ಪುರಸ್ಕೃತರು :

ಅಂತರಾಷ್ಟ್ರೀಯ ಜಾನಪದ ಕಲಾವಿದ ಎಸ್.ಪ್ರದೀಪ್ , ಡೊಳ್ಳು ಕುಣಿತ ಕಲಾವಿದ ರಮೇಶ್ , ಪೂಜಾ ಕುಣಿತ ಕಲಾವಿದ ಪಾರ್ಥಸಾರಥಿ, ತಂಬೂರಿ ಕಲಾವಿದ ತಂಬೂರಿ ಶಿವಣ್ಣ, ತಮಟೆ ಕಲಾವಿದ ಮಲ್ಲೇಶ್, ಕೋಲಾಟ ಕಲಾವಿದ ಜಿ.ಚನ್ನಪ್ಪ, ಭರತನಾಟ್ಯ ಕಲಾವಿದ ವಿದುಷಿ ಹೇಮಾ, ಯಕ್ಷಗಾನ ಕಲಾವಿದೆ ಪಂಚಮಿ, ಗಾಯಕ ಕೆಂಗಲ್ ವಿನಯ್ ಕುಮಾರ್, ರಂಗಭೂಮಿ ಕಲಾವಿದ ಎಚ್.ವಿ.ಮೂರ್ತಿ.

### ಸಾಂಸ್ಕೃತಿಕ ಕಾರ್ಯಕ್ರಮ

ಚನ್ನಪಟ್ಟಣದ ಸರ್ವೋತ್ತಮ್ಮ ಮತ್ತು ತಂಡ ಸುಗಮ ಸಂಗೀತ ಗಾಯನ ಹಾಗೂ ಹೊನ್ನಿಗಾನಹಳ್ಳಿ ಸಿದ್ದರಾಜಯ್ಯ ಮತ್ತು ತಂಡ ಜಾನಪದ ಗೀತ ಗಾಯನ ನಡೆಸಿಕೊಡುವರು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾ ತಂಡಗಳು ಪ್ರದರ್ಶನ ನೀಡಲಿವೆ ಎಂದು ರೇಣುಕಾ ಪ್ರಸಾದ್ ತಿಳಿಸಿದರು.

# ಸ್ತ್ರೀಯರ ಶೈಕ್ಷಣಿಕ ಅಭಿವೃದ್ಧಿಗೆ ಸೌಲಭ್ಯ

## ಸರ್ಕಾರದಿಂದ ಮಹಿಳೆಯರ ಅಭಿವೃದ್ಧಿಗೆ ಪೂರಕ ವಾತಾವರಣ: ಶಾಸಕ ಸಿ.ಪುಟ್ಟರಂಗಶೆಟ್ಟಿ

ಚಾಮರಾಜನಗರ: ಜಿಲ್ಲೆಯ ಮಹಿಳಾ ವಿದ್ಯಾರ್ಥಿಗಳ ಸಮಗ್ರ ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರವು ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸುವ ಮೂಲಕ ಅಭಿವೃದ್ಧಿಗೆ ಪೂರಕವಾದ ವಾತಾವರಣವನ್ನು ನಿರ್ಮಿಸಿದೆ ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಭಿಪ್ರಾಯಪಟ್ಟರು. ಅವರು ನಗರದ ವರನಟ ಡಾ. ರಾಜ್ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ 2025–26ನೇ ಸಾಲಿನ ಸಾಂಸ್ಕೃತಿಕ, ರಾಷ್ಟ್ರೀಯ ಸೇವಾ ಯೋಜನೆ, ರೆಡ್ಕ್ರಾಸ್, ರೇಂಜರ್ಸ್ ಮತ್ತು ರೋವರ್ಸ್ ಹಾಗೂ ಕ್ರೀಡಾ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.



### ಮೂಲಸೌಕರ್ಯ, ನೀರಾವರಿ ಯೋಜನೆಗಳ ಅನುಷ್ಠಾನ

ಶೈಕ್ಷಣಿಕ ಕ್ಷೇತ್ರದ ಜೊತೆಗೆ ಜಿಲ್ಲೆಯ ಮೂಲಭೂತ ಅವಶ್ಯಕತೆಗಳಿಗೂ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ. ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ, 110 ಕೋಟಿ ರೂ. ವೆಚ್ಚದ ಮಾಲಂಗಿ ನೀರಾವರಿ ಯೋಜನೆ ಸೇರಿದಂತೆ ಹಲವು ಪ್ರಮುಖ ಕಾರ್ಯಕ್ರಮಗಳು ಜಾರಿಯಾಗಿವೆ. ನಗರದ ಒಳಚರಂಡಿ ವ್ಯವಸ್ಥೆಗಾಗಿ 163 ಕೋಟಿ ರೂ.ಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಸುವರ್ಣಾವತಿ ಮತ್ತು ಚಿಕ್ಕಹೊಳೆ ಜಲಾಶಯಗಳನ್ನು ತುಂಬಿಸುವ 720 ಕೋಟಿ ರೂ.ಗಳ ಬೃಹತ್ ಯೋಜನೆಯು ಕಾರ್ಯರೂಪಕ್ಕೆ ಬರುತ್ತಿದೆ. ಇಂತಹ ಯೋಜನೆಗಳ ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ಸಾಧನೆ ಮಾಡಬೇಕು ಎಂದು ಕರೆ ನೀಡಿದ ಶಾಸಕರು, ಮುಂದಿನ ವರ್ಷ ಮಹಿಳಾ ಕಾಲೇಜಿಗೆ ಸುಸಜ್ಜಿತ ನೂತನ ಕಟ್ಟಡ ಲಭ್ಯವಾಗಲಿದೆ ಎಂಬ ಭರವಸೆ ನೀಡಿದರು.

### ಶೈಕ್ಷಣಿಕ ಗುಣಮಟ್ಟ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮಹತ್ವ

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್ ಅವರು ಮಾತನಾಡಿ, ಶಿಕ್ಷಣವು ಪ್ರತಿಯೊಬ್ಬರ ಜೀವನದ ದಿಕ್ಕನ್ನು ನಿರ್ಧರಿಸುವ ಶಕ್ತಿಯನ್ನು ಹೊಂದಿದೆ ಮತ್ತು ಸಮಾಜದ ಬದಲಾವಣೆಗೆ ಶಿಕ್ಷಣವೇ ಮೂಲಾಧಾರ ಎಂದರು. ಕಾಲೇಜುಗಳಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚಿನ ಒತ್ತು ನೀಡುವುದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಸಾಂಸ್ಕೃತಿಕ, ಎನ್.ಎಸ್.ಎಸ್ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.

#### ಜಿಲ್ಲೆಯ ಶೈಕ್ಷಣಿಕ ಪ್ರಗತಿ ಮತ್ತು ಕಾಲೇಜಿನ ಬೆಳವಣಿಗೆ

ಚಾಮರಾಜನಗರ ಪಟ್ಟಣದಲ್ಲಿ ಸುಮಾರು ಒಂಬತ್ತು ವರ್ಷಗಳ ಹಿಂದೆ ಕೇವಲ ಮೂವತ್ತು ಮಂದಿ ವಿದ್ಯಾರ್ಥಿನಿಯರ ದಾಖಲಾತಿಯೊಂದಿಗೆ ಆರಂಭವಾದ ಈ ಮಹಿಳಾ ಕಾಲೇಜು ಇಂದು ಜಿಲ್ಲೆಯಲ್ಲೇ ಹೆಮ್ಮರವಾಗಿ ಬೆಳೆಯುತ್ತಿದೆ ಎಂದು ಶಾಸಕರು ಶ್ಲಾಘಿಸಿದರು. ವರ್ಷದಿಂದ ವರ್ಷಕ್ಕೆ ಇಲ್ಲಿ ವಿದ್ಯಾರ್ಥಿನಿಯರ ದಾಖಲಾತಿ ಸಂಖ್ಯೆ ಹೆಚ್ಚುತ್ತಿದ್ದು, ಪ್ರಸಕ್ತ 2026–27ನೇ ಸಾಲಿನಲ್ಲಿ ಇಡೀ ಜಿಲ್ಲೆಯಲ್ಲಿಯೇ ಅತಿ ಹೆಚ್ಚಿನ ಸಂಖ್ಯೆಯ ಮಹಿಳಾ ವಿದ್ಯಾರ್ಥಿನಿಯರು ಈ ಕಾಲೇಜಿನಲ್ಲಿ ಪ್ರವೇಶ ಪಡೆದಿದ್ದಾರೆ. ಈ ಬೆಳವಣಿಗೆಯು ಜಿಲ್ಲೆಯ ಮಹಿಳೆಯರ ಶೈಕ್ಷಣಿಕ ಅಭಿವೃದ್ಧಿಯ ಮಾನದಂಡ ಹಾಗೂ ಸಮಾಜದ ಆರೋಗ್ಯಕರ ಪ್ರಗತಿಯನ್ನು ಸೂಚಿಸುತ್ತದೆ ಎಂದು ಅವರು ತಿಳಿಸಿದರು.

#### ಹಿಂದುಳಿದ ಜಿಲ್ಲೆಯ ಹಣೆಪಟ್ಟಿ ಅಳಿಸಿದ ಅಭಿವೃದ್ಧಿ ಕಾರ್ಯಗಳು

ನಂಜುಂಡಪ್ಪ ಆಯೋಗದ ವರದಿಯ ಅನ್ವಯ ಹಿಂದೆ ಚಾಮರಾಜನಗರ ಮತ್ತು ಎಚ್.ಡಿ. ಕೋಟೆ ತಾಲೂಕುಗಳು ಅತ್ಯಂತ ಹಿಂದುಳಿದ ಪ್ರದೇಶಗಳಾಗಿದ್ದವು ಹಾಗೂ ಬರಗಾಲದ ಪಟ್ಟಿಯಲ್ಲಿ ಜಿಲ್ಲೆ ಮೊದಲ ಸ್ಥಾನದಲ್ಲಿರುತ್ತಿತ್ತು. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ವಹಿಸಿಕೊಂಡ ನಂತರ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದಾರೆ. ಇದರ ಫಲವಾಗಿ ಜಿಲ್ಲೆಯಲ್ಲಿ ಪಾಲಿಟೆಕ್ನಿಕ್, ವೈದ್ಯಕೀಯ, ಎಂಜಿನಿಯರಿಂಗ್, ಕಾನೂನು, ಕೃಷಿ ಮತ್ತು ಕ್ರೀಡಾ ಕಾಲೇಜುಗಳು ಮಾತ್ರವಲ್ಲದೆ, ಕಿತ್ತೂರು ಚೆನ್ನಮ್ಮ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸ್ಥಾಪನೆಯಾಗಿದೆ. ಈ ಎಲ್ಲಾ ಸಂಸ್ಥೆಗಳ ಮೂಲಕ ಜಿಲ್ಲೆಯ ಶೈಕ್ಷಣಿಕ ಚಿತ್ರಣವೇ ಬದಲಾಗಿದ್ದು, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಅಡಿಪಾಯ ಹಾಕಲಾಗಿದೆ ಎಂದು ಶಾಸಕರು ವಿವರಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಮತ್ತು ರಾಷ್ಟ್ರಮಟ್ಟದ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಸ್ಮರಣಿಕೆ ಹಾಗೂ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ಮಂಡ್ಯದ ಸಹಾಯಕ ಪ್ರಾಧ್ಯಾಪಕ ಪ್ರೊ. ಟಿ.ಎನ್. ಶಾಂತರಾಜು ಅವರು ಮುಖ್ಯ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು, ವಿವಿಧ ಘಟಕಗಳ ಸಂಚಾಲಕರು ಹಾಗೂ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಕಾಲೇಜಿನ ಬೇಡಿಕೆಗಳು ಮತ್ತು ಸಾಧಕ ವಿದ್ಯಾರ್ಥಿಗಳಿಗೆ ಗೌರವ

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ. ಬಿ.ಎಸ್. ಮಹದೇವಸ್ವಾಮಿ ಅವರು ಮಾತನಾಡಿ, ಈ ಕಾಲೇಜು ಮುಂದಿನ ದಿನಗಳಲ್ಲಿ ನಗರದ 'ಮಿನಿ ಮಹಾರಾಣಿ ಕಾಲೇಜು' ಆಗಿ ರೂಪುಗೊಳ್ಳಲಿದೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನೂತನ ಕಟ್ಟಡಕ್ಕೆ ಹೆಚ್ಚುವರಿಯಾಗಿ 18 ಕೊಠಡಿಗಳ ಅವಶ್ಯಕತೆಯಿದ್ದು, ಎಂ.ಎಸ್.ಐ.ಎಲ್ ಅಥವಾ ಸಿ.ಎಸ್.ಆರ್ ನಿಧಿಯಡಿ ಅನುದಾನ ನೀಡುವಂತೆ ಶಾಸಕರಲ್ಲಿ ಮನವಿ ಮಾಡಿದರು.

## ಕೃಷ್ಣ ವಂದನ



ಸ್ನೇಹಾ ಆನಂದ್



### ಹೇ ಕೃಷ್ಣಾ!

ಕೃಷ್ಣ ಬಂದ ನೋಡಿ ಪನ್ನೀರು ತನ್ನಿರೆ,
ಹೂಗಳ ಹಾಸಿ ಸೆರಗನು ಬೀಸಿ,
ಪರಿಮಳ ಪಾತ್ರೆಯಲಿ ಫಲವನಿರಿಸಿರೆ//

ಬೆಣ್ಣೆಯ ಬಟ್ಟಲು,ರೊಟ್ಟಿಯ ತಟ್ಟಲು
ತಟ್ಟನೆ ಪುಟ್ಟ ಬಾಯೊಳಗಿರಿಸಿರೆ
ತುಂಟ ನಗೆಗೆ ಒಂದು ಮುತ್ತನು ನೀಡಿರೆ//


ಗೋಕುಲದ ಮಧ್ಯೆದಲ್ಲಿ ಗೊಲ್ಲನ ನೋಡರೆ
ಗೋಗಳ ಕಾಯುವ, ಬಲರಾಮನ ಸಹಿತ
ಮುದ್ದು ಬಾಲಕನ ಹುಡುಕಿ ತನ್ನಿರೆ //

ಚೆಲುವ ಚೆನ್ನಿಗ,ಉಡುಪಿ ಕೃಷ್ಣನ ನೀವು ಕಂಡಿರೆ,
ಕನಕದಾಸರಿಗೊಲಿದ ನಮ್ಮ ಚಿಣ್ಣ ಹೇಮ ಗಿರೀಶನ
ಕೈಯ ಕಟ್ಟಿ ತನ್ನಿರೆ//

# ನೀಟ್ ಅಕ್ರಮ ; ಕೇಂದ್ರದ ಬೇಜವಾಬ್ದಾರಿತನ

## ಕೆ.ಆರ್.ಎಸ್. ಪಕ್ಷದ ಎಂ.ರವಿಕುಮಾರ್ ಖಂಡನೆ

ಚಾಮರಾಜನಗರ : ನೀಟ್–ಯುಜಿ ಪರೀಕ್ಷೆಯಲ್ಲಿ ನಡೆದಿರುವ ಹಗರಣವು ಕೇಂದ್ರ ಸರ್ಕಾರದ ಬೇಜವಾಬ್ದಾರಿತನ ಮತ್ತು ಪ್ರಶ್ನೆ ಪತ್ರಿಕೆ ಸೋರಿಕೆ ದಂಧೆಕೋರರೊಂದಿಗಿನ ಅದರ ಅಪವಿತ್ರ ಮೈತ್ರಿಗೆ ಹಿಡಿದ ಕನ್ನಡಿಯಾಗಿದೆ ಎಂದು ಕೆಆರ್ಎಸ್ ಪಕ್ಷದ ರಾಜ್ಯ ಸಂಘಟನಾ ಕಾರ್ಯದರ್ಶಿ ಎಂ. ರವಿಕುಮಾರ್ ಖಂಡಿಸಿದ್ದಾರೆ.



ಇದು ಕೇವಲ ಒಂದು ಪರೀಕ್ಷೆಯ ವೈಫಲ್ಯವಲ್ಲ, ಬದಲಾಗಿ ದೇಶದ ಲಕ್ಷಾಂತರ ಬಡ, ಮಧ್ಯಮ ವರ್ಗದ ಮತ್ತು ಗ್ರಾಮೀಣ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾಡಿದ ಅನ್ಯಾಯವಾಗಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಭ್ರಷ್ಟಾಚಾರದ ಅಡ್ಡೆಯಾಗಿ ಮಾರ್ಪಟ್ಟಿದೆ. ಪರೀಕ್ಷೆಯ ಪಾವಿತ್ರ್ಯತೆಯನ್ನು ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದ್ದರೂ, ಕೇಂದ್ರ ಸರ್ಕಾರ ಆ ಸಂಸ್ಥೆಯ ಬೆನ್ನಿಗೆ ನಿಂತಿರುವುದು ಅದರ ನಾಚಿಕೆಗೇಡಿನ ಪರಮಾವಧಿಯಾಗಿದೆ ಎಂದು ದೂರಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆ, ಕೋಚಿಂಗ್ ಸೆಂಟರ್‌ಗಳ ದಲ್ಲಾಳಿಗಳು ಹಾಗೂ ಭ್ರಷ್ಟ ಅಧಿಕಾರಿಗಳ ಕೂಟವೊಂದು ಸೇರಿ ಮೆರಿಟ್ ವಿದ್ಯಾರ್ಥಿಗಳ ಭವಿಷ್ಯವನ್ನು ಹರಾಜಿಗೆ ಇಟ್ಟಿವೆ. ಹಣವಿದ್ದವರಿಗೆ ಮಾತ್ರ ವೈದ್ಯಕೀಯ ಸೀಟು ಎಂಬ ವಾತಾವರಣವನ್ನು ನಿರ್ಮಿಸಿ, ಸಾಮಾಜಿಕ ನ್ಯಾಯವನ್ನು ಬುಡಮೇಲು ಮಾಡಲಾಗಿದೆ ಎಂದು ಕಿಡಿಕಾರಿದ್ದಾರೆ.

ಈ ಇಡೀ ಪ್ರಹಸನದ ನೈತಿಕ ಹೊಣೆ ಹೊತ್ತು, ಕೇಂದ್ರ ಶಿಕ್ಷಣ ಸಚಿವರು ಈ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲವಾದರೆ ಪ್ರಧಾನಿಯವರೇ ಅವರನ್ನು ಸಂಪುಟದಿಂದ ವಜಾಗೊಳಿಸಬೇಕು. ಈ ಹಗರಣದ ಹಿಂದೆ ಇರುವ ಕಾಣದ ಕೈಗಳನ್ನು ಮಟ್ಟಹಾಕಲು ಸುಪ್ರೀಂ ಕೋರ್ಟ್‌ನ ಹಾಲಿ ನ್ಯಾಯಾಧೀಶರ ಮೇಲ್ವಿಚಾರಣೆಯಲ್ಲಿ ನಿಷ್ಪಕ್ಷಪಾತ ತನಿಖೆಯಾಗಬೇಕು ಎಂದು ಒತ್ತಾಯಿಸಿದ್ದಾರೆ. ಭ್ರಷ್ಟಾಚಾರದ ಕೂಪವಾಗಿರುವ ಎನ್ಟಿಎ ಯನ್ನು ವಿಸರ್ಜಿಸಬೇಕು ಅಥವಾ ಆಮೂಲಾಗ್ರವಾಗಿ ಬದಲಾವಣೆ ತಂದು, ಪಾರದರ್ಶಕ ವ್ಯವಸ್ಥೆಯನ್ನು ಜಾರಿಗೊಳಿಸಬೇಕು. ಕೇಂದ್ರ ಸರ್ಕಾರವು ಈ ಕೂಡಲೇ ಎಚ್ಚೆತ್ತುಕೊಂಡು ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸದಿದ್ದರೆ, ಮುಂದಿನ ದಿನಗಳಲ್ಲಿ ಬೀದಿಗಿಳಿದು ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

# 20ರಿಂದ ಸಾರಿಗೆ ನೌಕರರ ಮುಷ್ಕರ



ಮೈಸೂರು: ರಾಜ್ಯ ಸಾರಿಗೆ ಸಂಸ್ಥೆ ನೌಕರರಿಗೆ 38 ತಿಂಗಳ ಬಾಕಿಯಲ್ಲಿ ಉಳಿದ 12 ತಿಂಗಳ ಹಣ ಪಾತಿಸಬೇಕು, ಮೂಲ ವೇತನವನ್ನು ಶೇ.25 ಕ್ಕೆ ಹೆಚ್ಚಿಸಬೇಕು ಎಂಬಿತ್ಯಾದಿ ಬೇಡಿಕೆ ಈಡೇರಿಕೆಗೆ ಸರ್ಕಾರ ನಿರ್ಲಕ್ಷ್ಯ ಧೋರಣೆ ತಾಳಿರುವ ಹಿನ್ನೆಲೆಯಲ್ಲಿ ಮೇ20 ರಿಂದ ಸಾರಿಗೆ ನೌಕರರು ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಿದ್ದಾರೆ ಎಂದು ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಪರವಾಗಿ ಸಾರಿಗೆ ನೌಕರರ ಮಹಾ ಮಂಡಳದ ಪದಾಧಿಕಾರಿ ಬಿ. ಜಯದೇವರಾಜೇ ಅರಸ್ ತಿಳಿಸಿದರು.

ಅಂದು ರಾಜ್ಯದ ವಿವಿಧ ಸಾರಿಗೆ ನಿಮಗಳಲ್ಲಿರುವ ಸುಮಾರು 1.15 ಲಕ್ಷ ನೌಕರರು ಮನೆಯಲ್ಲಿಯೇ ಕುಳಿತ ಮುಷ್ಕರದಲ್ಲಿ ಪಾಲ್ಗೊಳ್ಳಲಿದ್ದಾರೆ. ಮೈಸೂರು ವಿಭಾಗದಲ್ಲಿನ ಸುಮಾರು 6 ಸಾವಿರ ಮಂದಿ ಇದರಲ್ಲಿ ಭಾಗಿಯಾಗಲಿದ್ದಾರೆ. ಹೀಗಾಗಿ ಇದಕ್ಕೂ ಮುನ್ನ ಸರ್ಕಾರ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸದಿದ್ದರೆ ಅಂದಿನಿಂದ ಸಾರಿಗೆ ಸಂಸ್ಥೆ ಬಸ್‌ಗಳು ರಸ್ತೆಗಿಳಿಯವುದಿಲ್ಲ ಎಂದರು. ರಾಜ್ಯ ಸರ್ಕಾರ ಸರ್ಕಾರಿ ನೌಕರರಿಗೆ 4 ವರ್ಷ ಮೊದಲೇ ಏಳನೇ ವೇತನ ಆಯೋಗದ ನೇಮಿಸಿ ಶೇ. 27.5 ರಷ್ಟು ವೇತನ ಹೆಚ್ಚಿಸಿದ್ದರೂ ಸಾರಿಗೆ ನೌಕರರ ವಿಷಯದಲ್ಲಿ ತಾರತಮ್ಯ ತೋರಿದೆ. ಹೀಗಾಗಿ ಶೇ. 25 ರಷ್ಟು ಹೆಚ್ಚಿಸಿ 2024–1–01 ರಿಂದ 4 ವರ್ಷಗಳ ಅವಧಿಗೆ ಜಾರಿಗೊಳಿಸಬೇಕು, ಬಾಟಾ ಮತ್ತಿತರ ಭತ್ಯೆ ಹೆಚ್ಚಿಸಬೇಕು, 26 ತಿಂಗಳ ಬಾಕಿ ಹಣವಾದ 1272 ಕೋಟಿ ರೂ.,ಗಳನ್ನು ಒಂದೇ ಕಂತಿನಲ್ಲಿ ಪಾವತಿಸಬೇಕು ಎಂಬಿವೇ ಮೊದಲಾದವು ತಮ್ಮ ಬೇಡಿಕೆಗಳಾಗಿವೆ ಎಂದು ವಿವರಿಸಿದರು.

# ನಂಜುಂಡ ರಚನೆಯ ಕೃತಿಗಳ ಬಿಡುಗಡೆ



ಮೈಸೂರು: ಅಂತರ್ಗತ ಬೆಳವಣಿಗೆ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ಹೊರ ತಂದಿರುದ ಡಾ.ಡಿ.ಸಿ.ನಂಜುಂಡ ಅವರು ರಚಿಸಿರುವ ಆಪರೇಷನ್ ಸಿಂಧೂರ ಹಾಗೂ ಸಿಂಧೂ ನದಿ ಒಪ್ಪಂದ– ಆಳ ಮತ್ತು ಅಗಲ ಶೀರ್ಷಿಕೆಯ 2 ಕೃತಿಗಳನ್ನು ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಕೀಲೆ ಹಾಗೂ ಬಿಜೆಪಿ ಮಹಿಳಾ ಮೋರ್ಚಾ ಮಾಜಿ ಅಧ್ಯಕ್ಷೆ ಡಾ.ಹೇಮಾ ನಂದೀಶ್ ಬಿಡುಗಡೆಗೊಳಿ ಸಿದರು.

ಬಳಿಕ ಮಾತನಾಡಿ, ಈ ಎರಡೂ ವಿಷಯಗಳ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಮಾಹಿತಿ ದೊರೆತರೂ ಮನಸ್ಸಿಗೆ ಮುಟ್ಟುವ ರೀತಿಯಲ್ಲಿರುವುದಿಲ್ಲ. ಹೀಗಾಗಿ ಈ ಎರಡೂ ಕೃತಿಗಳು ಸಾಹಿತ್ಯ ಲೋಕಕ್ಕೆ ನೀಡಿದ ಅಮೂಲ್ಯ ಕೊಡುಗೆಗಳಾಗಿವೆ. ದೇಶದ ಸಮಗ್ರತೆ, ರಕ್ಷಣೆ, ಮಹಿಳೆಯರ ಸಿಂಧೂರಕ್ಕೆ ಅಪಮಾನವಾದಾಗ ಅಂದಿನ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಕೈಗೊಂಡ ದಿಟ್ಟ ನಿರ್ಧಾರ, ಕ್ರಮಗಳನ್ನು ಇಲ್ಲಿ ವಿವರಿಸಲಾಗಿದೆ ಎಂದರು.

ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಲು ಕಾರಣವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ಸುಮಾರು 26 ಮಂದಿಯನ್ನು ಉಗ್ರರು ಮಾರಣ ಹೋಮ ಮಾಡಿದ ಘಟನೆ, ಆಪರೇಷನ್ ಸಿಂಧೂರದ ಸಮಗ್ರ ವಿವರ ಈ ಕೃತಿಯಲ್ಲಿದೆ. ಜೊತೆಗೆ ಸಿಂಧೂ ನದಿ ಒಪ್ಪಂದ ಕುರಿತು ಸಹಾ ಅಮೂಲ್ಯ ಮಾಹಿತಿ ಇಲ್ಲಿವೆ ಎಂದರು. ಕೃತಿಕಾರ ಡಾ.ಡಿ.ಸಿ.ನಂಜುಂಡ, ಮೀನಾಕ್ಷಿ ಶ್ರೀಷಾ, ಮಂಟೇಲಿಂಗಾಚಾರ್ ಇನ್ನಿತರರು ಇದ್ದರು.

# ನಾಳೆ ಏಕವ್ಯಕ್ತಿ ನಾಟಕ ಪ್ರದರ್ಶನ

ಮೈಸೂರು: ಕವಿತಾ ಕಲಾ ತಂಡದಿಂದ ಇಲ್ಲಿನ ಕಿರು ರಂಗಮಂದಿರದಲ್ಲಿ ಮೇ16ರಂದು ಸಂಜೆ 6.30ಕ್ಕೆ ತಾವು ರಚಿಸಿ, ನಿರ್ದೇಶಿಸಿರುವ ಮಧುರಚೆನ್ನ–ಅನುಭಾವಿಯೊಂದಿಗೆ ಅನುಸಂಧಾನ ಏಕವ್ಯಕ್ತಿ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಲೇಖಕ ಗಣೇಶ ಅಮೀನಗಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಜಗದೇವ ಗಲಗಲಿ ಪ್ರಸ್ತುತಿ, ಬಿ.ಆರ್.ಬನಸೋಡೆ ಸಂಗೀತ ನಿರ್ದೇಶನದಲ್ಲಿ ನಾಟಕ ಮೂಡಿಬಂದಿದೆ. ಕಳೆದ ಶತಮಾನದ ದೊಡ್ಡ ಅನುಭಾವಿ ಕವಿ, ಚಿಂತಕರಾಗಿದ್ದ ಮಧುರ ಚೆನ್ನ ಬೇಂದ್ರ ಮೊದಲಾದ ಹಿರಿಯ ಸಾಹಿತಿಗಳೊಡನೆ ಒಡನಾಡ ಹೊಂದಿದ್ದರು. ಅವರನ್ನು ಹಿರಿಯ ತಲೆಮಾರಿಗೆ ನೆನಪಿಸುವ, ಹೊಸಬರಿಗೆ ಪರಿಚಯಿಸುವಜ ಕೆಲಸ ಈ ನಾಟಕದ್ದಾಗಿದೆ. ಕವಿಯ ಇಡೀ ಜೀವನ ಪರಿಚಯ ಈ ಒಂದು ಗಂಟೆ ಅವಧಿಯ ನಾಟಕದಲ್ಲಿದೆ ಎಂದರು. ರಾಜ್ಯದ ವಿವಿಧೆಡೆ ಪ್ರದರ್ಶನ ಕಂಡು ಜನಮೆಚ್ಚುಗೆ ಗಳಿಸಿದೆ. ನಗರದಲ್ಲಿ ಪ್ರಥಮ ಪ್ರದರ್ಶನ ಕಾಣುತ್ತಿದ್ದು, ಮೈಸೂರು ಪ್ರಾದೇಶಿಕ ಆಯುಕ್ತ ನಿತೀಶ್ ಪಾಟೀಲ ಉದ್ಘಾಟಿಸುವರು. ಎಲ್ಲರೂ ವೀಕ್ಷಿಸಿ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕನ್ನಡ ಸಾಹಿತ್ಯ ಕಲಾಕೂಟದ ಸಂಸ್ಥಾಪಕ ಅಧ್ಯಕ್ಷ ಎಂ.ಚಂದ್ರಶೇಖರ್ ಹಾಜರಿದ್ದರು.




ಕಾಮಗಾರಿಗೆ ಚಾಲನೆ

# ಹೈಕಮಾಂಡ್ ಈಗ ಗೊಂದಲ ಬಗೆಹರಿಸಲಿ: ತನ್ವೀರ್‌ಸೇಠ್

ಮೈಸೂರು: ಅಧಿಕಾರ ಹಸ್ತಾಂತರ ಗೊಂದಲ ವಿಚಾರ ಬೀದಿಯಲ್ಲಿ ಚರ್ಚೆಯಾಗುತ್ತಿದ್ದು, ಈಗ ಎಲ್ಲಾ ಚುನಾವಣೆಗಳು ಮುಗಿದಿದ್ದು, ಈ ಹಿನ್ನೆಲೆಯಲ್ಲಿ ಹೈಕಮಾಂಡ್ ಗೊಂದಲ ಬಗೆಹರಿಸಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ಶಾಸಕ ತನ್ವೀರ್ ಸೇಠ್ ಹೇಳಿದರು.

ಮೈಸೂರಿನಲ್ಲಿ ಅಧಿಕಾರ ಹಸ್ತಾಂತರ ಹಾಗೂ ಸಂಪುಟ ಪುನರ್ ರಚನೆ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಅಧಿಕಾರ ಕೇಳಿಕೊಂಡು ದೆಹಲಿಗೆ ಹೋಗುವು ದಿಲ್ಲ. ಅವಕಾಶ ಕೊಟ್ಟರೆ ಆಡಳಿತ ನಡೆಸಿ ತೋರಿಸುತ್ತೇನೆ. ಸಂಪುಟ ಪುನಾರಚನೆಯೋ ಸಂಪುಟ ವಿಸ್ತರಣೆಯೋ ಅಧಿಕಾರ ಹಂಚಿಕೆಯೋ ಏನಾಗುತ್ತೋ ಯಾರಿಗೆ ಗೊತ್ತು?, ಆದರೆ ಏನಾದ್ರು ಒಂದು ಆಗಬೇಕು. ಪಕ್ಷದ ವಿಚಾರ ಈಗ ಬೀದಿ ಜಗಳವಾಗಿದೆ. ಇದು ಮೊದಲು ನಿಲ್ಲಬೇಕು. ಹಾದಿ ಬೀದಿಯಲ್ಲಿ ಪಕ್ಷದ ವಿಚಾರ ಚರ್ಚೆ ಮಾಡುತ್ತಿದ್ದಾರೆ. ಇದನ್ನ ಹೈಕಮಾಂಡ್ ಮೊದಲು ತಪ್ಪಿ ಸಬೇಕಿದೆ. ಈಗ ಕೇರಳ ವಿಚಾರವೂ ಮುಗಿದಿದೆ. ಹೈಕ ಮಾಂಡ್



ಈಗಲಾದರೂ ನಮ್ಮ ಮೇಲೆ ದೃಷ್ಟಿ ಬೀರಲಿ. ನಮ್ಮ ವಿಚಾರಗಳನ್ನ ಗಮನ ಹರಿಸಲಿ ಎಂದರು.

ಪಂಚ ರಾಜ್ಯ ಚುನಾವಣೆ ಆಯಿತು. ಈಗ ಬೇರೆ ಯಾವ ರಾಜಕೀಯ ಬೆಳವಣಿಗೆಗಳು ಎಲ್ಲೂ ಇಲ್ಲ. ಈಗ ಕರ್ನಾಟಕದ ವಿಚಾರವನ್ನು ಹೈಕಮಾಂಡ್ ಕೈಗೆತ್ತಿಕೊಳ್ಳಬೇಕು. ಎರಡುವರೆ ವರ್ಷಕ್ಕೆ ಸಂಪುಟ ಪುನಾರಚನೆಯಾಗಬೇಕಿತ್ತು. ಈಗ ಮೂರು ವರ್ಷ ಮುಗಿದಿದೆ. ಅಧಿಕಾರ ಹಸ್ತಾಂತರ ವಿಚಾರ ನಮ್ಮ ಮುಂದೆ ಚರ್ಚೆ ನಡೆದಿಲ್ಲ

ಆ ಚರ್ಚೆ ಏನೂ ಎಲ್ಲವನ್ನೂ ಈಗಲಾದರೂ ಹೈ ಕಮಾಂಡ್ ಹೇಳಲಿ. ನಾವು ಹೈಕಮಾಂಡ್ ನಷ್ಟೇ ನಂಬಿದ್ದೇವೆ. ಗಂಡ ಆಗುತ್ತೊ ಹೆಣ್ಣಾಗುತ್ತೊ ನನಗೆ ಗೊತ್ತಿಲ್ಲ. ಏನಾದರೂ ಮೊದಲು ಆಗಲಿ, ಆದ ಮೇಲೆ ಹೆಸರು ಇಡೋಣಾ ಒಟ್ಟು ಏನಾದರು ಒಂದು ಆಗಬೇಕಿದೆ. ಮುಖ್ಯಮಂತ್ರಿಗಳ ವಿಶೇಷ ಆಸಕ್ತಿಯಿಂದ ನನ್ನ ಕ್ಷೇತ್ರದ ವಿವಿಧ ಬಡಾವಣೆಗಳಲ್ಲಿ ಡಾಂಬರು ರಸ್ತೆ ನಿರ್ಮಾಣ ಕಾಮಗಾರಿಗೂ ಚಾಲನೆ ನೀಡಲಾಗಿದೆ. ಅಷ್ಟೇ ಅಲ್ಲದೇ ಮೈಸೂರು ನಗರದಲ್ಲಿ ವಿದ್ಯುತ್‌ಚ್ಚಕ್ತಿ, ಗ್ಯಾಸ್ ಪೈಪ್‌ಲೈನ್ ಮತ್ತು ಟೆಲಿಫೋನ್ ಕೇಬಲ್ ಭೂಮಿಯಲ್ಲಿ ಅಳವಡಿಕೆ ಕೆಲಸವೂ ನಡೆಯುತ್ತಿದೆ. ಇದರಿಂದ ಬಹುತೇಕ ನಗರದ ಎಲ್ಲ ರಸ್ತೆಗಳೂ ಹಾಳಾಗಿದ್ದು, ಈ ಸಂಬಂಧ ಶಾಸಕರ ಅನುದಾನ, ನಗರಪಾಲಿಕೆ ಅನುದಾನ ಪಡೆದು ರಸ್ತೆ ಕಾಮಗಾರಿ ನಡೆಸಲಾಗುವುದು. ಒಟ್ಟಾರೆ ನನ್ನ ಕ್ಷೇತ್ರದಲ್ಲಿ ಒಳಚರಂಡಿ ವ್ಯವಸ್ಥೆ ಸಂಪೂರ್ಣ ಹಾಳಾಗಿವೆ. ಪ್ರಮುಖವಾಗಿ ಅಗತ್ಯವಿರುವ ಒಳಚರಂಡಿ ಕಾಮಗಾರಿಯನ್ನು ತ್ವರಿತವಾಗಿ ಕೈಗೆತ್ತುಕೊಂಡಿದ್ದೇವೆ ಎಂದರು. ಮಹಾತ್ಮಾಗಾಂಧಿ ನಗರ ಪುನಶ್ಚೇತನ ಯೋಜನೆಯಡಿ 13.5 ಕೋಟಿ ಅನುದಾನ ನನ್ನ ಕ್ಷೇತ್ರಕ್ಕೆ ಬಂದಿತ್ತು, ಅದರಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಸಲಾಗಿತ್ತು. ಆ ಸಂದರ್ಭದಲ್ಲಿ ಒಳಚರಂಡಿ ವ್ಯವಸ್ಥೆ ಹಾಳಾಗಿದ್ದ ಕಾರಣ, ಮುಖ್ಯಮಂತ್ರಿಗಳ ವಿಶೇಷ 5.25 ಕೋಟಿ ಅನುದಾನದಲ್ಲಿ ಶಕ್ತಿನಗರ, ಗಾಂಧಿನಗರ, ಮೊಹಮ್ಮದ್ ಸೇಠ್ ಬ್ಲಾಕ್, ಸಿವಿ ರಸ್ತೆ ಮತ್ತು ಮಾನಸಿ ಶಾಲೆ ಹತ್ತಿರ ಕಾಮಗಾರಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮಂಜುನಾಥ್, ಚೌಡಯ್ಯ, ಶ್ರೀನಿವಾಸ್, ಮಹಮ್ಮದ್ ಪಾಷ, ಯುವ ಕಾಂಗ್ರೆಸ್ ಮುಖಂಡ ಅದ್ನಾನ್, ರಾಜೇಶ್, ಜಗದೀಶ್, ಹೇಮಂತ್ ಇತರರು ಇದ್ದರು.

## "ಕೌಶಲ್ಯವೇ ನಾಳಿನ ಬಂಡವಾಳ":ಡಾ.ಕೆ.ಬಿ.ಲಿಂಗರಾಜು



ಮೈಸೂರು: ಇಂದಿನ ಕಾಲಘಟ್ಟದಲ್ಲಿ ಮಹಿಳಾ ವಿದ್ಯಾರ್ಥಿಗಳಿಗೆ ಪದವಿ ಮಾತ್ರವಲ್ಲ. ಪ್ರಾಯೋಗಿಕ ಕೌಶಲ್ಯವೇ ನಾಳಿನ ಆರ್ಥಿಕ ಭದ್ರತೆಯ ಬಂಡವಾಳವಾಗಲಿದೆ ಎಂದು ಮೈಸೂರು ಕೈಗಾರಿಕೆಗಳ ಸಂಘದ ಅಧ್ಯಕ್ಷ ಡಾ.ಕೆ.ಬಿ.ಲಿಂಗರಾಜು ಹೇಳಿದರು.

ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜಿನಲ್ಲಿ ಇಕ್ಯೂ, ಎಂಕಾಮ್ ಸ್ನಾತಕೋತ್ತರ ವಾಣಿಜ್ಯ ವಿಭಾಗ ಹಾಗೂ ಪ್ಲೇಸ್‌ಮೆಂಟ್ ಸೆಲ್ ಜಂಟಿಯಾಗಿ ಆಯೋಜಿಸಿದ್ದ ಉದ್ಯಮಶೀಲತೆ ಅಭಿವೃದ್ಧಿ ವಿಶೇಷ ಉಪನ್ಯಾಸ ಮತ್ತು ಕೌಶಲ್ಯ ಅಭಿವೃದ್ಧಿ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು. "ಇಂದು ಉದ್ಯಮ ಲೋಕಕ್ಕೆ ಪದವೀಧರರು ಬೇಕಾಗಿಲ್ಲ. ಕೌಶಲ್ಯವುಳ್ಳ ಯುವ ಶಕ್ತಿ ಬೇಕಾಗಿದೆ. ನೀವು ಈಗಲೇ ಆ ಕೌಶಲ್ಯವನ್ನು ಅಭ್ಯಾಸ ಮಾಡಿದ್ದೀರಿ. ಇದು ನಿಮ್ಮನ್ನು ಇತರರಿಗಿಂತ ಒಂದು ಹೆಜ್ಜೆ ಮುಂದೆ ಇಡುತ್ತದೆ" ಎಂದು ಹೇಳಿದರು.

ಮಹಿಳೆಯರು ಸಣ್ಣ ಪ್ರಮಾಣದ ಉದ್ಯಮ ಆರಂಭಿಸಿ ಸ್ವಾವಲಂಬಿಗಳಾಗುವ ಕಾಲ ಬಂದಿದೆ. ಚೇಂಬರ್ ಆಫ್ ಕಾಮರ್ಸ್ ಯಾವಾಗಲೂ ಯುವ ಉದ್ಯಮಿಗಳ ಜೊತೆಗೆ ನಿಲ್ಲುತ್ತದೆ. ನಿಮ್ಮಲ್ಲಿ ಯಾರಾದರೂ ಸ್ಟಾರ್ಟ್ ಅಪ್ ಆರಂಭಿಸಲು ಬಯಸಿದರೆ, ಮಾರ್ಗದರ್ಶನ ಮತ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸಲು ನಾವು ಸಿದ್ಧ. ಉದ್ಯೋಗಕ್ಕಾಗಿ ಕಾಯುವ ಬದಲು, ಉದ್ಯೋಗ ಸೃಷ್ಟಿಸುವ ಧೈರ್ಯ ಬೆಳೆಸಿಕೊಳ್ಳಿ. ಸಣ್ಣ ಅಂಗಡಿಯಿಂದಲೇ ಆರಂಭವಾದ ದೊಡ್ಡ ಕಂಪನಿಗಳು ಸಾವಿರಾರು ಜನರಿಗೆ ಉದ್ಯೋಗ ನೀಡಿವೆ. ನಿಮ್ಮ ಐಡಿಯಾ ಸಣ್ಣದಾಗಿದ್ದರೂ ಪರವಾಗಿಲ್ಲ, ಅದನ್ನು ಕಾರ್ಯರೂಪಕ್ಕೆ ತರುವ ಮನಸ್ಸು ಮುಖ್ಯ" ಎಂದು ಅವರು ವಿದ್ಯಾರ್ಥಿನಿಯರಿಗೆ ಸ್ಫೂರ್ತಿ ನೀಡಿದರು. ಮಹಾರಾಣಿ ಕಾಲೇಜು ಮಹಿಳಾ ಶಿಕ್ಷಣದಲ್ಲಿ ರಾಜ್ಯಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದ ಅವರು, ಇಂತಹ ಕೌಶಲ್ಯ ಆಧಾರಿತ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚು ಆಯೋಜಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಎಟಿಐಯ ಫ್ಯಾಕಲ್ಟಿ ಡಾ.ವೈ.ವಿ. ಗಂಗಾಧರ ವಿದ್ಯಾರ್ಥಿಗಳಿಗೆ ಉದ್ಯಮಶೀಲತೆ ಅಭಿವೃದ್ಧಿ ಕುರಿತು ವಿಶೇಷ ಉಪನ್ಯಾಸ ನೀಡಿದರು. ಮಂಡ್ಯ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಡಾ.ದಿಲ್ಶಾದ್ ಬೇಗಂ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಪ್ರೊ.ಪಿ.ಶಿವಣ್ಣ ವಹಿಸಿದ್ದರು. ಎಂಕಾಮ್ ವಿಭಾಗದ ಮುಖ್ಯಸ್ಥ ಡಾ.ಎಚ್.ಎಸ್.ನಿರಂಜನ ಬಾಬು, ಐಕ್ಯೂ ಸಂಯೋಜಕ ಡಾ.ಮುತ್ತುರಾಜ, ಡಾ.ಬಿ.ಶ್ರುತಿ ಮತ್ತು ಪ್ಲೇಸ್‌ಮೆಂಟ್ ಅಧಿಕಾರಿ ಡಾ.ಕೆ.ಪ್ರೀತಮ್ ಇನ್ನಿತರರು ಉಪಸ್ಥಿತರಿದ್ದರು.

## ಸರ್ಕಾರವೇ ತಾಯಂದಿರ ದಿನ ಆಚರಿಸಲಿ

ಮೈಸೂರು: ಭಾರತ ಮಾತೆಯ ಋಣ ತೀರಿಸಲು ಸರ್ಕಾರದಿಂದ ತಾಯಿಯಂದಿರ ದಿನಾಚರಣೆ ಆಚರಿಸಬೇಕು ಎಂದು ಶ್ರೀ ಯೋಗನರಸಿಂಹಸ್ವಾಮಿ ದೇವಸ್ಥಾನದ ಆಡಳಿತಾಧಿಕಾರಿ ಶ್ರೀನಿವಾಸನ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ವಿಶ್ವ ಅಮ್ಮನ ದಿನಾಚರಣೆ ಅಂಗವಾಗಿ ವಾಸುದೇವ ಮಹಾರಾಜ್ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಮಾತಾ ವಿಜಯಕುಮಾರಿ ವಿ.ರಾವ್ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಜಗತ್ತಿನಲ್ಲಿ ಬೆಲೆ ಕಟ್ಟಲಾಗದು, ಪ್ರೀತಿ ಸಿಗುವುದು ತಾಯಿಯಿಂದ ಮಾತ್ರ ಎಂದರು.

ತಾಯಿಯೇ ಮೊದಲ ಗುರು ಎಂಬುದು ನಿಜವಾದ ಮಾತು. ಅದರಂತೆ ಭಾರತ ಮಾತೆಯೂ ನಮ್ಮ ತಾಯಿ ಆಗಿದ್ದು, ಈ ದಿನಾಚರಣೆ ಮಾಡುತ್ತೇವೆ ಎಂದರೆ ಅದು ಭಾರತ ಮಾತೆಯನ್ನು ಪೂಜಿಸಿದ್ದಂತೆ. ಆದ್ದರಿಂದ ಭೂಮಿ ತಾಯಿಯ ಋಣ ತೀರಿಸಲು ಸರ್ಕಾರದಿಂದ ತಾಯಿ ದಿನಾಚರಣೆಯನ್ನು ಆಚರಿಸಬೇಕು. ಇದರಿಂದ ಭಾರತ ಮಾತೆಯ ಋಣ ತೀರಿಸದಂತೆ ಆಗಲಿದೆ ಎಂದು ತಿಳಿಸಿದರು.

ಸಂಸ್ಕೃತ ವಿದುಷಿ ಡಾ.ಕೆ.ಲೀಲಾ ಪ್ರಕಾಶ್ ಮಾತನಾಡಿ, ದೇವರು ಎಲ್ಲಾ ಕಡೆ ತಾನು ಇರಲು ಸಾಧ್ಯವಿಲ್ಲ ಎಂದು ತಾಯಿಯನ್ನು ಸೃಷ್ಟಿಸಿದ್ದಾನೆ. ತಾಯಿ ಸಾಮಾನ್ಯಳಲ್ಲ, ಆಕೆ ಭುವನದ ಭಾಗ್ಯ. ಆಕೆಯನ್ನು ಸ್ಮರಿಸುವ ಮೂಲಕ ಸಾಧಕ ಮಹಿಳೆಯರಿಗೆ ಪ್ರಶಸ್ತಿ ನೀಡುತ್ತಿರುವ ಫೌಂಡೇಶನ್ ಕಾರ್ಯ ಶ್ಲಾಘನೀಯ ಎಂದರು.



ಕಾರ್ಯಕ್ರಮದಲ್ಲಿ ಲೇಖಕಿ ಲಕ್ಷ್ಮಿ ಪೆಲಕಂಡ, ವಿದುಷಿ ಎಂ.ಆರ್.ಸುಧಾ ಅವರಿಗೆ ಮಾತಾ ವಿಜಯಕುಮಾರಿ ವಿ.ರಾವ್ ಪ್ರಶಸ್ತಿ ನೀಡಿ ಅಭಿನಂದಿಲಾಯಿತು. ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಲಯನ್ಸ್ ಸಂಸ್ಥೆ ನಿಕಟಪೂರ್ವ ಗವರ್ನರ್ ಲಯನ್ ಎಸ್.ವೆಂಕಟೇಶ್, ಸಂಗೀತ ಶಿಕ್ಷಕಿ ಎಂ.ವಿ.ಅನಿತಾ, ಲಕ್ಷ್ಮಿನರಸಿಂಹಸ್ವಾಮಿ ದೇವಸ್ಥಾನದ ಸಿಇಓ ಕೆ.ಆರ್.ಯೋಗಾನರಸಿಂಹನ್ ,ಫೌಂಡೇಷನ್ ಸಂಸ್ಥಾಪಕ ಎಸ್.ವಿ.ನಾಗೇಂದ್ರ ಬಾಬು ಉಪಸ್ಥಿತರಿದ್ದರು.


## ಉಡಿಗಾಲ ಆನೆಮಡುವಿನ ಕೆರೆಗೆ ನೀರು ತುಂಬಿಸುವಂತೆ ಒತ್ತಾಯ

### ಕೆರೆಗೆ ನೀರು ತುಂಬಿಸಿ ಇಲ್ಲವೇ ವಿಷಕೊಡಿ: ಗುರುಪ್ರಸಾದ್

ಚಾಮರಾಜನಗರ, ತಾಲೂಕಿನ ಉಡಿಗಾಲ ಆನೆಮಡುವಿನ ಕೆರೆಗೆ ಚಿಕ್ಕಮೋರಿ ಕಾಲುವೆ ಮುಖಾಂತರ ಎರಡನೇ ಹಂತದಲ್ಲಿ ನೀರು ತುಂಬಿಸುವಂತೆ ಒತ್ತಾಯಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘ ಹಾಗೂ ಉಡಿಗಾಲ ರೈತರು, ಗ್ರಾಮಸ್ಥರು ಗ್ರಾಮದ ಚಿಕ್ಕಮೋರಿ ಕಾಲುವೆ ಸಮೀಪದಲ್ಲಿ ಪ್ರತಿಭಟನೆ ನಡೆಸಿದರು.

ಕೆಲಹೊತ್ತು ಚಾಮರಾಜನಗರ– ಗುಂಡ್ಲುಪೇಟೆ ರಸ್ತೆತಡೆ ನಡೆಸಿದರು. ವಾಹನ ಸಂಚಾರ ಅಸ್ತವ್ಯಸ್ತವಾಯಿತು. ಅಧಿಕಾರಿಗಳು, ಇಂಜಿನಿಯರ್ ಗಳ ವಿರುದ್ಧ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಆಗಮಿಸಿದ ಎಇಇ ಮಹೇಶ್ ಅವರನ್ನು ಕೆರೆ ನೀರು ತುಂಬಿಸುವಂತೆ ಪ್ರತಿಭಟನಾಕಾರರು ಪಟ್ಟು ಹಿಡಿದಾಗ ಕೆರೆ ನೀರು ತುಂಬಿಸುವ ಅಧಿಕಾರ ನನಗಿಲ್ಲ ಎಂದು ಹೇಳಿದಾಗ ಪ್ರತಿಭಟನಾಕಾರರು ನಿಮಗೆ ಅಧಿಕಾರಿ ಇಲ್ಲವೆಂದ ಮೇಲೆ ನೀವ್ಯಾಕೆ ಬಂದಿದ್ದೀರಿ. ಇಇ ಕರೆಸುವಂತೆ ತರಾಟೆಗೆ ತೆಗೆದುಕೊಂಡರು. ಎಇಇ ಮಹೇಶ್ ನಿರಂತರವಾಗಿ ಇಇ ಫೋನ್ ಮಾಡಿದರು ಇಇ ಕರೆ ಸ್ವೀಕರಿಸದಿರುವುದನ್ನು ಗಮನಿಸಿದ ರೈತರು ಇಂಜಿನಿಯರ್ ವಿರುದ್ಧ ಘೋಷಣೆ ಕೂಗಿ ಕೆರೆಗೆ ನೀರು ತುಂಬಿ ಇಲ್ಲವೇ ವಿಷಕೊಡಿ ಎಂದು ಒತ್ತಾಯಿಸಿ ಪಟ್ಟು ಹಿಡಿದಾಗ ಡಿವೈಎಸ್ ಪಿ ಸ್ನೇಹರಾಜು ಪ್ರತಿಭಟನಾಕಾರರನ್ನು ಸಮಾಧಾನ ಪಡಿಸಲು ಮುಂದಾದಾಗ ಮೇಡ ನೀನು ಕೆರೆ ನೀರು ತುಂಬಿಸುವ ಜವಾಬ್ದಾರಿ ತೆಗೆದುಕೊಳ್ಳಿ ನಾವು ಪ್ರತಿಭಟನೆ ಕೈ ಬಿಡುವುದಾಗಿ ಪ್ರತಿಭಟನಾಕಾರರು ಹೇಳಿದರು. ಆವಾಗ ಇಂಜಿನಿಯರ್‌ಗೆ ಒಂದು ತೀರ್ಮಾನ ತೆಗೆದುಕೊಳ್ಳಿ ಎಂದು ಸುಮ್ಮನಾದರು. ಕೆರೆಗೆ ನೀರು ಬಿಡುವುದಾಗಿ ಎಇಇ ಮಹೇಶ್ ಒಪ್ಪಿಕೊಂಡ ಮೇಲೆ ಪ್ರತಿಭಟನೆ ಕೈ ಬಿಡಲಾಯಿತು.

ರೈತ ಗುರುಪ್ರಸಾದ್ ಮಾತನಾಡಿ, ಆನೆಮಡುವಿನ ಕೆರೆಗೆ ನೀರು ತುಂಬಿಸುವಂತೆ ಮನವಿ ನೀಡಿದರು ಯಾವುದೇ ಪ್ರಯೋಜನವಾಗಿಲ್ಲ .ಕೆರೆ ನೀರು ತುಂಬಿಸುವಲ್ಲಿ ಅಧಿಕಾರಿಗಳು ಸಂಪೂರ್ಣ ವಾಗಿ ವಿಫಲವಾಗಿದ್ದಾರೆ. ಕೆರೆ ನೀರು ತುಂಬಿ ಇಲ್ಲವೇ ವಿಷಕೊಡಿಸಿ ಇಂಜಿನಿಯರ್, ಪೋಲಿಸರನ್ನು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಗುರುಪ್ರಸಾದ್, ರಘು, ಗುರು, ಸೂರ್ಯ, ರಾಜು, ಕುಮಾರ್, ಅಭಿ, ರೇವಣ್ಣ, ಮಹೇಶ್, ಮಾದೇಶ್, ಮಲ್ಲಿಕ್, ಉಡಿಗಾಲ,ವೀರನಪುರ ಹಾಗೂ ಸುತ್ತ ಮುತ್ತಲಿನ ರೈತರು, ಗ್ರಾಮಸ್ಥರು, ಭಾಗವಹಿಸಿದ್ದರು.



# ಭೂಮಿ ಇನ್ನಷ್ಟು ಉತ್ತಮ ಸ್ಥಳವಾಗಲಿ

## ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಡಿಜಿ–ಐಜಿಪಿ ಡಾ.ಎಂ.ಎ.ಸಲೀಂ ಕರೆ

ರಾಮನಗರ: ವಿಶ್ವದ ಅನೇಕ ಮಹಾನ್ ವ್ಯಕ್ತಿಗಳು ಅಪಾರ ಪರಿಶ್ರಮ ಮತ್ತು ನಿಷ್ಠೆಯಿಂದ ಅವಿಷ್ಕಾರಗಳನ್ನು ಮಾಡಿ ಈ ಭೂಮಿಯನ್ನು ಉತ್ತಮ ಸ್ಥಳವನ್ನಾಗಿಸಲು ಶ್ರಮಿಸಿದ್ದಾರೆ. ಈ ಲೋಕವನ್ನು ಇನ್ನಷ್ಟು ಉತ್ತಮಗೊಳಿಸಲು, ಬದಲಾವಣೆ ತರಬೇಕು ಎಂಬುದು ಪ್ರತಿಯೊಬ್ಬ ಮಾನವನ ಗುರಿಯಾಗಬೇಕು ಎಂದು ರಾಜ್ಯದ ಡಿಜಿ–ಐಜಿಪಿ ಡಾ.ಎಂ.ಎ.ಸಲೀಂ ಕರೆ ನೀಡಿದರು.

ಇಲ್ಲಿನ ಗೌಸಿಯಾ ತಾಂತ್ರಿಕ ಕಾಲೇಜಿನಲ್ಲಿ ನಡೆದ ಕಾಲೇಜು ವಾರ್ಷಿಕೋತ್ಸವ ಕಾರ್ಯಕ್ರಮ ಗೌಸಿಯಾನ–2026 ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಈ ಭೂಮಿಯನ್ನುಯ ಬದಕಲು ಉತ್ತಮ ಸ್ಥಳವನ್ನಾಗಿಸಲು ಶಿಲಾಯುಗದಿಂದಲೂ ಮಾನವನ ಪ್ರಯತ್ನ ಸಾಗಿದೆ. ವಿಶ್ವದ ಅನೇಕ ಮಹಾನ್ ವ್ಯಕ್ತಿಗಳು ಅಪಾರ ಪರಿಶ್ರಮ ಮತ್ತು ನಿಷ್ಠೆಯಿಂದ ಅವಿಷ್ಕಾರಗಳನ್ನು ಮಾಡಿ ಈ ಭೂಮಿಯನ್ನು ಉತ್ತಮ ಸ್ಥಳವನ್ನಾಗಿಸಲು ಶ್ರಮಿಸಿದ್ದಾರೆ. ಎಲ್ಲರೂ ತಮ್ಮ ಮಟ್ಟಗೆ ಈ ಪ್ರಯತ್ನದಲ್ಲಿರಬೇಕು ಎಂದರು.



ತಂತ್ರಜ್ಞಾನದ ನೂತನ ಅವಿಷ್ಕಾರಗಳನ್ನು ಉದಾಹರಣೆ ನೀಡಿ ಮಾತನಾಡಿದ ಅವರು, ಇಂದು ನಮಗೆ ಇರುವ ಸೌಲಭ್ಯಗಳು 100–200 ವರ್ಷಗಳ ಹಿಂದೆ ಇರಲಿಲ್ಲ. ಇಂದು ನಮ್ಮ ಮನೆಯಲ್ಲೇ ಕುಳಿತು ವಿದೇಶದಲ್ಲಿರುವ ವ್ಯಕ್ತಿಯೊಂದಿಗೆ ಮಾತನಾಡುತ್ತೇವೆ. ನಮ್ಮ ಎದುರಿನಲ್ಲೇ ಕುಳಿತು ಮಾತನಾಡುತ್ತಿದ್ದೇವೆ ಎಂಬ ಅನುಭವವಾಗುತ್ತದೆ. ಮಾನವನ ಜೀವನ ಹೇಗೆ ಸುಧಾರಿಸಿದೆ ಎಂಬುದಕ್ಕೆ ಇದು ಉದಾಹರಣೆ ಎಂದ ಅವರು ಈ ಬದಲಾವಣೆಗೆ ಇಂಜಿನಿಯರ್‌ಗಳ ಕೊಡುಗೆ ಅಪಾರವಾಗಿದೆ ಎಂದು ಇಂಜಿನಿಯರ್‌ಗಳ ಶ್ರಮವನ್ನು ಶ್ಲಾಘಿಸಿದರು.

ಇಂದು ಇಲ್ಲಿ ಕುಳಿತಿರುವ ನಿವೇಲ್ಲರು ಭವಿಷ್ಯದಲ್ಲಿ ಸಮಾಜಕ್ಕೆ ಬದಲಾವಣೆಯನ್ನು ತರುವ ವ್ಯಕ್ತಿಗಳಾಗುತ್ತೀರಿ ಎಂಬ ನಂಬಿಕೆ ನನಗಿದೆ. ನಿಮ್ಮೆಲ್ಲರಿಗೂ ಇಲ್ಲಿ ಉತ್ತಮ ಜ್ಞಾನ, ಶಕ್ತಿ ಮತ್ತು ವ್ಯಕ್ತಿತ್ವ ನಿರ್ಮಾಣಕ್ಕೆ ಅಗತ್ಯವಾದ ಮೌಲ್ಯಗಳನ್ನು ನೀಡಲಾಗುತ್ತದೆ ಎಂಬ ವಿಶ್ವಾಸ ನನಗಿದೆ. ಈ ಸಂಸ್ಥೆಯಿಂದ ಹೊರಬಂದ ನಂತರ ನೀವು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವವರಾಗುತ್ತೀರಿ ಎಂದು ಡಾ.ಎಂ.ಎ.ಸಲೀಂ ಆಶಿಸಿದರು.

ಜಗತ್ತಿನಲ್ಲಿ ಬದಲಾವಣೆ ತರುವುದಕ್ಕಿಂತಲೂ ಮೊದಲು ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಶಿಕ್ಷಣಾರ್ಜನೆಯ ವೇಳೆಯಲ್ಲೇ ವ್ಯಕ್ತಿತ್ವವನ್ನು ರೂಪಿಸಿಕೊಳ್ಳದಿದ್ದರೆ ಜಗತ್ತಿನಲ್ಲಿ ಬದಲಾವಣೆ ತರುವುದು ಕಷ್ಟವಾಗುತ್ತದೆ. ಉತ್ತಮ ವ್ಯಕ್ತಿತ್ವವನ್ನು ಉತ್ತಮ ಮಾನವ ಗುಣಗಳಾದ ಸತ್ಯನಿಷ್ಠ, ಔದ್ದಿಕ ಮತ್ತು ನೈತಿಕ ಪ್ರಾಮಾಣಿಕತೆ ಮತ್ತು ಸರಿಯಾದ ಮೌಲ್ಯಗಳ ಮೇಲೆ ನಂಬಿಕೆಯನ್ನು ರೂಢಿಸಿಕೊಳ್ಳಿ ಎಂದು ಅವರು ಕರೆ ಕೊಟ್ಟರು.

ಪೊಲೀಸ್ ವ್ಯವಸ್ಥೆಯ ಅಧಿಕಾರಿಯಾಗಿ ತಮಗೆ ಸಂಚಾರ ವಿಭಾಗದಲ್ಲಿ ಆಸಕ್ತಿ ಹೆಚ್ಚು ಎಂದು ವಿದ್ಯಾರ್ಥಿಗಳ ಗಮನ ಸೆಳೆದ ಅವರು ದೇಶ ಅಥವಾ ಸಮಾಜಕ್ಕಾಗಿ ಜೀವನವನ್ನು ಅರ್ಪಿಸುವುದು ಮಹತ್ವದ್ದು. ಆದರೆ ಲಾರಿ ಅಥವಾ ಟ್ರಕ್ ಚಕ್ರಗಳ ಕೆಳಗೆ ಪ್ರಾಣ ಕಳೆದುಕೊಳ್ಳುವುದು ಜೀವನದ ವ್ಯರ್ಥ ಮತ್ತು ನಷ್ಟ. ಹೀಗಾಗಿ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಿ ಎಂದು ಸಲಹೆ ನೀಡಿದರು. ಕಾಲೇಜು ಪ್ರಾಂಶುಪಾಲ ಡಾ.ಎನ್.ಎಸ್.ಕುಮಾರ್ ಸ್ವಾಗತಿಸಿದರು. ಗೌಸಿಯಾ ತಾಂತ್ರಿಕ ಮತ್ತು ಕೈಗಾರಿಕಾ ಟ್ರಸ್ಟ್‌ನ ಚೇರ್ಮನ್ ನವಾಜ್ ಎ ಷರೀಫ್, ಗೌಸಿಯಾ ಕಾಲೇಜಿ ಆಡಳಿತಾಧಿಕಾರಿ ಪ್ರೊ.ಏಜಾಸ್ ಅಹಮದ್, ಸಂಚಾಲ ಡಾ.ಸೈಫುಲ್ಲಾ ಖಾನ್ ಉಪಸ್ಥಿತರಿದ್ದರು. ಇಂಜಿನಿಯರಿಂಗ್ ಪದವಿಯ ವಿವಿಧ ವಿಭಾಗಗಳಲ್ಲಿ ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳನ್ನು ಗಣ್ಯರು ಗೌರವಿಸಿದರು.

### ಭಾರತ ಪ್ರಗತಿಯಾಗುತ್ತಿದೆ: ಉಮರ್ ಇಸ್ಮೈಲ್ ಷರೀಫ್

**ಗೌಸಿಯಾ ತಾಂತ್ರಿಕ ಮತ್ತು ಕೈಗಾರಿಕಾ ಟ್ರಸ್ಟ್‌ನ ಕಾರ್ಯದರ್ಶಿ ಉಮ್ಮರ್ ಇಸ್ಮೈಲ್ ಷರೀಪ್ ಮಾತನಾಡಿ, ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನಿಂದ ಇಲ್ಲಿಯವರೆಗೆ ಸುಮಾರು 20 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಂಜಿನಿಯರ್‌ಗಳಾಗಿ ಹೊರಹೊಮ್ಮಿದ್ದಾರೆ. ಅಲ್ಪಸಂಖ್ಯಾತ ಸಮುದಾಯದ ರಾಮನಗರದ ನಿವಾಸಿಗಳಾದ ಸುಮಾರು 200ಕ್ಕು ಹೆಚ್ಚು ಯುವತಿಯರು ಇಂಜಿನಿಯರ್‌ಗಳಾಗಿದ್ದಾರೆ. ಬಹುಶಃ ರಾಮನಗರದಲ್ಲಿ ಇಂಜಿನಿಯರಿಂಗ್ ಕಾಲೇಜು ಇಲ್ಲದಿದ್ದರೆ ಇಷ್ಟು ಮಂದಿ ಅಲ್ಪಸಂಖ್ಯಾತ ಯುವತಿಯರು ಇಂಜಿನಿಯರಿಂಗ್ ವಿದ್ಯಾಭ್ಯಾಸ ಸಾಧ್ಯವಾಗುತ್ತಿರಲಿಲ್ಲ ಎಂದರು.**

**ಭಾರತ ಉತ್ತಮವಾಗಿ ಮುನ್ನಡೆಯುತ್ತಿದೆ, ಎಲ್ಲ ಜಾತಿ ವರ್ಗದವರು ಪರಸ್ಪರ ಸಹಕಾರದಲ್ಲಿ ಜೀವನ ಸಾಗಿಸುತ್ತಿದ್ದೇವೆ. ಮಾಧ್ಯಮಗಳಲ್ಲಿ ಪ್ರಕಟವಾಗುವ ಕೋಮು ಗಲಭೆಯ ಸುದ್ದಿಗಳಿಂದ ಪ್ರಭಾವಿತರಾಗಬೇಡಿ, ಭಾರತದಲ್ಲಿ ಪ್ರತಿನಿತ್ಯ ಸಾವಿರಾರು ಹಿಂದು ಸಮುದಾಯದ ವೈದ್ಯರು ಮುಸಲ್ಮಾನರಿಗೆ ಚಿಕಿತ್ಸೆ ಕೊಡುತ್ತಿದ್ದಾರೆ. ಕ್ರಿಶ್ಚಿಯನ್ ಸಮುದಾಯದ ಶಿಕ್ಷಣ ಸಂಸ್ಥೆಗಳಲ್ಲಿ ಮುಸಲ್ಮಾನರು, ಹಿಂದೂಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಇದೇ ಭಾರತದ ಸತ್ಯ ಎಂದರು.**

**ಯಾವಾಗಲು ಸಕರಾತ್ಮಕವಾಗಿ ಯೋಚಿಸಿ, ಮೊಬೈಲ್ ಫೋನ್‌ನ್ನು ಮಿತವಾಗಿ ಬಳಸಿ, ತಂದೆ–ತಾಯಿಯರು, ಶಿಕ್ಷಕರು, ಉಪನ್ಯಾಸಕರಿಗೆ ಗೌರವ ಕೊಡಿ, ಉದಾರತೆ, ದಯೆ, ಸಂತೋ? ಮತ್ತು ಸಹನೆ ? ಇವು ಜೀವನದ ಸರಿಯಾದ ಮಾರ್ಗಗಳು ಇವೆಲ್ಲವನ್ನು ರೂಢಿಸಿಕೊಳ್ಳಿ ಎಂದು ಕರೆ ನೀಡಿದರು.**

**ಬಾವಿಯ ನೀರು, ಬೋರ್‌ವೆಲ್‌ನ ನೀರು, ಜೀವನದ ಎಲ್ಲಾ ಆಶೀರ್ವಾದಗಳು ಭಗವಂತನ ಕೊಡುಗೆ. ಇನ್ನೊಬ್ಬರ ಬಗ್ಗೆ ಕಾಳಜಿ ವಹಿಸಿದರೆ, ಭಗವಂತನೂ ನಮ್ಮ ಬಗ್ಗೆ ಕಾಳಜಿವಹಿಸುತ್ತಾನೆ ಎಂದು ವಿದ್ಯಾರ್ಥಿಗಳಲ್ಲಿ ಮಾನವೀಯ ಗುಣಗಳನ್ನು ರೂಢಿಸಿಕೊಳ್ಳಲು ಅವರು ಪ್ರೋತ್ಸಾಹಿಸಿದರು.**

## ಭಿಕ್ಷೆ ಬೇಡುತ್ತಿದ್ದ ಬಾಲಕ ಬಾಲ ಮಂದಿರಕ್ಕೆ

ಹನೂರು: ಪಟ್ಟಣ ವ್ಯಾಪ್ತಿಯಲ್ಲಿ ಭಿಕ್ಷೆ ಬೇಡುತ್ತಿದ್ದ ಬಾಲಕನನ್ನು ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ರಕ್ಷಣೆ ಮಾಡಿ ಚಾಮರಾಜನಗರದ ಬಾಲ ಮಂದಿರಕ್ಕೆ ಬಿಟ್ಟು ತಮ್ಮ ಕರ್ತವ್ಯ ನಿಷ್ಠೆ ಮೆರೆದಿದ್ದಾರೆ.

ನರಸೀಪುರ ತಾಲೂಕಿನ ಯಳವರಹುಂಡಿ ಗ್ರಾಮದ ಮಹದೇವ್ ಎಂಬುವವರ ಪುತ್ರ ಅಪ್ಪು (6) ರಕ್ಷಿಸಲ್ಪಟ್ಟ ಬಾಲಕನಾಗಿದ್ದಾನೆ.

ಘಟನೆ ವಿವರ : ಆರು ವರ್ಷದ ಬಾಲಕ ಅಪ್ಪು ಎಂಬಾತ ಹನೂರು ಪಟ್ಟಣದ ಖಾಸಗಿ ಬಸ್ ನಿಲ್ದಾಣ, ಕೆಎಸ್‌ಆರ್ಟಿಸಿ ಬಸ್ ನಿಲ್ದಾಣ ಹಾಗೂ ಇನ್ನಿತರ ಕಡೆ ಭಿಕ್ಷೆ ಬೇಡಿ ತಂದೆಗೆ ಹಣ ನೀಡುತ್ತಿದ್ದ. ಬಂದಂತಹ ಹಣವನ್ನು ತಂದೆ ಕುಡಿದು ಮೈ ಮೇಲೆ ಪ್ರಜ್ಞೆ ಇಲ್ಲದೆ ಎಲ್ಲೆಂದರಲ್ಲಿ ಮಲಗುತ್ತಿದ್ದ. ಈ ವೇಳೆ ಬಾಲಕ ವಿಧಿ ಇಲ್ಲದೆ ಮಳೆ ಚಳಿ ಬೇಸಿಗೆ ಎನ್ನದೆ ಅಪ್ಪ ಮಲಗುತ್ತಿದ್ದ ಸ್ಥಳದಲ್ಲಿಯೇ ಮಲಗಿಕೊಳ್ಳುತ್ತಿದ್ದ. ಈ ವಿಚಾರವನ್ನು ಸ್ಥಳೀಯರು ಮಾಧ್ಯಮದವರ ಗಮನಕ್ಕೆ ತಂದಿದ್ದಾರೆ. ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನಿಕಟ ಪೂರ್ವ ಅಧ್ಯಕ್ಷ ಮಹಾದೇಶ್, ಮಹಿಳಾ ಮತ್ತು ಶಿಶು ಅಭಿವೃದ್ಧಿ ಇಲಾಖೆಯ ಯೋಜನಾಧಿಕಾರಿ ಅಂಬಿಕಾರವರ ಗಮನಕ್ಕೆ ತಂದಿದ್ದಾರೆ. ತಕ್ಷಣ ಮಹಿಳಾ ರಕ್ಷಣಾ ಘಟಕದ ಸಿಬ್ಬಂದಿಗಳಿಗೆ ಮಾಹಿತಿ ನೀಡಲಾಗಿ, ಸೋಮವಾರ ಮಧ್ಯಾಹ್ನ ಹನೂರು ಪಟ್ಟಣಕ್ಕೆ ಬಂದು ಬಾಲಕನನ್ನು ಹುಡುಕಾಡಿದ್ದಾರೆ. ಆದರೆ ಬಾಲಕ ಸಿಕ್ಕಿರಲಿಲ್ಲ, ಈ ವೇಳೆ ಹನೂರು ಪಟ್ಟಣದ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಹಾಸ್ಟೆಲ್ ವಾರ್ಡನ್ ರಮೇಶ್ ರವರಿಗೆ ಬಾಲಕನ ಮೇಲೆ ನಿಗಾ ವಹಿಸಿ ಕರೆತರುವಂತೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕೇಶವಮೂರ್ತಿ ಸೂಚನೆ ನೀಡಿದ್ದರು.



ಬುಧವಾರ ರಾತ್ರಿ ಬಾಲಕ ಭಿಕ್ಷೆ ಬೇಡುತ್ತಿದ್ದ ವೇಳೆ ವಾರ್ಡನ್ ರಮೇಶ್ ರವರು ನೋಡಿ ಬಾಲಕ ಹಾಗೂ ಆತನ ತಂದೆಯನ್ನು ಮನವೊಲಿಸಿ, ಪೊಲೀಸ್ ಠಾಣೆಗೆ ಕರೆತಂದು ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳಿಗೆ ಮಾಹಿತಿ ನೀಡಿ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಸಂಯೋಜಕ ಸಿದ್ದರಾಜು ಹಾಗೂ ಮಹೇಶ್ ರವರ ಸಮ್ಮುಖದಲ್ಲಿ ಬಾಲಕನನ್ನು ಒಪ್ಪಿಸಿದ್ದಾರೆ. ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಚಾಮರಾಜನಗರದ ಬಾಲಮಂದಿರಕ್ಕೆ ಕರೆದುಕೊಂಡು ಬಂದು ಬಿಟ್ಟಿದ್ದಾರೆ. ಇದೇ ವೇಳೆ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಸಂಯೋಜಕ ಸಿದ್ದರಾಜು, ವಿಷಯ ಕಾರ್ಯಕರ್ತ ಮಹೇಶ್ , ವಾರ್ಡನ್ ರಮೇಶ್ ಪೊಲೀಸ್ ಪೇದೆ ಸತೀಶ್ ಹಾಜರಿದ್ದರು.

## ತಾರತಮ್ಯ ಸಮಾಜದಿಂದ ಹೋಗದೇ ಮನುಷ್ಯರಾಗಲ್ಲ

ಮೈಸೂರು: ಜಾತಿ, ಲಿಂಗ, ಧರ್ಮ ಹಾಗೂ ವರ್ಗ ತಾರತಮ್ಯಗಳು ಸಮಾಜದಿಂದ ಸಂಪೂರ್ಣವಾಗಿ ತೊಲಗುವವರೆಗೂ ನಾವು ನಿಜವಾದ ಅರ್ಥದಲ್ಲಿ ಮನುಷ್ಯರಾಗುವುದಿಲ್ಲ ಎಂದು ಸಂಸ್ಕೃತಿ ಚಿಂತಕ ರಂಜಾನ್ ದರ್ಗಾ ಅಭಿಪ್ರಾಯಪಟ್ಟರು.

ನಗರದ ಮಾನಸ ಗಂಗೋತ್ರಿಯ ರಾಣಿಬಹುದ್ದೂರ್ ಸಭಾಂಗಣದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಬಿ.ಎನ್. ಬಹದ್ದೂರ್ ಇನ್‌ಸ್ಟಿಟ್ಯೂಷನ್ ಆಫ್ ಬ್ಯುಸಿನೆಸ್ ಆಡ್ಮಿನಿಸ್ಟ್ರೇಷನ್ ಸಹೋಂಗದಲ್ಲಿ ಗುರುವಾರ ಆಯೋಜಿಸಿದ್ದ 'ಸಮತಾ ಉತ್ಸವ' ಕಾರ್ಯಕ್ರಮದಲ್ಲಿ ಮಾತನಾಡಿದರು.ಮಾನವ ಸವಾಜದಲ್ಲಿ ಸಮಾನತೆ ಮತ್ತು ಪ್ರಜ್ಞೆಯ ಬೆಳಕು ಹರಡಲು ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ್ ನಡೆಸಿದ ಹೋರಾಟಗಳು ಕೇವಲ ಒಂದು ಕಾಲಘಟ್ಟಕ್ಕೆ ಸೀಮಿತವಲ್ಲ. ಮೂರು ಸಾವಿರ ವರ್ಷಗಳ ಸಾಮಾಜಿಕ ಶೋಷಣೆ, ಅಸಮಾನತೆ ಮತ್ತು ಹೋರಾಟದ ಇತಿಹಾಸವನ್ನು ಅರಿತಾಗ ಮಾತ್ರ ಅಂಬೇಡ್ಕರ್ ಅವರ ಮಹತ್ವ ಅರ್ಥವಾಗುತ್ತದೆ ಎಂದು ಹೇಳಿದರು. ಭಾರತದ ಇತಿಹಾಸವು ಕೇವಲ ರಾಜರು ಮತ್ತು ಯುದ್ಧಗಳ ಇತಿಹಾಸವಲ್ಲ. ಅದು ಸಮಾನತೆಗಾಗಿ ನಡೆದ ದೀರ್ಘ ಹೋರಾಟಗಳ ಇತಿಹಾಸವಾಗಿದೆ. ಜಗತ್ತಿನ ಯಾವುದೇ ದೇಶದಲ್ಲಿಯೂ ಇಷ್ಟೊಂದು ದೀರ್ಘಕಾಲದ ಸಾಮಾಜಿಕ ಹೋರಾಟ ನಡೆದಿಲ್ಲ. ಲೋಹಿಯರಿಂದ ಹಿಡಿದು ಅಂಬೇಡ್ಕರ್ ತನಕ ಮಾನವೀಯತೆ ಪರವಾಗಿ ಅನೇಕ ಚಳವಳಿಗಳು ನಡೆದಿವೆ ಎಂದು ತಿಳಿಸಿದರು. ಮನುವಾದಿ ವ್ಯವಸ್ಥೆ ಮನುಷ್ಯರನ್ನು ಜಾತಿ, ವರ್ಣ ಮತ್ತು ಕರ್ಮಸಿದ್ಧಾಂತಗಳ ಹೆಸರಿನಲ್ಲಿ ವಿಭಜಿಸಿ ಶೋಷಿಸಿತು. ಈ ಅನ್ಯಾಯದ ವಿರುದ್ಧ ಚಿಕಿತ್ಸೆ ನೀಡಿದವರು ಬುದ್ಧ, ಬಸವಣ್ಣ ಮತ್ತು ಅಂಬೇಡ್ಕರ್. ಇಂದು ನಾವು ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುತ್ತಿದ್ದೇವೆ. ಆದರೆ ಜಗತ್ತಿನ ಮೊದಲ ಪ್ರಜಾಪ್ರಭುತ್ವದ ಕಲ್ಪನೆ ಬುದ್ಧನ ಚಿಂತನೆಗಳಿಂದ ಆರಂಭವಾಗಿದೆ ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಪ್ರೊ. ಎಸ್.ಜೆ. ಮಂಜುನಾಥ್, ನಿವೃತ್ತ ಪ್ರಾಧ್ಯಾಪಕ ಡಿ. ಆನಂದ್, ಬಿಮ್ಸ್ ಅಧ್ಯಕ್ಷ ಪ್ರೊ. ಆರ್. ಮಹೇಶ್ ಸೇರಿ ಹಲವಾರು ಕಾರ್ಯಕ್ರಮದಲ್ಲಿ ಹಾಜರಿದ್ದರು.

## ಕಿಡ್ನಿ ವೈಫಲ್ಯ: ಮಗನಿಗೆ ತಾಯಿ ಕಿಡ್ನಿ ಜೋಡಣೆ: ಸಹಾಯ ಕೋರಿಕೆ

ಹನೂರು: ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ಸ್ವಂತ ಮಗನಿಗೆ ತಾಯಿ ಕಿಡ್ನಿ ಜೋಡಣೆಗೆ ಅವಕಾಶ ಮಾಡಿಕೊಡುತ್ತಿದ್ದು, ಚಿಕಿತ್ಸೆ ವೆಚ್ಚಕ್ಕಾಗಿ ದಾನಿಗಳ ಮೊರೆ ಹೋಗಿದ್ದಾರೆ. ದಾನಿಗಳು ತಮ್ಮ ಕೈಲಾದ ಸಹಾಯ ಮಾಡುವಂತೆ ತಾಯಿ ಕಮಲಾಕ್ಷಿ ಮನವಿ ಮಾಡಿದ್ದಾರೆ.



ಹನೂರು ತಾಲೂಕಿನ ರಾಮಾಪುರ ಗ್ರಾಮದಲ್ಲಿ ವಾಸವಿರುವ ಕಮಲಾಕ್ಷಿ ಮತ್ತು ನಾಗರಾಜು ಎಂಬ ದಂಪತಿಗೆ ಇರುವ ಏಕೈಕ ಮಗ ಮುತ್ತುಕುಮಾರ್ (35) ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದು ಜೀವನ ದುಸ್ತರವಾಗಿದೆ.

ಎರಡು ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ಮಗನ ಜೀವ ಉಳಿಸಲು ಪಣತೊಟ್ಟಿರುವ ತಾಯಿ ತನ್ನ ಕಿಡ್ನಿಯನ್ನ ಮಗನಿಗೆ ಜೋಡಣೆ ಮಾಡಲು ಈಗಾಗಲೇ ಎಲ್ಲಾ ರೀತಿಯ ಅನುಮತಿಗಾಗಿ ಅರ್ಜಿ ಸಲ್ಲಿಸಿದ್ದು, ಅನುಮತಿ ಸಿಕ್ಕ ಕೂಡಲೇ ಕಿಡ್ನಿ ಜೋಡಣೆ ನಡೆಯಲಿದೆ. ಇದಕ್ಕಾಗಿ ಚಿಕಿತ್ಸಾ ವ್ಯಚ್ಚ ಸುಮಾರು ಹತ್ತು ಲಕ್ಷಕ್ಕೂ ಹೆಚ್ಚು ಮೇಲ್ಪಟ್ಟು ಬೇಕಾಗುತ್ತದೆ ಎಂದು ವೈದ್ಯರು ತಿಳಿಸುತ್ತಾರೆ. ಹಾಗಾಗಿ ಸಹೃದಯವಂತ ದಾನಿಗಳು ಈ ಕೆಳಕಂಡ ಖಾತೆ ಸಂಖ್ಯೆಗೆ ತಮ್ಮ ಕೈಲಾದಷ್ಟು ಸಹಾಯ ಮಾಡಬೇಕೆಂದು ಮನವಿ ಮಾಡಿದ್ದಾರೆ.

ಇದಲ್ಲದೆ ಮುತ್ತುಕುಮಾರ್ ಯುವಕನ ತಂದೆಯು ಸಹ ವಿಕಲ ಚೇತನರಾಗಿದ್ದು ಕುಟುಂಬ ನಿರ್ವಹಣೆ ಬಹಳ ಸಂಕಟದ ಪರಿಸ್ಥಿತಿಯಲ್ಲಿ ಸಿಲುಕಿದೆ. ಹಾಗಾಗಿ ದಾನಿಗಳು ಕಡು ಬಡವರಾದ ನಮಗೆ ಸಹಾಯ ಮಾಡಬೇಕೆಂದು ಮನವಿ ಮಾಡಿದ್ದಾರೆ.

ಖಾತೆ ಸಂಖ್ಯೆ ಮುತ್ತು ಕುಮಾರ್ ಎನ್

**A/NO-43880103242**

**IFSI- SBIN0040078**

ಅಥವಾ 9632693564 ಈ ಸಂಖ್ಯೆಗೆ ಫೋನ್ ಪೇ ಮೂಲಕ ಸಹ ಸಹಾಯ ಮಾಡಬಹುದು ಎಂದು

### 49.99 ಲಕ್ಷರೂ ವೆಚ್ಚ । ರೈಲ್ವೆ ನಿಲ್ದಾಣ ವೃತ್ತ ಮತ್ತು ಕೆಂಪೇಗೌಡ ವೃತ್ತದ ಅಭಿವೃದ್ಧಿ

## ಕ್ಲಾಕ್ ಟವರ್ ನಿರ್ಮಾಣ ಕಾಮಗಾರಿಗೆ ಚಾಲನೆ

ರಾಮನಗರ: ಬೆಂಗಳೂರು ದಕ್ಷಿಣ ಜಿಲ್ಲಾ ಕೇಂದ್ರ ರಾಮನಗರದ ಸೌಂದರ್ಯವನ್ನು ಹೆಚ್ಚಿಸಲು ನಿರ್ಧರಿಸಿರುವ ಕೆ.ಶೇಷಾದ್ರಿ ನೇತೃತ್ವದ ನಗರಸಭೆ, ಗುರುವಾರ ವಾಟರ್ ಟ್ಯಾಂಕ್ ವೃತ್ತದಲ್ಲಿ ಕ್ಲಾಕ್ ಟವರ್ ನಿರ್ಮಾಣ ಕಾಮಗಾರಿ ಆರಂಭಿಸಿದೆ.

ಈ ವೇಳೆ ಮಾತನಾಡಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ, 49.99 ಲಕ್ಷರೂ ವೆಚ್ಚದಲ್ಲಿ ಕ್ಲಾಕ್ ಟವರ್ ನಿರ್ಮಾಣಕ್ಕೆ 2026–27ನೇ ಸಾಲಿನ ಆಯವ್ಯಯದಲ್ಲಿ ಅವಕಾಶ ಮಾಡಿಕೋಳ್ಳಲಾಗಿದೆ ಎಂದು ತಿಳಿಸಿದರು. ಕಾಮಗಾರಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಮುಗಿದಿದೆ. ನಗರದ ಸೌಂದರ್ಯ ಹೆಚ್ಚಿಸಲು ಮೊದಲ ಹೆಜ್ಜೆ ಇಡಲಾಗಿದೆ. ಈಗಾಗಲೆ ಕೆಂಗಲ್ ಹನುಮಂತಯ್ಯ ಅವರ ಪುತ್ಥಳಿ ಇರುವ ವೃತ್ತದ ಸೌಂದರ್ಯವನ್ನು ಹೆಚ್ಚಿಸಲಾಗಿದೆ ಎಂದರು.



### ರೈಲ್ವೆ ನಿಲ್ದಾಣ ವೃತ್ತದ ಅಭಿವೃದ್ಧಿ

ಮುಂದಿನ ದಿನಗಳಲ್ಲಿ ರೈಲ್ವೆ ನಿಲ್ದಾಣದ ವೃತ್ತವನ್ನು ಅಧುನಿಕತೆಯ ಮೆರಗಿನೊಂದಿಗೆ ಅಭಿವೃದ್ಧಿ ಪಡಿಸಲಾಗುವುದು, ಕೆಂಪೇಗೌಡ ವೃತ್ತವನ್ನು ಸಹ ಅಭಿವೃದ್ಧಿ ಪಡಿಸಲಾಗುವುದು. ನಗರದ ಪ್ರವೇಶ ದ್ವಾರದಂತೆ ಕೆಂಪೇಗೌಡ ವೃತ್ತ ಅಭಿವೃದ್ಧಿಯಾಗಲಿದೆ ಎಂದರು.

### ಸೆಲ್ಫಿ ಪಾಯಿಂಟ್

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ 'ಐ ಲವ್ ರಾಮನಗರ' ನಾಮಫಲಕದ ಸೌಂದರ್ಯೀಕರಣ ಕಾರ್ಯವೂ ಪೂರ್ಣಗೊಳ್ಳುವ ಹಂತದಲ್ಲಿದೆ. ಇದು ನಗರಕ್ಕೆ ಬರುವ ಪ್ರವಾಸಿಗರಿಗೆ ಹಾಗೂ ಸ್ಥಳೀಯರಿಗೆ ಹೊಸ ಸೆಲ್ಫಿ ಪಾಯಿಂಟ್ ಆಗಿ ಗಮನ ಸೆಳೆಯಲಿದೆ ಎಂದ ಅವರು ನಗರದ ಸೌಂದರ್ಯ ಹೆಚ್ಚಿಸುವುದು ನಗರಸಭೆಯ ಉದ್ದೇಸ. ಒಟ್ಟಾರೆ ಅಭಿವೃದ್ಧಿ ನಮ್ಮ ಕರ್ತವ್ಯ, ಇದಕ್ಕೆ ಜನರ ಸಹಕಾರ ಅಗತ್ಯವಿದೆ ಎಂದರು. ಈ ವೇಳೆ ಸ್ಥಾಯಿ ಸಮಿತಿ ಅಧ್ಯಕ್ಷ ಹರ್ಷದ್, ನಗರಸಭೆ ಸದಸ್ಯರುಗಳಾದ ಮಹಾಲಕ್ಷ್ಮಿ, ಪವಿತ್ರಾ, ಪಾರ್ವತಮ್ಮ, ನರಸಿಂಹ, ಸೋಮಶೇಖರ್ (ಮಣಿ), ಪೌರಾಯುಕ್ತ ಡಾ.ಜಯಣ್ಣ ಮುಂತಾದವರು ಹಾಜರಿದ್ದರು.

# ಸಂಕ್ಷಿಪ್ತ ಸುದ್ದಿ

## ವ್ಯಕ್ತಿಯ ಕೊಲೆ ಮಾಡಿದ್ದ ಆರೋಪಿಗಳ ಬಂಧನ?

**ಮಂಡ್ಯ:** ದಿನಾಂಕ: 05/05/2026 ರಂದು ಸಂಜೆ 04–00 ಗಂಟೆಯಿಂದ ದಿನಾಂಕ: 06/05/2026 ರ ಸಂಜೆ 04–30 ಗಂಟೆ ನಡುವಿನ ಸಮಯದಲ್ಲಿ ಶ್ರೀರಂಗಪಟ್ಟಣ ತಾಲ್ಲೂಕು ಹಳ್ಳಿಮನೆ ಹೋಟೆಲ್ ಹಿಂಭಾಗದ ಪಾಲಹಳ್ಳಿಗೆ ಹೋಗುವ ರಸ್ತೆಯ ಪಕ್ಕದ ಬ್ರಹ್ಮಪುರ ಸರ್ವೆ ನಂ 187/1–2 ರ ಜಮೀನಿನಲ್ಲಿ ಬೆಂಗಳೂರಿನ ವಾಸಿ ರೌಡಿ ಆಸಾಮಿ ಮಹಮ್ಮದ್ ಜಾವಾದ್ ಆಲಂ @ ಸಾಯಿಲ್ ಎಂಬುವವರನ್ನು ಆರೋಪಿಗಳು ಚುಚ್ಚಿ ಕೊಲೆಗೈದಿದ್ದು ಈ ಸಂಬಂಧವಾಗಿ ಮೃತನ ಸಂಬಂಧಿ ಮೈಸೂರಿನ ಮುಜಾಮಿಲ್ ರವರು ನೀಡಿದ ದೂರಿನ ಮೇರೆಗೆ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆ ಮೊ.ಸಂ.85/2026 ಕಲಂ: 189(2), 191(3), 238, 103(1) ಕೂಡ 190 ಭಾರತೀಯ ನ್ಯಾಯ ಸಂಹಿತೆ 2023 ರೀತ್ಯ ಪ್ರಕರಣ ದಾಖಲಾಗಿ ತನಿಖೆಯಲ್ಲಿರುತ್ತದೆ.

ಸದರಿ ಪ್ರಕರಣದ ತನಿಖೆ ಬಗ್ಗೆ ಡಾ.ಶೋಭಾರಾಣಿ ವಿ.ಜೆ. ಐಪಿಎಸ್, ಜಿಲ್ಲಾ ಪೊಲೀಸ್ ಅಧೀಕ್ಷರ ಮಂಡ್ಯ ಜಿಲ್ಲೆ ರವರ ಆದೇಶದಂತೆ ಶ್ರೀ ಸಿ.ಇ.ತಿಮ್ಮಯ್ಯ ಅಪರ ಪೊಲೀಸ್ ವರಿಷ್ಠಾಧಿಕಾರಿರವರು–1, ಶ್ರೀ ಎಸ್.ಇ.ಗಂಗಾಧರಸ್ವಾಮಿ ಅಪರ ಪೊಲೀಸ್ ವರಿಷ್ಠಾಧಿಕಾರಿರವರು–2 ಮಂಡ್ಯ ಜಿಲ್ಲೆ ಹಾಗೂ ಶ್ರೀರಂಗಪಟ್ಟಣ ಉಪವಿಭಾಗದ ಆರಕ್ಷಕ ಉಪಾಧೀಕ್ಷಕರಾದ ಶ್ರೀ ಯು.ಡಿ.ಕೃಷ್ಣಕುಮಾರ್ ರವರ ಮಾರ್ಗದರ್ಶನದಲ್ಲಿ ಶ್ರೀ ಆನಂದಕುಮಾರ್ ಹೆಚ್. ಪಿ.ಐ. ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆ, ಶ್ರೀ ಹೆಚ್. ಆರ್.ವಿವೇಕಾನಂದ ಸರ್ಕಲ್ ಇನ್ಸ್ಪೆಕ್ಟರ್, ಶ್ರೀ ಶರತ್ ಹೆಚ್.ಪಿ, ಪೊಲೀಸ್ ಇನ್ಸ್ಪೆಕ್ಟರ್ ಪಾಂಡವಪುರ ಠಾಣೆ. ರವರ ನೇತೃತ್ವದಲ್ಲಿ ಶ್ರೀ ವಿನೋಧ್‌ಕುಮಾರ್ ಪಿಎಸ್‌ಐ, ಅರಕೆರೆ ಪೊಲೀಸ್ ಠಾಣೆ, ಎ.ಎಸ್.ಐ ಕುಮಾರ್.ಟಿ.ಎಸ್, ಸಿಹೆಚ್‌ಸಿ ಲೋಕೇಶ್, ರವಿಕಿರಣ್, ಲೋಕೇಶ್, ಸಿಪಿಸಿ ಯವರಾದ ಹಫೀಜ್ ಪಾಷ, ಮಂಜುನಾಥ, ದಿನೇಶ್, ರಾಜೇಶ್ ರವರನ್ನೊಳಗೊಂಡ ತಂಡವನ್ನು ರಚನೆ ಮಾಡಲಾಗಿತ್ತು.

ಸದರಿ ಆರೋಪಿಗಳ ಪತ್ತೆ ಕಾರ್ಯದ ತಂಡವು ದಿನಾಂಕ:– 11–05–2026 ರಂದು ರಾತ್ರಿ 10–30 ಗಂಟೆಯ ಸಮಯದಲ್ಲಿ ನಗುವಿನಹಳ್ಳಿ ಅಂಡರ್ ಪಾಸ್ ಬಳಿ ಅದೇ ದಿನ ಸಂಜೆ ಸುಮಾರು 06–00 ಗಂಟೆ ಸಮಯದಲ್ಲಿ ಮಂಡ್ಯದಲ್ಲಿ ಆರೋಪಿ 2 ರಿಂದ 6 ಆರೋಪಿಗಳನ್ನು ದಸ್ತಗಿರಿ ಮಾಡಿ ವಶಕ್ಕೆ ಪಡೆದುಕೊಂಡಿರುತ್ತದೆ.

1. ಮಹಮ್ಮದ್ ಅಪ್ಸರ್ @ ಫ್ರೂಟ್ ಅಪ್ಸರ್ ಬಿನ್ ಲೇ:ಅಬ್ದುಲ್ಲಾ, 38 ವರ್ಷ, ಹಣ್ಣಿನ ವ್ಯಾಪಾರ, ಮಂಡಿ ಮೊಹಲ್ಲಾ, ಮೈಸೂರು.
2. ಮಹಮ್ಮದ್ ಅಹ್ಮದ್ ಖಾನ್ ಎಂ.ಎ @ ಸುಹೈಲ್‌ಖಾನ್ ಬಿನ್ ಲೇಟ್ ನಾಸೀರ್‌ಖಾನ್, 38 ವರ್ಷ, ಲಾರಿ ಡ್ರೈವರ್ ಮತ್ತು ರ?ಯಾಪಿಡೋ, ರಿಯಲ್ ಎಸ್ಟೇಟ್ ಕೆಲಸ, #2423, 2ನೇ ಕ್ರಾಸ್, 2ನೇಹಂತ, ರಾಜೀವ್‌ನಗರ, ಮೈಸೂರು ಸಿ.ಟಿ.
3. ಮುಜಾಹಿದ್ ಪಾಷಾ ಬಿನ್ ಲೇ:ಪ್ಯಾರೆಜಾನ್, 37 ವರ್ಷ, ಕಾರ್ ಡೀಲರ್ ಕೆಲಸ, ಇಮ್ರಾ ಮಸೀದಿ ಹಿಂದೆ, ರಾಜೀವ್‌ನಗರ,
4. ಸೈಯದ್ ಮುದಾಸೀರ್ ಬಿನ್ ಲೇ:ಸೈಯದ್ ಅಕ್ರಂ, 27 ವರ್ಷ, ಎಲೆಕ್ಟ್ರಿಕ್ ಕೆಲಸ, ರಾಜೀವ್‌ನಗರ 3ನೇ ಹಂತ, ಮೈಸೂರು.
5. ಯಾಸೀನ್ ಷರೀಫ್ ಬಿನ್ ಲೇ:ಮುಹದ್ದೀನ್ ಷರೀಫ್, 31 ವರ್ಷ, ಇಂಟೀರಿಯರ್ ಕೆಲಸ, ರಾಜಕುಮಾರ್ ರೋಡ್, ಕಲ್ಯಾಣಗಿರಿ,
6. ಮಹಮ್ಮದ್ ಅಜರ್ ಬಿನ್ ಲೇ:ನಜೀರ್ ಅಹಮ್ಮದ್, 32 ವರ್ಷ, ಫರ್ನಿಚರ್ ಕಟಿಂಗ್ ಕೆಲಸ, ಸುಲ್ತಾನ್ ರೋಡ್, ಶಾಂತಿನಗರ, ರವರುಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ. ತನಿಖೆ ಮುಂದುವರಿದಿರುತ್ತದೆ.

ಆರೋಪಿತರುಗಳಿಂದ ಕೃತ್ಯಕ್ಕೆ ಉಪಯೋಗಿಸಿದ್ದ ಬೈಕುಗಳು ಮೊಬೈಲ್ ಪೋನುಗಳನ್ನು ಅಮಾನತ್ತುಪಡಿಸಿಕೊಂಡಿಸಿರುತ್ತದೆ.

ಆರೋಪಿಗಳು ಮತ್ತು ಮೃತನ ನಡುವೆ ಹಳೇ ವೈಷಮ್ಯ ಮತ್ತು ಹಣಕಾಸಿನ ವಿಚಾರದಲ್ಲಿ ಕಿರುಕುಳವಿದ್ದ ಬಗ್ಗೆ ಆರೋಪಿ ಮಹಮ್ಮದ್ ಅಪ್ಸರ್‌ನು ಮೃತ ಮಹಮ್ಮದ್ ಜಾವಾದ್ ಆಲಂ ನನ್ನು ಕೊಲೆ ಮಾಡಲು ಹಣಕಾಸಿನ ಬೆಂಬಲ ನೀಡಿ ಸಂಚು ರೂಪಿಸಿ, ಉಳಿದ ಆರೋಪಿಗಳ ಕಡೆಯಿಂದ ಶ್ರೀರಂಗಪಟ್ಟಣ ತಾಲ್ಲೂಕು ಹಳ್ಳಿಮನೆ ಹೋಟೆಲ್ ಹಿಂಭಾಗದ ಪಾಲಹಳ್ಳಿಗೆ ಹೋಗುವ ರಸ್ತೆಯ ಪಕ್ಕದ ಜಮೀನಿಗೆ ಕರೆದುಕೊಂಡು ಹೋಗಿ ಮಾರಕಾಸ್ತ್ರಗಳಿಂದ ಚುಚ್ಚಿ ಕೊಲೆ ಮಾಡಿರುವುದಾಗಿ ತಿಳಿದುಬಂದಿರುತ್ತದೆ.

ಶ್ರೀರಂಗಪಟ್ಟಣ ಉಪವಿಭಾಗದ ಅಧಿಕಾರಿ/ ಸಿಬ್ಬಂಧಿಯವರನ್ನು ಡಾ. ಶೋಭಾರಾಣಿ ವಿ.ಜೆ. ಐಪಿಎಸ್, ಜಿಲ್ಲಾ ಪೊಲೀಸ್ ಅಧೀಕ್ಷರು ಮೆಚ್ಚುಗೆ ವ್ಯಕ್ತಪಡಿಸಿರುತ್ತಾರೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಬಿತ್ತನೆ ಬೀಜದ ಗುಣಮಟ್ಟ ಖಾತ್ರಿ ಪಡಿಸಿ ವಿತರಿಸಿ

## ಜಿಲ್ಲಾಧಿಕಾರಿ ಡಾ. ಕುಮಾರ ಸೂಚನೆ



**ಮಂಡ್ಯ:** ಮುಂಗಾರು ಹಂಗಾಮು ಆರಂಭವಾಗಿರುವ ಹಿನ್ನೆಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಸಮರ್ಪಕವಾಗಿ ದಾಸ್ತಾನು ಇಟ್ಟು, ಗುಣಮಟ್ಟದ ಬೀಜಗಳನ್ನು ರೈತರಿಗೆ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ 2026–27ನೇ ಸಾಲಿನ ಮುಂಗಾರು ಹಂಗಾಮಿನ ರಸಗೊಬ್ಬರಗಳ ಸಮರ್ಪಕ ಸರಬರಾಜು ಮತ್ತು ವಿತರಣೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಮುಂಗಾರು ಬಿತ್ತನೆಗೆ ರೈತರು ಸಿದ್ಧತೆ ಮಾಡಿಕೊಂಡಿದ್ದು, ಅಧಿಕಾರಿಗಳು ಬಿತ್ತನೆ ಬೀಜಗಳ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಂಡು ವಿತರಣೆ ಮಾಡಬೇಕು. ಕಳಪೆ ಬೀಜ ಹಾಗೂ ರಸಗೊಬ್ಬರಗಳ ಮಾರಾಟಕ್ಕೆ ಅವಕಾಶ ನೀಡಬಾರದು ಎಂದು ಸೂಚಿಸಿದರು.

ರಸಗೊಬ್ಬರ ಮಳಿಗೆಗಳಲ್ಲಿ ದಾಸ್ತಾನು ಹಾಗೂ ದರಪಟ್ಟಿಯನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಜಿಲ್ಲೆಯ ಎಲ್ಲ ರಸಗೊಬ್ಬರ ಪರಿವೀಕ್ಷಕರು ತಮ್ಮ ವ್ಯಾಪ್ತಿಯ ಮಳಿಗೆಗಳಿಗೆ ನಿಯಮಿತ ವಾಗಿ ಭೇಟಿ ನೀಡಿ ದಾಸ್ತಾನು ಪರಿಶೀಲನೆ ನಡೆಸಿ, ಯಾವುದೇ ಕೊರತೆ ಉಂಟಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ದೊರಕುವಂತೆ ಕ್ರಮ ಕೈಗೊಳ್ಳಬೇಕು. ಜೊತೆಗೆ ರಾಸಾಯನಿಕ ಗೊಬ್ಬರಗಳಿಗೆ ಪರ್ಯಾಯವಾಗಿ ಹಸಿರೆಲೆ ಗೊಬ್ಬರ ಬಳಕೆಯ ಕುರಿತು ರೈತರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ರೈತರಿಗೆ ಅಗತ್ಯ ಸಮಯದಲ್ಲಿ ಬೀಜ, ಗೊಬ್ಬರ, ಕೀಟನಾಶಕ ಸೇರಿದಂತೆ ಇತರೆ ಕೃಷಿ ಸಾಮಗ್ರಿಗಳು ಲಭ್ಯವಾಗುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ತಿಳಿಸಿದರು.

**ಗೊಬ್ಬರ ಖರೀದಿಗೆ ಎಫ್‌ಐಡಿ ಕಡ್ಡಾಯ:** ಸರ್ಕಾರಿ ಸೌಲಭ್ಯಗಳು ಹಾಗೂ ರಸಗೊಬ್ಬರ ಪಡೆಯಲು ರೈತರಿಗೆ ಎಫ್‌ಐಡಿ (ಫ್ರೂಟ್ಸ್ ಐಡಿ) ಕಡ್ಡಾಯಗೊಳಿಸಲಾಗಿದೆ. ಹೊಸದಾಗಿ ಎಫ್‌ಐಡಿ ಪಡೆಯಲು ಅಥವಾ ಈಗಿರುವ ಐಡಿಗೆ ಸರ್ವೆ ನಂಬರುಗಳನ್ನು ಜೋಡಿಸಲು ರೈತರು ದಾಖಲೆಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ಪಿಎಂ–ಕಿಸಾನ್, ಬರ ಪರಿಹಾರ, ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಬ್ಸಿಡಿ ಪಡೆಯಲು ಈ ಐಡಿ ಅತ್ಯಗತ್ಯವಾಗಿದ್ದು, ಇದರ ಕುರಿತು ರೈತರಿಗೆ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

**ರಸಗೊಬ್ಬರ, ಬೀಜ ಕೊರತೆ ತಡೆಗೆ ನಿಗಾ:** ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಉಂಟಾಗದಂತೆ ನಿಗಾವಹಿಸಬೇಕು. ಜೊತೆಗೆ ರಾಸಾಯನಿಕ ಗೊಬ್ಬರ ಬಳಕೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡುವ ಕುರಿತು ರೈತರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಅಶೋಕ್, ತೋಟಗಾರಿಕೆ ಜಂಟಿ ನಿರ್ದೇಶಕಿ ರೂಪಶ್ರೀ, ಪಶು ಸಂಗೋಪನೆ ಇಲಾಖೆಯ ಉಪ ನಿರ್ದೇಶಕ ಶಿವಲಿಂಗಯ್ಯ, ಕೃಷಿ ಇಲಾಖೆಯ ಅಧಿಕಾರಿಗಳು, ರಸಗೊಬ್ಬರ ಹಾಗೂ ಬಿತ್ತನೆ ಬೀಜ ಪೂರೈಕೆದಾರರು ಉಪಸ್ಥಿತರಿದ್ದರು.

# ಮೇ 16ರಂದು ಯಕ್ಷಗಾನ, ನಾಟಕ ಪ್ರದರ್ಶನ ಹಾಗೂ ವಿದ್ಯಾರ್ಥಿ ವೇತನ ವಿತರಣೆ




**ಮಂಡ್ಯ:** ಕರ್ನಾಟಕ ಮೂಡಲಪಾಯ ಯಕ್ಷಗಾನ ಪರಿಷತ್ತು, ಆದಿಚುಂಚನಗಿರಿ ಮೂಡಲಪಾಯ ಯಕ್ಷಗಾನ ಕೇಂದ್ರ ಹಾಗೂ ಕರ್ನಾಟಕ ಸಂಘದ ವತಿಯಿಂದ ಯಕ್ಷಗಾನ ಪ್ರಸಂಗ, ನಾಟಕ ಪ್ರದರ್ಶನ ಹಾಗೂ ವಿದ್ಯಾರ್ಥಿ ವೇತನ ಪ್ರದಾನ ಕಾರ್ಯಕ್ರಮವು ಮೇ 16ರಂದು ಸಂಜೆ 4 ಗಂಟೆಗೆ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ನಡೆಯಲಿದೆ ಎಂದು ಕರ್ನಾಟಕ ಸಂಘದ ಕಾರ್ಯದರ್ಶಿ ಚಂದಗಾಲು ಪಿ. ಲೋಕೇಶ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮವನ್ನು ಕರ್ನಾಟಕ ಯಕ್ಷಗಾನ ಅಕಾಡೆಮಿಯ ಅಧ್ಯಕ್ಷ ಡಾ. ತಲ್ಲೂರು ಶಿವರಾಮಶೆಟ್ಟಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ನಮ್ರತ, ಸಮಾಜ ಸೇವಕರಾದ ಆರ್‌ಟಿಓ ಮಲ್ಲಿಕಾರ್ಜುನ್, ಜನಾರ್ಧನ್, ನಿವೃತ್ತ ಪ್ರಾಧ್ಯಾಪಕ ಡಾ. ಚಿಕ್ಕಣ್ಣ ಯಣ್ಣೆಕಟ್ಟೆ ಹಾಗೂ ಆಂಧ್ರಪ್ರದೇಶದ ಆದಾಯ ತೆರಿಗೆ ಇಲಾಖೆಯ ಮುಖ್ಯ ಆಯುಕ್ತ ಜಯರಾಂ ರಾಯಪುರ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಟಕದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಣೆ ಮಾಡಲಾಗುವುದು.

ಕಾರ್ಯಕ್ರಮದ ಅಂಗವಾಗಿ ಸಂಜೆ 4 ಗಂಟೆಗೆ ಆದಿಚುಂಚನಗಿರಿ ಮೂಡಲಪಾಯ ಯಕ್ಷಗಾನ ಕೇಂದ್ರದ ಡಿಪ್ಲೋಮಾ ವಿದ್ಯಾರ್ಥಿಗಳಿಂದ ?ದೇವಿಮಹಾತ್ಮೆ? ಮೂಡಲಪಾಯ ಯಕ್ಷಗಾನ ಪ್ರಸಂಗ ಪ್ರದರ್ಶನಗೊಳ್ಳಲಿದೆ. ನಂತರ ಸಂಜೆ 7 ಗಂಟೆಗೆ ?ಅತ್ತಲಾ ಕಿಷ್ಕಿಂದೆಯೊಳ್? (ಶ್ರೀರಾಮಾಯಣದರ್ಶನಂ ಮಹಾಕಾವ್ಯ ಆಧಾರಿತ) ನಾಟಕ ಪ್ರದರ್ಶನ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ವಿಶ್ರಾಂತ ಪ್ರಾಂಶುಪಾಲ ಡಾ. ಎಸ್.ಬಿ. ಶಂಕರಗೌಡ, ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಕೆ. ಹರೀಶ್‌ಕುಮಾರ್ ಹಾಗೂ ಕಾರ್ಯದರ್ಶಿ ಎಚ್.ಡಿ. ಸೋಮಶೇಖರ್ ಉಪಸ್ಥಿತರಿದ್ದರು

# ಉಡುಪಿಯ 'ನುಡಿ ಸಂಭ್ರಮ'ದಲ್ಲಿ ಮೂವರು ಸಾಧಕಿಯರಿಗೆ 'ನುಡಿಭೂಷಣ' ಪ್ರಶಸ್ತಿ ಪ್ರದಾನ





**ಬೆಂಗಳೂರು/ಉಡುಪಿ:** ಕನ್ನಡ ನಾಡು–ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಶ್ರಮಿಸುತ್ತಿರುವ 'ನುಡಿತೋರಣ' ಬಳಗದ ನಾಲ್ಕನೇ ವಾರ್ಷಿಕೋತ್ಸವ 'ನುಡಿ ಸಂಭ್ರಮ–2026' ಇದೇ ಮೇ 23 ಮತ್ತು 24 ರಂದು ಉಡುಪಿಯಲ್ಲಿ ಜರುಗಲಿದೆ. ಈ ಸಂಭ್ರಮದ ವೇದಿಕೆಯಲ್ಲಿ ಸಾಹಿತ್ಯ ಕ್ಷೇತ್ರದ ವಿವಿಧ ಆಯಾಮಗಳಲ್ಲಿ ಗಣನೀಯ ಸಾಧನೆ ಮಾಡಿದ ಮೂವರು ಮಹಿಳಾ ಸಾಧಕಿಯರಿಗೆ ಪ್ರತಿಷ್ಠಿತ 'ನುಡಿಭೂಷಣ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

**ಪ್ರಶಸ್ತಿ ಪುರಸ್ಕೃತರು:** ಶ್ರೀಮತಿ ಶೈಲಾ ಜಯಕುಮಾರ್ (ಚಿತ್ರದುರ್ಗ): ಚಿತ್ರದುರ್ಗದ ಅಪರ್ಣಾ ಎಂದೇ ಖ್ಯಾತಿ ಪಡೆದಿರುವ ಇವರು, ನಿವೃತ್ತ ಆಂಗ್ಲ ಭಾಷಾ ಉಪನ್ಯಾಸಕಿ ಹಾಗೂ ಹೆಸರಾಂತ ವಾಗ್ಮಿ. ಕಥೆ, ಕವನ, ವ್ಯಕ್ತಿಚಿತ್ರಣ ಸೇರಿದಂತೆ 14ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿರುವ ಇವರು ಸಾಂಸ್ಕೃತಿಕ ಲೋಕದ ಸಕ್ರಿಯ ಚೇತನ.

ಶ್ರೀಮತಿ ರಾಧಾ ಟೇಕಲ್ (ಬೆಂಗಳೂರು): ಹಿರಿಯ ಸಾಹಿತಿ ಸಿದ್ಧವನಹಳ್ಳಿ ಕೃಷ್ಣಶರ್ಮರ ಪುತ್ರಿಯಾದ ಇವರು, ತೆಲುಗು ಮತ್ತು ಉರ್ದು ಭಾಷೆಯ ಶ್ರೇಷ್ಠ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿದ ಅಪ್ರತಿಮ ಅನುವಾದಕಿ. ಸುಮಾರು 20ಕ್ಕೂ ಹೆಚ್ಚು ಕಾದಂಬರಿಗಳನ್ನು ಕನ್ನಡಕ್ಕೆ ನೀಡಿದ ಇವರ ಸಾಹಿತ್ಯಿಕ ಬದ್ಧತೆ ಅಪಾರ.

ಶ್ರೀಮತಿ ಶೋಭಾ ಹರಿಪ್ರಸಾದ್ (ಉಡುಪಿ): ಛಂದೋಬದ್ಧ ಕಾವ್ಯ ರಚನೆಯಲ್ಲಿ ಸಿದ್ಧಹಸ್ತರಿರುವ ಇವರು 'ಶೋಭಾ ರಾಮಾಯಣ' ಎಂಬ ಬೃಹತ್ ಗ್ರಂಥದ ಮೂಲಕ ಪ್ರಸಿದ್ಧರು. ಹತ್ತಾರು ಸಾಹಿತ್ಯ ಪ್ರಕಾರಗಳಲ್ಲಿ ಪರಿಣಿತಿ ಪಡೆದಿರುವ ಇವರು ಉದಯೋನ್ಮುಖ ಕವಿಗಳಿಗೆ ಮಾರ್ಗದರ್ಶಕರೂ ಹೌದು.

ಮೇ 23 ಮತ್ತು 24 ರಂದು ನಡೆಯಲಿರುವ ಎರಡು ದಿನಗಳ ಈ ಸಾಹಿತ್ಯಿಕ ಹಬ್ಬದಲ್ಲಿ ನಾಡಿನ ಗಣ್ಯರ ಸಮ್ಮುಖದಲ್ಲಿ ಈ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ನುಡಿತೋರಣ ಬಳಗವು ಪ್ರಕಟಣೆಯಲ್ಲಿ ತಿಳಿಸಿದೆ.

# ಹೃದಯಾಘಾತ, ಸ್ಟ್ರೋಕ್ ಚಿಕಿತ್ಸೆಗೆ ಗೋಲ್ಡನ್ ಅವರ್ ಮಹತ್ವ



**ಮಂಡ್ಯ:** ಮೆದುಳು ಹಾಗೂ ಹೃದಯ ಸಂಬಂಧಿತ ತುರ್ತು ಪರಿಸ್ಥಿತಿಯ ಮೊದಲ ಒಂದು ಗಂಟೆಯೊಳಗೆ (ಗೋಲ್ಡನ್ ಅವರ್) ಚಿಕಿತ್ಸೆ ಒದಗಿಸುವುದು ಅನಿವಾರ್ಯವಾಗಿರುತ್ತದೆ ಎಂದು ಮೈಸೂರಿನ ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಬಿ.ಜೆ.ಸಂದೀಪ್ ಪಟೇಲ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಮಣಿಪಾಲ್ ಆಸ್ಪತ್ರೆಯನ್ನು ಅರಸಿ ಮಂಡ್ಯದಿಂದ ಹೆಚ್ಚು ರೋಗಿಗಳು ಭೇಟಿ ನೀಡುತ್ತಾರೆ. ಆದ ಕಾರಣ ಮೆದುಳಿನ ತುರ್ತು ಪರಿಸ್ಥಿತಿ ಹಾಗೂ ಹಠಾತ್ ಹೃದಯ ಸಂಬಂಧಿತ ಸಮಸ್ಯೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅನಿವಾರ್ಯವಾಗಿದೆ ಎಂದರು.

ಬದಲಾದ ಜೀವನ ಶೈಲಿ, ಬಿಪಿ, ಮಧುಮೇಹದಂತಹ ಸಮಸ್ಯೆಗಳಿಂದಾಗಿ ಹೃದಯಾಘಾತಕ್ಕೆ ಹೆಚ್ಚು ಮಂದಿ ಒಳಗಾಗುತ್ತಿದ್ದಾರೆ. ಮಂಡ್ಯ ಮತ್ತು ಮೈಸೂರಿನಲ್ಲಿ ಪ್ರತಿ 5 ಮಂದಿಯಲ್ಲಿ ಒಬ್ಬರು ಮಧುಮೇಹಕ್ಕೆ ಒಳಗಾಗಿರುತ್ತಾರೆ. ಹೃದಯ ಸಂಬಂಧ ಯಾವುದೇ ಲಕ್ಷಣಗಳನ್ನು ನಿರ್ಲಕ್ಷಿಸದೇ ಹತ್ತಿರದ ಆಸ್ಪತ್ರೆಯಲ್ಲಿ ತಪಾಸಣೆಗೆ ಒಳಪಡಿಸಬೇಕು. ಮಣಿಪಾಲ್ ಆಸ್ಪತ್ರೆಯಲ್ಲಿ ನುರಿತ ಚಿಕಿತ್ಸೆ ಒದಗಿಸಲಾಗುತ್ತಿದ್ದು, ಸಮಸ್ಯೆ ಪತ್ತೆಯಾದ ಕೂಡಲೇ ದಾಖಲಾದಲ್ಲಿ ರೋಗಿಗಳನ್ನು ಉಳಿಸಿಕೊಳ್ಳಬಹುದು ಎಂದು ಹೇಳಿದರು.

ನ್ಯೂರೋಸರ್ಜನ್ ಡಾ.ಎ.ಆರ್. ಮಕ್ಸೂದ್ ಅಹ್ಮದ್ ಮಾತನಾಡಿ, ಮೆದುಳು ಮತ್ತು ಹೃದಯ ಸಂಬಂಧಿತ ಅಟ್ಯಾಕ್‌ಗಳು ಒಂದೇ ಮಾದರಿಯವಾಗಿವೆ. ಎರಡಕ್ಕೂ ರಕ್ತನಾಳಗಳಲ್ಲಿ ರಕ್ತ ಸಂಚಲಕ್ಕೆ ಅಡ್ಡಿ ಉಂಟಾದಾಗ ಸಮಸ್ಯೆ ಎದುರಾಗುತ್ತದೆ. ಹೃದಯಕ್ಕೆ ಈಗಾಗಾಗ ಹೃದಯ ಸ್ತಂಭನವಾಗುತ್ತದೆ. ಆದರೆ ಮೆದುಳಿನಲ್ಲಿ ಆಯಾ ಭಾಗಕ್ಕೆ ರಕ್ತ ಸಂಚಲನ ನಿಂತಾಗ ದೇಹದ ಇದಕ್ಕೆ ಸಂಬಂಧಿತ ಅಂಗಗಳು ಕೆಲಸ ಮಾಡುವುದನ್ನು ನಿಲ್ಲಿಸುತ್ತವೆ ಎಂದು ಮಾಹಿತಿ ನೀಡಿದರು.

ತಲೆಗೆ ಪೆಟ್ಟಾದಾಗ ಅಗತ್ಯ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವುದು ಅಗತ್ಯ. ಮೊದಲ ಎರಡು ಗಂಟೆಯಲ್ಲಿ ರೋಗಿಗೆ ಏನಾಗಿದೆ ಎಂಬುದನ್ನು ಪತ್ತೆಹಚ್ಚಲು ಕೂಡಲೇ ಆಸ್ಪತ್ರೆಗೆ ದಾಖಲಿಸಬೇಕು. ಇಲ್ಲವಾದಲ್ಲಿ ಎರಡನೇ ಹಂತದ ಬ್ರೈನ್ ಡ್ಯಾಮೇಜ್ ಆಗುವ ಸಾಧ್ಯತೆಗಳಿರುತ್ತವೆ. ಮೆದುಳಿಗೆ ಸಂಬಂಧಿಸದಂತೆ ಬಿ ಫಾಸ್ಟ್ (ಃಇ ಈಂಖಖ) ವಿಧಾನದ ಮೂಲಕ ತುರ್ತು ಚಿಕಿತ್ಸೆಯ ಅವಶ್ಯಕತೆ ತಿಳಿಯಬಹುದು. ಸ್ಥಿರತೆ, ಕಣ್ಣೋಟ, ಮುಖದಲ್ಲಿ ಸೆಳೆತ, ಅಂಗಗಳ ಅಲುಗಾಡಿಸುವಿಕೆ, ತೊದಲುವಿಕೆ, ಪರೀಕ್ಷೆ ಮೂಲಕ ಬ್ರೈನ್ ಸ್ಟ್ರೋಕ್‌ಗೆ ಚಿಕಿತ್ಸೆ ನೀಡಿ ಜೀವ ಉಳಿಸಬಹುದು ಎಂದು ಹೇಳಿದರು.

ಮಣಿಪಾಲ್ ಆಸ್ಪತ್ರೆಯಲ್ಲಿ ಬಿಪಿಎಲ್ ಕಾರ್ಡುದಾರರಿಗೆ ಅಥವಾ ಬಡತನ ರೇಖೆಗಿಂತ ಕೆಳಗಿರುವವರಿಗೆ ಮಣಿಪಾಲ್ ಫೌಂಡೇಷನ್‌ನಿಂದ ಸಂಸ್ಥೆ ಸಿಆರ್‌ಎಸ್ ನಿಧಿಯಿಂದ 1.5 ಲಕ್ಷ ರೂ. ವರೆಗೆ ಚಿಕಿತ್ಸಾ ವೆಚ್ಚಕ್ಕೆ ನೆರವು ಮಾಡಲಾಗುವುದು. ಪ್ರತಿ ತಿಂಗಳು ಈ ರೀತಿ 45ರಿಂದ 50 ಲಕ್ಷ ರೂ. ಗಳ ವರೆಗೆ ಚಿಕಿತ್ಸೆ ವೆಚ್ಚ ಭರಿಸಲಾಗುತ್ತಿದೆ ಎಂದು ಪ್ರಶ್ನೆಗೆ ಉತ್ತರಿಸಿದರು.

ಗೋಷ್ಠಿಯಲ್ಲಿ ವೈದ್ಯರಾದ ಡಾ.ಸಿ.ಬಿ.ಕೇಶವಮೂರ್ತಿ, ಡಾ.ಕುಪೇಂದ್ರ ಶಣೈ ಇದ್ದರು.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

**ಮಂಡ್ಯ:** ಮದ್ದೂರು ತಾಲ್ಲೂಕಿನ ಸೋಮನಹಳ್ಳಿ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದಿಂದ ಬಿ ಎಸ್ಸಿ. ಎಮ್ ಎಸ್ಸಿ ಮತ್ತು ಬಿ.ಇ., ಬಿ.ಟೆಕ್ (ಇ ಇ ಇ) ವಿದ್ಯಾರ್ಹತೆ ಹೊಂದಿರುವ ಪೂರ್ಣಾವಧಿ ಅತಿಥಿ ಉಪನ್ಯಾಸಕರ ನೇಮಕಾತಿ ನೇರ ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಸದರಿ ನೇಮಕಾತಿಗೆ ಮೇ 20 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸಲು ವೆಬ್ ಸೈಟ್ : **gttcmaddur@gmail.com** ಗೆ ಸಂಪೂರ್ಣ ಮಾಹಿತಿಯನ್ನು ಸಲ್ಲಿಸಿ ಮೇ 21 ರಂದು ಬೆಳಿಗ್ಗ 10:00 ಗಂಟೆಗೆ ನೇರ ಸಂದರ್ಶನಕ್ಕೆ ಹಾಜರಾಗಬೇಕು.ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರಾದ ಡಾ. ಮದನ್ ಕೆ. ರವರ ದೂ.ಸಂ.9964679968 ಅನ್ನು ಸಂಪರ್ಕಿಸಬಹುದು ಎಂದು ಮದ್ದೂರು ಸೋಮನಹಳ್ಳಿ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಮಾನಸಿಕ ಅನಾರೋಗ್ಯಕ್ಕೆ ಪುಸ್ತಕ ಓದುವುದೇ ಮದ್ದು

## ಮಲಗುವ ಮುನ್ನ ಪುಸ್ತಕ ಓದಿ ಮನಸ್ಸಿನ ಕೊಳೆ ತೊಳೆದುಕೊಳ್ಳಿ ಡಾ. ಮಾನಸ




**ಮಂಡ್ಯ:** ಇಂದಿನ ನಮ್ಮ ಬಹುತೇಕ ಕಾಯಿಲೆಗಳಿಗೆ ಮಾನಸಿಕ ಆನಾರೋಗ್ಯವೇ ಕಾರಣ. ಮನಸ್ಥಿತಿ ಸರಿ ಇಲ್ಲ ಎಂದಾದರೆ ಪರಿಸ್ಥಿತಿ ಹದಗೆಡುತ್ತದೆ. ಅದಕ್ಕೆ ಮದ್ದು ಪುಸ್ತಕ ಓದುವುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ರವರು ಹೇಳಿದರು.

ಇಂದು(ಮೇ 13) ಚಂದಗಾಲು ಬಡಾವಣೆಯ ಹಿರಿಯ ಪತ್ರಕರ್ತ ಹಾಗೂ ಲೇಖಕ ಚಂದ್ರಶೇಖರ ದ.ಕೋ.ಹಳ್ಳಿ ಅವರ ನಿವಾಸದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಜಿಲ್ಲಾ ಜಾಗೃತ ಸಮಿತಿ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ?ಮನೆಗೊಂದು ಗ್ರಂಥಾಲಯ ಅನುಷ್ಠಾನ? ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಭಕ್ತಿಯೊಂದಿಗೆ ಜ್ಞಾನ ಗಳಿಕೆಗೂ ಆದ್ಯತೆ ನೀಡಬೇಕು. ಅದಕ್ಕೆ ದೇವರ ಮನೆ ಜೊತೆಗೆ ಮನೆಗೊಂದು ಗ್ರಂಥಾಲಯ ನಿರ್ಮಿಸಿಕೊಳ್ಳಬೇಕು. ಮನೆಯ ಗ್ರಂಥಾಲಯ ದೊಡ್ಡವರು ಮತ್ತು ಮಕ್ಕಳಲ್ಲಿ ಆತ್ಮವಿಶ್ವಾಸ ಹಾಗೂ ಆನಂದಕ್ಕೆ ದಾರಿ ಮಾಡಿಕೊಡುತ್ತದೆ. 12ನೆಯ ಶತಮಾನದಲ್ಲಿ ಬಸವಣ್ಣ ಲಿಂಗಧಾರಣೆ ಮತ್ತು ವಚನಗಳ ಮೂಲಕ ಭಕ್ತಿ ಮತ್ತು ಜ್ಞಾನವನ್ನು ಬೆಸೆದು ಜನರ ಬಾಳು ಬೆಳಗಿದನು ಎಂದು ತಿಳಿಸಿದರು.

ಇತಿಹಾಸದ ಕೃತಿಗಳನ್ನು ಓದುವುದರಿಂದ ಭಾರತೀಯ ಸಂಸ್ಕೃತಿ ಪರಿಚಯಿಸಿಕೊಳ್ಳಬಹುದಾಗಿದೆ. ಪ್ರತಿಯೊಬ್ಬರೂ ಪ್ರತಿದಿನ 10 ನಿಮಿಷವಾದರೂ ಪುಸ್ತಕಗಳನ್ನು ಓದಬೇಕು. ಮನಸ್ಸಿನ ಒತ್ತಡವನ್ನು ತೊಡೆದುಹಾಕುವ ಶಕ್ತಿ ಪುಸ್ತಕಗಳಿಗಿವೆ. ಎಲ್ಲರೂ ಪುಸ್ತಕ ಓದುವುದರಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ದೊರೆಯುತ್ತದೆ ಎಂದು ತಿಳಿಸಿದರು.

ಶಿಕ್ಷಕ ಹಾಗೂ ಕವಿ ಕೊತ್ತತ್ತಿ ರಾಜು ಮಾತನಾಡಿ, ಪುಸ್ತಕ ಒಬ್ಬ ಗೆಳೆಯ, ಗುರು ಹಾಗೂ ಆತ್ಮಬಂಧುವಿನಂತೆ. ದೇವರ ಮನೆ ಎಷ್ಟು ಮುಖ್ಯವೋ ಹಾಗೆ ಮನದ ಮನೆಗೆ ಗ್ರಂಥಾಲಯ ಅಷ್ಟೇ ಮುಖ್ಯ ಎಂದು ಅಭಿಪ್ರಾಯಪಟ್ಟರು.

ಡಾ. ಬಿ.ಆರ್. ಅಂಬೇಡ್ಕರ್ ಅಂದಿನ ಕಾಲಕ್ಕೆ 50,000 ಪುಸ್ತಕಗಳ ಗ್ರಂಥಾಲಯ ಹೊಂದಿದ್ದರು. ಅವುಗಳೇ ನನ್ನ ನಿಜವಾದ ಆಸ್ತಿ ಅಂದಿದ್ದರು. ಜಾನ್ ರಸ್ಕಿನ್ ನ ಅಂಟು ದಿಸ್ ಲಾಸ್ಟ್ ಕೃತಿ ಮಹಾತ್ಮ ಗಾಂಧಿಯಲ್ಲಿ ಒಬ್ಬ ಹೋರಾಟಗಾರರನ್ನು ಹುಟ್ಟುಹಾಕಿತು. ಇದು ಪುಸ್ತಕದ ಶಕ್ತಿ ಮತ್ತು ಪ್ರೇರಣೆ ಎಂದು ತಿಳಿಸಿದರು.

ಕವಯಿತ್ರಿ ಹೆಚ್.ಆರ್ ಕನ್ನಿಕ ಅವರು ಮಾತನಾಡಿ ಗ್ರಂಥಾಲಯದ ಇತಿಹಾಸ ಮೆಲುಕು ಹಾಕಿದರು. ಇಂತಹ ಕಾರ್ಯಕ್ರಮಗಳು ಮಕ್ಕಳ ಸಮ್ಮುಖದಲ್ಲಿ ನಡೆಯಬೇಕು. ಅವರಲ್ಲಿ ಜಾಗೃತಿ ಮೂಡಿಸಬೇಕು. ಮಕ್ಕಳು, ವಿದ್ಯಾರ್ಥಿಗಳು ಪುಸ್ತಕ ಪ್ರೀತಿ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಪೋಷಕರಲ್ಲಿ ಪುಸ್ತಕ ಪ್ರೀತಿಗಿಂತ ದೇವರ ಭಕ್ತಿ ಹೆಚ್ಚಾಗಿದೆ. ಜ್ಞಾನಾರ್ಜನೆಗೆ ಮೊದಲ ಆದ್ಯತೆ ನೀಡಬೇಕು ಎಂದು ಹೇಳಿದ ಅವರು ತಮ್ಮ ನವೋದಯ ತರಬೇತಿ ಕೇಂದ್ರದಲ್ಲಿ ಮಕ್ಕಳು ಮತ್ತು ಪೋಷಕರಿಗಾಗಿ ಮನೆಗೊಂದು ಗ್ರಂಥಾಲಯ ಮಹತ್ವ ಕುರಿತು ಕಾರ್ಯಕ್ರಮ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಜಿಲ್ಲಾ ಜಾಗೃತ ಸಮಿತಿಯ ಸಂಚಾಲಕರಾದ ಕಾರಸವಾಡಿ ಮಹಾದೇವ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಲಾ ಗ್ರಂಥಾಲಯಗಳನ್ನು ಪುನಶ್ಚೇತನ ಗೊಳಿಸುವಂತೆ ಸರ್ಕಾರಕ್ಕೆ ಸಲಹೆ ನೀಡುವಂತೆ ಡಾ. ಮಾನಸ ಅವರಲ್ಲಿ ಕೋರಿದರು.

ಅಭಿನಂದನೆ– ಕರಪತ್ರ ಬಿಡುಗಡೆ:

ಇದೇ ಸಂದರ್ಭದಲ್ಲಿ ಚಂದ್ರಶೇಖರ ದ.ಕೋ.ಹಳ್ಳಿ – ಪೂರ್ಣಿಮಾ ವೈ.ಸಿ. ದಂಪತಿಯನ್ನು ಪ್ರಾಧಿಕಾರದ ವತಿಯಿಂದ ಅಭಿನಂದಿಸಲಾಯಿತು. ಮನೆಗೊಂದು ಗ್ರಂಥಾಲಯ ಮಹಾ ಅಭಿಯಾನವನ್ನು ಆರಂಭಿಸಿರುವ ಡಾ. ಮಾನಸ ಅವರನ್ನು ಜಿಲ್ಲಾ ಜಾಗೃತ ಸಮಿತಿ ವತಿಯಿಂದ ಅಭಿನಂದಿಸಲಾಯಿತು. ಮನೆಗೊಂದು ಗ್ರಂಥಾಲಯ ಮಹತ್ವ ಸಾರುವ ಕರಪತ್ರವನ್ನು ಡಾ. ಮಾನಸ ಅವರು ಬಿಡುಗಡೆ ಮಾಡಿದರು.

ಜಿಲ್ಲಾ ಜಾಗೃತ ಸಮಿತಿಯ ಸದಸ್ಯರಾದ ಡಾ. ಎಂ. ಕೆಂಪಮ್ಮ, ಪ್ರಕಾಶಕರಾದ ಮಂಜು ಮುತ್ತೇಗೆರೆ, ಶಿವಕುಮಾರ ಆರಾಧ್ಯ, ಮಂಚಶೆಟ್ಟಿ ಎಂ., ಉಮೇಶ ದಡಮಹಳ್ಳಿ, ಎಸ್. ದೇವರಾಜ್ ಪಂಡಿತ್, ಸದ್ದಾಂ ತಗ್ಗಹಳ್ಳಿ ಉಪಸ್ಥಿತರಿದ್ದರು.

# "ಪೃಥಿಕಾ ಯಶಿನಿ: ಲಿಂಗತ್ವ ಮೀರಿ ನಿಂತ ಸಿಂಗಂ"




ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 20


ಛಲವೊಂದಿದ್ದರೆ ಸಮಾಜದ ಹಂಗು ಅಥವಾ ಲಿಂಗದ ಅಸಮಾನತೆ ನಮ್ಮ ಹಾದಿಯನ್ನು ತಡೆಯಲಾರದು ಎಂಬುದಕ್ಕೆ ಪೃಥಿಕಾ ಯಶಿನಿ ಅತ್ಯುತ್ತಮ ಉದಾಹರಣೆ. ಭಾರತದ ಪೊಲೀಸ್ ಇತಿಹಾಸದಲ್ಲಿ ಮೊಟ್ಟಮೊದಲ ತೃತೀಯಲಿಂಗಿ ಸಬ್–ಇನ್ಸ್‌ಪೆಕ್ಟರ್ ಆಗಿ ನೇಮಕಗೊಳ್ಳುವ ಮೂಲಕ ಇವರು ಹೊಸ ಇತಿಹಾಸ ಸೃಷ್ಟಿಸಿದ್ದಾರೆ.

ತಮಿಳುನಾಡಿನ ಸೇಲಂನಲ್ಲಿ ಜನಿಸಿದ ಇವರು, ತಮ್ಮೊಳಗಿನ ಸ್ತ್ರೀತ್ವದ ಅರಿವಾದಾಗ ಸಮಾಜದ ಅಪಹಾಸ್ಯಕ್ಕೆ ಹೆದರದೆ ಪೃಥಿಕಾ ಆಗಿ ಮರುಜನ್ಮ ಪಡೆದರು. ಬಾಲ್ಯದ ಸಮವಸ್ತ್ರದ ಕನಸನ್ನು ನನಸು ಮಾಡಿಕೊಳ್ಳಲು ಪೊಲೀಸ್ ಇಲಾಖೆಗೆ ಅರ್ಜಿ ಸಲ್ಲಿಸಿದಾಗ, ತೃತೀಯಲಿಂಗಿ ಎಂಬ ಕಾರಣಕ್ಕೆ ಅರ್ಜಿ ತಿರಸ್ಕೃತವಾಯಿತು. ಆದರೆ ಧೃತಿಗೆಡದ ಪೃಥಿಕಾ ಮದ್ರಾಸ್ ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ ನಡೆಸಿ, ತೃತೀಯಲಿಂಗಿಗಳಿಗೂ ಉದ್ಯೋಗದ ಹಕ್ಕು ಇದೆ ಎಂದು ಸಾಬೀತುಪಡಿಸಿದರು.

ಕೇವಲ ಕಾನೂನು ಗೆದ್ದರೆ ಸಾಲದಿತ್ತು, ಮೈದಾನದಲ್ಲಿ ದೈಹಿಕ ಸಾಮರ್ಥ್ಯವನ್ನೂ ಸಾಬೀತುಪಡಿಸಬೇಕಿತ್ತು. ಕಠಿಣ ದೈಹಿಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರೈಸಿ 2017ರಲ್ಲಿ ಸಬ್–ಇನ್ಸ್‌ಪೆಕ್ಟರ್ ಆಗಿ ಅಧಿಕಾರ ವಹಿಸಿಕೊಂಡರು. ಇವರ ಈ ಸಾಧನೆಯು ಶತಮಾನಗಳಿಂದ ತುಳಿತಕ್ಕೊಳಗಾದ ಸಮುದಾಯಕ್ಕೆ ಸಮಾಜದ ಮುಖ್ಯವಾಹಿನಿಗೆ ಬರಲು ಆನೆಬಲ ನೀಡಿತು.



ಪೃಥಿಕಾ ಅವರ ಯಶಸ್ಸು ನಮಗೆ ಕಲಿಸುವ ಪಾಠವೆಂದರೆ,ಸಾಧನೆಗೆ ಲಿಂಗ ಅಥವಾ ಹಿನ್ನೆಲೆ ಅಡ್ಡಿಯಲ್ಲ, ಬದಲಾಗಿ ಕಠಿಣ ಪರಿಶ್ರಮ ಮತ್ತು ಅಚಲವಾದ ಮನೋಬಲವೇ ಮೂಲಮಂತ್ರ. ಸಮಾಜವು ಮುಖ ತಿರುಗಿಸಿದಾಗ, ಅದೇ ಸಮಾಜವು ಗೌರವದಿಂದ ಸೆಲ್ಯೂಟ್ ಹೊಡೆಯುವಂತೆ ಬೆಳೆದ ಪೃಥಿಕಾ ಅವರ ಬದುಕು ಎಂದೆಂದಿಗೂ ಸ್ಫೂರ್ತಿದಾಯಕ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# `ಪಿಚ್ಚರ್` ಚಿತ್ರ ಹಾಡಿಗೆ ಶಿಲ್ಪಾ ಗಣೇಶ್ ಕಂಠ




ನಿರ್ಮಾಪಕಿ ಶಿಲ್ಪಾ ಗಣೇಶ್ ನಿರ್ಮಿಸಿರುವ ಚಿತ್ರ "ಪಿಚ್ಚರ್". ಸಂದೀಪ ಬೆದ್ರ ನಿರ್ದೇಶನದ ಈ ಚಿತ್ರದ ನಾಯಕರಾಗಿ ನಿತ್ಯಪ್ರಕಾಶ್ ಬಂಟ್ವಾಳ್ ನಟಿಸಿದ್ದಾರೆ

ಈ ಚಿತ್ರದ ವಿಶೇಷವೆಂದರೆ ನಿರ್ಮಾಪಕಿ ಶಿಲ್ಪಾ ಗಣೇಶ್ "ಗೋಕುಲದ ರಾಧೆ" ಎಂಬ ಹಾಡನ್ನು ಕನ್ನಡ ಹಾಗೂ ತುಳು ಎರಡು ಭಾಷೆಗಳಲ್ಲೂ ಹಾಡಿದ್ದಾರೆ. ಈ ಮೂಲಕ ನಿರ್ಮಾಪಕಿಯಾಗಿದ್ದ ಶಿಲ್ಪಾ ಗಣೇಶ್ ಅವರು ಈಗ ಗಾಯಕಿಯಾಗಿ ಚಿತ್ರರಂಗ ಪ್ರವೇಶಿಸಿದ್ದಾರೆ. ಶಿಲ್ಪಾ ಗಣೇಶ್ ಹಾಗೂ ಜಸ್ಕರಣ್ ಸಿಂಗ್ ಈ ಹಾಡನ್ನು ಹಾಡಿದ್ದಾರೆ. ಕನ್ನಡದಲ್ಲಿ ಅರಸು ಅಂತಾರೆ ಹಾಗೂ ತುಳುವಿನಲ್ಲಿ ಕೀರ್ತನ್ ಭಂಡಾರಿ ಈ ಹಾಡನ್ನು ರಚಿಸಿದ್ದಾರೆ. ಸ್ಯಾಮ್ಯುಯೆಲ್ ಅಭಿ ಸಂಗೀತ ನೀಡಿದ್ದಾರೆ. ಕಾಶ್ಮೀರದಲ್ಲಿ ಈ ಹಾಡಿನ ಚಿತ್ರೀಕರಣವಾಗಿದೆ. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್ ನಲ್ಲಿ ಈ ಹಾಡು ಬಿಡುಗಡೆಯಾಗಿದೆ. ಹಾಡಿಗೆ ಅಪಾರ ಮೆಚ್ಚುಗೆ ವ್ಯಕ್ತವಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ.

ಕೌಟುಂಬಿಕ, ಕಾಮಿಡಿ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ಮನೋರಂಜನೆಯೇ ಪ್ರಧಾನವಾಗಿದೆ. ನಿರ್ದೇಶಕ ಸಂದೀಪ್ ಬೆದ್ರ ಅವರೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿದ್ದಾರೆ. ಸಂತೋಷ್ ರೈ ಪಾತಾಜೆ ಹಾಗೂ ಚಂದ್ರಶೇಖರ್ ಕೆ.ಎಸ್ ಅವರ ಛಾಯಾಗ್ರಹಣ, ರಾಜು ಆರ್ಯನ್ ಸಂಕಲನ, ಧನಂಜಯ್.ಬಿ – ಶ್ರೀರಾಜು ನೃತ್ಯ ನಿರ್ದೇಶನ, ರಾಧೇಶ್ – ಸಂತೋಷ್ ಪೂಜಾರಿ ಕಲಾ ನಿರ್ದೇಶನ ಹಾಗೂ ಥ್ರಿಲ್ಲರ್ ಮಂಜು ಅವರ ಸಾಹಸ ನಿರ್ದೇಶನವಿರುವ ಈ ಚಿತ್ರಕ್ಕೆ ಮೋಹನ್ ಭಟ್ಕಳ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ.

ನಿತ್ಯಪ್ರಕಾಶ್ ಬಂಟ್ವಾಳ್ "ಪಿಚ್ಚರ್" ಚಿತ್ರದ ನಾಯಕನಾಗಿದ್ದು, ನಾಯಕಿಯಾಗಿ ಅಮೃತ ಸುದು ಅಭಿನಯಿಸಿದ್ದಾರೆ. ದೇವದಾಸ್ ಕಾಪಿಕಾಡ್, ನವೀನ್ ಡಿ ಪಡೀಲ್, ಅರವಿಂದ್ ಬೋಳಾರ್, ಭೋಜರಾಜ್ ವಾಮಂಜೂರ್, ಸಾಯಿಕೃಷ್ಣ, ವಜ್ರಧೀರ್ ಜೈನ್, ಸದಾಶಿವ ಅಮಿನ್, ಪ್ರಸನ್ನ ಶೆಟ್ಟಿ ಬೈಲೂರ್, ಸಂದೀಪ್ ಶೆಟ್ಟಿ ಮಾಣಿ, ಉಮೇಶ್ ಮಿಜಾರ್, ಜಯಶೀಲ ಮರೋಲಿ, ರೂಪ ವರ್ಕಾಡಿ, ರವಿ ರಾಮಕುಂಜ, ಪುಷ್ಪರಾಜ್ ಬೊಳಾರ್, ಅನಿಲ್ ಉಪ್ಪಳ ಮುಂತಾದವರು ಚಿತ್ರದ ತಾರಾಬಳಗ ದಲ್ಲಿದ್ದಾರೆ.





# `ನಾದಯೋಗಿ ಡಾ. ರಾಜಕುಮಾರ್` ಕೃತಿ ಬಿಡುಗಡೆ


ವರನಟ ಡಾ॥ರಾಜಕುಮಾರ್ ಅವರು ನಟರಷ್ಟೇ ಅಲ್ಲ. ಗಾಯಕರೂ ಕೂಡ. ಅವರ ಸುಮಧುರ ಕಂಠಕ್ಕೆ ಮನ ಸೋಲದವರೆ ಇಲ್ಲ. ಡಾ॥ರಾಜ್ ಅವರ ಸಂಗೀತ ಜ್ಞಾನವನ್ನು ಪರಿಚಯಿಸುವ "ನಾದಯೋಗಿ ಡಾ॥ರಾಜಕುಮಾರ್" ಎಂಬ ಪುಸ್ತಕವನ್ನು ಆರ್ ಮಂಜುನಾಥ್ ಚವಾಣ್ ಹಾಗೂ ಡಾ॥ಸೌಮ್ಯ ಮಂಜುನಾಥ್ ಚವಾಣ್ ಬರೆದಿದ್ದು

ಇತ್ತೀಚೆಗೆ ಈ ಪುಸ್ತಕದ ಅನಾವರಣಗೊಂಡಿತು ಡಾ॥ರಾಜ್ ಪುತ್ರಿ ಪೂರ್ಣಿಮಾ ಪುಸ್ತಕ ಅನಾವರಣ ಮಾಡಿದರು. ಡಾ॥ರಾಜ್ ಸಹೋದರ ವರದಪ್ಪ ಪುತ್ರಿ ಡಾ॥ಲತಾ, ಲಹರಿ ಮನೋಹರ ನಾಯ್ಡು, ಲಹರಿ ವೇಲು ಈ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಕನ್ನಡ ಚಿತ್ರ ರಂಗದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕನ್ನಡ ಕಣ್ಮಣಿ ಡಾಕ್ಟರ್ ರಾಜ್ ಕುಮಾರ್ ಅವರ ಪುಸ್ತಕ ಪೂರ್ವ ಆಫ್ರಿಕಾಕ್ಕೆ ತಲುಪುತ್ತಿರುವುದು ನಾಡು ನುಡಿಯ ಹೆಮ್ಮೆಯ ಪ್ರತೀಕವಾಗಿದೆ .

ಪುಸ್ತಕ ಅನಾವರಣ ಮಾಡಿ ಮಾತನಾಡಿದ ಡಾ॥ರಾಜಕುಮಾರ್ ಪುತ್ರಿ ಪೂರ್ಣಿಮಾ ರಾಮಕುಮಾರ್, ನಮ್ಮ ತಂದೆಗೆ ಸಂಗೀತವೆಂದರೆ ಪ್ರಾಣ. ಗಜಲ್ ಬಹಳ ಇಷ್ಟ. ನಮ್ಮ ಮನೆಯಲ್ಲಿ ಎಲ್ಲರೂ ಸಂಗೀತ ಪ್ರೇಮಿಗಳೆ. ನಮ್ಮ ಕುಟುಂಬಕ್ಕೆ ಆತ್ಮೀಯರಾದ ಆರ್ ಮಂಜುನಾಥ್ ಹಾಗೂ ಸೌಮ್ಯ ಮಂಜುನಾಥ್ ಅವರು ಅಪ್ಪಾಜಿ ಅವರಿಗಿದ್ದ ಸಂಗೀತದ ಜ್ಞಾನವನ್ನು ಪರಿಚಯಿಸುವ ಈ ಪುಸ್ತಕವನ್ನು ಬರೆದಿದ್ದಾರೆ. ಈ ಪುಸ್ತಕವನ್ನು ಅನಾವರಣ ಮಾಡಿದ್ದು ಬಹಳ ಖುಷಿಯಾಗಿದೆ ಎಂದರು.

1992 ಜೀವನ ಚೈತ್ರ ಚಿತ್ರದ ಸಂದರ್ಭದಲ್ಲಿ ಡಾ॥ರಾಜಕುಮಾರ್ ಹಾಗೂ ಪಾರ್ವತಮ್ಮ ರಾಜಕುಮಾರ್ ಅವರ ಪರಿಚಯವಾಯಿತು. ಆನಂತರ ಅವರೊಂದಿಗೆ ಹತ್ತಿರದ ಒಡನಾಟವಿತ್ತು. ಡಾ॥ರಾಜಕುಮಾರ್ ಅವರು ಬಹಳ ದೊಡ್ಡ ಸಂಗೀತ ಪ್ರೇಮಿ. ಅವರಿಗೆ ಸಂಗೀತದ ಎಲ್ಲಾ ಪ್ರಕಾರಗಳು ಗೊತ್ತಿತ್ತು. ಅವರ ಸಹೋದರ ವರದಪ್ಪ ಅವರು ಕೂಡ ಸಂಗೀತದ ಬಗ್ಗೆ ಅಪಾರ ಜ್ಞಾನವುಳ್ಳವರಾಗಿದ್ದರು. ಡಾ॥ರಾಜಕುಮಾರ್ ಅವರಿಗೆ ಕರ್ನಾಟಕ ಸಂಗೀತ ಅಷ್ಟೇ ಅಲ್ಲದೆ ಹಿಂದೂಸ್ತಾನಿ ಸಂಗೀತ ಕೂಡ ಪ್ರಿಯ. ಅದರಲ್ಲೂ ಗಜಲ್ ಎಂದರೆ ತುಂಬಾ ಇಷ್ಟ. ಎಪ್ಪತ್ತು ವರ್ಷಗಳಾಗಿದ್ದರೂ ಸಂಗೀತದಲ್ಲಿ ತಮಗೆ ತಿಳಿಯದ ಕೆಲವು ಸಂಗತಿಗಳ ಬಗ್ಗೆ ತಿಳಿದವರಿಂದ ತಿಳಿದುಕೊಳ್ಳುವ ಉತ್ಸಾಹ. ಇದನೆಲ್ಲಾ ಹತ್ತಿರದಿಂದ ಕಂಡಿದ್ದ ನಾನು ಹಾಗೂ ನನ್ನ ಶ್ರೀಮತಿ ಸೌಮ್ಯ, ಡಾ॥ರಾಜಕುಮಾರ್ ಅವರಿಗಿದ್ದ ಸಂಗೀತ ಜ್ಞಾನವನ್ನು ಪುಸ್ತಕ ರೂಪದಲ್ಲಿ ಎಲ್ಲರಿಗೂ ತಿಳಿಸಬೇಕು ಎಂಬ ಉದ್ದೇಶದಿಂದ "ನಾದಯೋಗಿ ಡಾ ರಾಜಕುಮಾರ್ " ಎಂಬ ಪುಸ್ತಕವನ್ನು ಕನ್ನಡ ಹಾಗೂ ಇಂಗ್ಲೀಷ್ ನಲ್ಲಿ ಬರೆದಿದ್ದೇವೆ. ರಾಜಕುಮಾರ್ ಅವರ ಪುತ್ರಿ ಪೂರ್ಣಿಮಾ ರಾಮ್ ಕುಮಾರ್ ಅವರು ಈ ಪುಸ್ತಕ ಅನಾವರಣ ಮಾಡಿಕೊಟ್ಟಿದ್ದು ಬಹಳ ಸಂತೋಷವಾಗಿದೆ. ಅವರಿಗೆ ಹಾಗೂ ಆಗಮಿಸಿರುವ ಗಣ್ಯರಿಗೆ ಧನ್ಯವಾದ. 7.5.1954 ರಾಜಕುಮಾರ್ ಅಭಿನಯದ ಮೊದಲ ಚಿತ್ರ "ಬೇಡರ ಕಣ್ಣಪ್ಪ" ಬಿಡುಗಡೆಯಾಗಿತ್ತು. ಕಾಕತಾಳೀಯವಾಗಿ ಇಂದು 7.5.2026 ನಮ್ಮ "ನಾದಯೋಗಿ ಡಾ॥ರಾಜಕುಮಾರ್" ಪುಸ್ತಕ ಅನಾವರಣವಾಗಿದೆ ಎಂದು ಪುಸ್ತಕ ಲೇಖಕ ಆರ್ ಮಂಜುನಾಥ್ ಚವಾಣ್ ತಿಳಿಸಿದರು.



# ಸೈಬರ್ ಕ್ರೈಂ ಸುತ್ತ ಗೀಕ್

## 50 ಸೆಲೆಬ್ರಿಟಿಗಳಿಂದ ಟೀಸರ್ ಅನಾವರಣ

ಕನ್ನಡದಲ್ಲಿ ವಿವಿಧ ಬಗೆಯ ಕಥಾಹಂದರವಿರುವ ಸಿನಿಮಾಗಳು ಬಂದು ಹೋಗಿವೆ. ಆದರೆ ಸೈಬರ್ ಕ್ರೈಂ ಜಾನರ್ ಹೊಂದಿರುವ ಸಿನಿಮಾಗಳು ತೀರಾ ವಿರಳ. ಅದರ ಜಾಗವನ್ನು ತುಂಬಲು ಗೀಕ್ (GEEK) ಸಿನಿಮಾ ತಯಾರಾಗುತ್ತಿದೆ. ಟೈಟಲ್ ನಿಂದಲೇ ಕುತೂಹಲ ಮೂಡಿಸಿರುವ ಈ ಚಿತ್ರ, ಶೀರ್ಷಿಕೆಯಿಂದ ಗಮನ ಸೆಳೆದಿದೆ. ಹಾಗೆಯೇ ಗೀಕ್ ಎಂದರೆ ಏನು ಅರ್ಥ ಎಂಬುದರ ಕುರಿತು ಚರ್ಚೆ ನಡೆಯುತ್ತಿದೆ. ಯುವ ನಿರ್ದೇಶಕ ಡಿ.ಹರಿ ಪ್ರಕಾಶ್ ಆಕ್ಷನ್ ಕಟ್ ಹೇಳಿರುವ ಈ ಸಿನಿಮಾ ಸದ್ಯ ಶೂಟಿಂಗ್ ಮುಗಿಸಿ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದೆ. ಈ ಸಿನಿಮಾದ ಝಲಕ್ ತೋರಿಸಲು ಟೀಸರ್ ಅನ್ನು ಡಿ ಬೀಟ್ಸ್ ಯು ಟ್ಯೂಬ್ ಚಾನಲ್ ಮೂಲಕ ಬಿಡುಗಡೆ ಮಾಡಿದೆ ಚಿತ್ರತಂಡ. ಚಂದನವನದ 50ಕ್ಕೂ ಹೆಚ್ಚು ಸೆಲೆಬ್ರಿಟಿಗಳು ಕಾನ್ಸೆಪ್ಟ್ ಮೆಚ್ಚಿ ಡಿಜಿಟಲ್ ಲಾಂಚ್ ಮಾಡುವ ಮೂಲಕ ಚಿತ್ರತಂಡಕ್ಕೆ ಸಾಥ್ ನೀಡಿದ್ದಾರೆ. ಇದರಲ್ಲಿ ಪಾತ್ರ ಪರಿಚಯದ ಜತೆಗೆ ಗೀಕ್ ಕುರಿತು ತುಣುಕೊಂದು ಕಾಣಸಿಗುತ್ತದೆ. ಇದೊಂದು ಕಂಟೆಂಟ್ ಇರುವಂಥ ಚೊಕ್ಕ ಸಿನಿಮಾ ಎಂಬುದು ಟೀಸರ್‌ನಲ್ಲಿ ಗೋಚರವಾಗುತ್ತದೆ.

ಇತ್ತೀಚೆಗೆ ಮೊಬೈಲ್ ಸಂಬಂಧಿತ ಆಪ್‌ಗಳು ಹಾಗೂ ಡೇಟಾ ದುರುಪಂ ಯೋಗಪಡಿಸಿಕೊಳ್ಳುತ್ತಿರುವ ಕುರಿತ ಕಥಾಹಂದರ ಹೊಂದಿರುವ ಸಿನಿಮಾ ಇದಾಗಿದ್ದು, ಇದಕ್ಕೆ ಸೈಬರ್ ಕ್ರೈಂ, ಸಸ್ಪೆನ್ಸ್–ಥ್ರಿಲ್ಲರ್ ಅಂಶವನ್ನು ಸೇರಿಸಲಾಗಿದೆ. ಕಂಟೆಂಟ್ ಜತೆಗೆ ಸಸ್ಪೆನ್ಸ್, ಥ್ರಿಲ್ ನೀಡಬೇಕು ಎಂಬ ನಿಟ್ಟಿನಲ್ಲಿ ಈ ಸಿನಿಮಾ ತಯಾರಾಗಿದೆ. ಬಹುತೇಕ ಬೆಂಗಳೂರಿನ ಸುತ್ತಮುತ್ತ ಚಿತ್ರೀಕರಣ ನಡೆಸಿದ್ದೇವೆ. ಟೆಕ್ನಿಕಲಿ ಸೌಂಡ್ ಜೋರಾಗಿರಬೇಕು ಎಂಬ ಕಾರಣಕ್ಕೆ ನುರಿತ ತಂತ್ರಜ್ಞರೇ ಸೇರಿಕೊಂಡು ಈ ಸಿನಿಮಾ ಮಾಡಲಾಗಿದೆ? ಎಂಬುದು ನಿರ್ದೇಶಕ ಹರಿಪ್ರಕಾಶ್ ಅನಿಸಿಕೆ.

ಮೂಲತಃ ಸಾಫ್ಟ್‌ವೇರ್ ಎಂಜಿನಿಯರ್ ಆಗಿರುವ ಹರಿಪ್ರಕಾಶ್, ಈ ಹಿಂದೆ ಕಿರುಚಿತ್ರ ನಿರ್ದೇಶಿಸಿದ್ದಾರೆ. ಅದಕ್ಕೆ ಸಾಕಷ್ಟು ಮೆಚ್ಚುಗೆ, ಪ್ರಶಸ್ತಿ ಲಭಿಸಿವೆ. ಕಿರುಚಿತ್ರ ಅನುಭವ ಹಾಗೂ ಸಿನಿಮಾ ರಂಗದ ಮೇಲಿನ ಆಸಕ್ತಿಯಿಂದಾಗಿ ಮೊದಲ ಚಿತ್ರದಲ್ಲೇ ಹೊಸತನ್ನೇನೋ ಕೊಡುವ ತುಡಿತ ಅವರಲ್ಲಿದೆ ಎಂಬುದಕ್ಕೆ ?ಗೀಕ್? ಟೀಸರ್ ಸಾಕ್ಷಿ. ಪ್ರವೀಣ್ ತೇಜ್, ಚೈತ್ರಾ ಆಚಾರ್, ಕಿರಣ್ ಶ್ರೀನಿವಾಸ್, ವಿರಾನಿಕಾ ಶೆಟ್ಟಿ ಪ್ರಮುಖ ಭೂಮಿಕೆಯಲ್ಲಿದ್ದಾರೆ. ಎಸ್.ವಿ.ಎಂ ಪ್ರೊಡಕ್ಷನ್ಸ್ ಹಾಗೂ ಹರಿಪ್ರಕಾಶ್ ಫಿಲಂಸ್ ಬ್ಯಾನರ್ ಅಡಿಯಲ್ಲಿ ಸಂದೀಪ್ ನಾಗರಾಜ್ ಹಾಗೂ ಪ್ರಿಯಾಂಕಾ ಜಂಟಿಯಾಗಿ ಈ ಸಿನಿಮಾಕ್ಕೆ ಬಂಡವಾಳ ಹೂಡಿದ್ದಾರೆ. ಯೋಗೀಶ್ ರಾಜ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ.

ಕೀರ್ತನ್ ಪೂಜಾರಿ ಛಾಯಾಗ್ರಹಣ, ಜೋ ಕೋಸ್ಟಾ ಸಂಗೀತ ಸಂಯೋಜನೆ, ಶಶಾಂಕ್ ನಾರಾಯಣ್ ಸಂಕಲನ, ಲಿಜು ಪ್ರಭಾಕರ್ ಡಿಐ ಹಾಗೂ ಅರುಣ್ ಸೌಂಡ್ ಡಿಸೈನಿಂಗ್ ಈ ಚಿತ್ರಕ್ಕಿದೆ.



# ಸುಮ್ನೆ ತಮಾಷೆಗೆ' ಸಿನಿಮಾದ ಸ್ಕ್ರಿಪ್ಟ್ ಪೂಜೆ

ಪನ್ನಗ ಹಾಗೂ ಸ್ನೇಹಿತರು, ನಿರ್ದೇಶಕ ವಿಶ್ವಾಸ್ ಕೃಷ್ಣ ಸುಮ್ನೆ ತಮಾಷೆಗೆಚಿತ್ರಕ್ಕೆ ಹಣ ಹಾಕುತ್ತಿದ್ದಾರೆ.

ಸುರೇಶ್ ಬಾಬು ಸುಮ್ನೆ ತಮಾಷೆಗೆ ಸಿನಿಮಾಗೆ ಆಕ್ಷನ್ ಕಟ್ ಹೇಳುತ್ತಿದ್ದು, ಇದು ಅವರು ನಿರ್ದೇಶಿಸುತ್ತಿರುವ ಚೊಚ್ಚಲ ಚಿತ್ರ.

ಈ ಸಿನಿಮಾದ ಸ್ಕ್ರಿಪ್ಟ್ ಪೂಜೆ ಇತ್ತೀಚೆಗೆ ಬೆಂಗಳೂರಿನ ಜೆಪಿ ನಗರದ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ಸನ್ನಿಧಿಯಲ್ಲಿ ನೆರವೇರಿತು.

ಪಟೇಲ್ ವರುಣ್ ರಾಜು ಸುಮ್ನೆ ತಮಾಷೆಗೆ ಸಿನಿಮಾದಲ್ಲಿ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಯುವ ಪ್ರತಿಭೆಗಳಾದ ಹರೀಶ್, ದರ್ಶನ್ ಹಾಗೂ ಮಾಧವ ತಾರಾಬಳಗದಲ್ಲಿದ್ದಾರೆ. ಸಾಮ್ರಾಟ್ ಮ್ಯೂಸಿಕ್, ಪುನೀತ್ ಓಂಕಾರ್ ಸ್ಟಂಟ್ ಕೊರಿಯೋಗ್ರಫಿ ಚಿತ್ರಕ್ಕಿದೆ.



# ಕನ್ನಡದ ಮೊದಲ ಲೈವ್ ಇನ್ ಕಾನ್ಸರ್ಟ್

ಅಜನೀಶ್ ಲೋಕನಾಥ್ ಹಲವು ಸೂಪರ್ ಹಿಟ್ ಚಿತ್ರಗಳಿಗೆ ಸಂಗೀತ ನಿರ್ದೇಶನ ಮಾಡಿ ಜನಪ್ರಿಯರಾದವರು. ಇದೀಗ ಕನ್ನಡದಲ್ಲಿ ಮ್ಯೂಸಿಕ್ ಕಾನ್ಸರ್ಟ್ ಹಮ್ಮಿಕೊಂಡಿದ್ದಾರೆ. ಅವರ ನೇತೃತ್ವದಲ್ಲಿ ಇದೇ ತಿಂಗಳ 16ರಂದು ಕನ್ನಡದ ಮೊದಲ ಮ್ಯೂಸಿಕ್ ಕಾನ್ಸರ್ಟ್ ನಡೆಯುತ್ತಿದೆ.

ಈ ವೇಳೆ ಮಾತನಾಡಿದ ಅವರು ಇಂಡಸ್ಟ್ರಿಯಲ್ ಕೆಲಸ ಶುರು ಮಾಡಿದ್ದು 2023ರಲ್ಲಿ. ಕೆ ಕಲ್ಯಾಣ್ ಜೊತೆ ಸೆಷನ್ ಮ್ಯೂಸಿಷನ್ ಆಗಿ, ಆರೆಂಜರ್ ಆಗಿ ಕೆಲಸ ಮಾಡಿ, ತುಂಬಾ ಇಷ್ಟಪಟ್ಟು ಐದಾರು ವರ್ಷದ ಪ್ರಯತ್ನದ ಬಳಿಕ 2009ರಲ್ಲಿ ಮೊದಲ ಸಿನಿಮಾ ರಿಲೀಸ್ ಆಯ್ತು. ಶಿಶಿರ ಸಿನಿಮಾದಿಂದ ಒಳ್ಳೆ ಹೆಸರು ಸಿಕ್ತು. ಉಳಿದವರು ಕಂಡಂತೆ ಸಿನಿಮಾ ನನ್ನ ಜೀವನದ ಟರ್ನಿಂಗ್ ಪಾಯಿಂಟ್. ಈ 13 ವರ್ಷದಲ್ಲಿ ನನ್ನ ಫೋಕಸ್ ಇದಿದ್ದು





ಒಳ್ಳೆ ಸಾಂಗ್ ಮಾಡಬೇಕು. ಅದು ಈಗ ಆಗಿದೆ. ಎಲ್ಲರೂ ಕಾನ್ಸರ್ಟ್ ಏಕೆ ಮಾಡೋಲ್ಲ ಎಂದು ಕೇಳುತ್ತಿದ್ದರು. ೦ಅಖಿಲ ಕಂಪನಿ ಕಡೆಯಿಂದ ಈಗ ಮ್ಯೂಸಿಕ್ ಕಾನ್ಸರ್ಟ್ ಮಾಡುತ್ತಿದ್ದೇವೆ. ಕಾನ್ಸರ್ಟ್ ಲೈವ್ ಇರೋಲ್ಲ. ಒಂದೊಂದು ಹಾಡಿಗೆ ಫರ್ಫಾಮೆನ್ಸ್, ವಿಷ್ಯುವಲ್ಸ್ ಇರುತ್ತದೆ. ಸಂಗೀತ ಮೇನ್ ಆಗಿ ಇರಲಿದೆ ಎಂದರು.

ಬಿ. ಅಜನೀಶ್ ಲೋಕನಾಥ್ ಅವರ ಮ್ಯೂಸಿಕ್ ಕಾನ್ಸರ್ಟ್ ಬೆಂಗಳೂರಿನ ಭಾರತೀಯ ಮಾಲ್ ನಲ್ಲಿ ನಡೆಯಲಿದೆ. ಈ ಕನ್ಸರ್ಟ್ ನಲ್ಲಿ ವಿಜಯ್ ಪ್ರಕಾಶ್, ಮಂಗ್ಲಿ, ನಕಾಶ್ ಅಜೀಜ್, ಅನನ್ಯ ಭಟ್, ಸಾನ್ವಿ ಸುದೀಪ್, ಸಂಜಿತ್ ಹೆಗ್ಡೆ, ಹರಿಶಂಕರ್, ಅಬ್ಬಿ ವಿ, ವಾಸುಕಿ ವೈಭವ್, ಅನಿರುದ್ಧ್ ಶಾಸ್ತ್ರೀ, ಐಶ್ವರ್ಯ ರಂಗರಾಜನ್, ರಾಮ್‌ದಾಸ್, ಸಾಯಿ ವಿಘ್ನೇಶ್, ಹರಿಶಿಕಾ, ಬಾಬಿ ಸೇರಿದಂತೆ ಹಲವರು ಹಾಡಲಿದ್ದಾರೆ

# ಶಿಖಂಡಿ ಈ ವಾರ ತೆರೆಗೆ

ಪ್ರೋಲಾ ಪ್ರವೀಣ್ ಕುಮಾರ್ ನಿರ್ಮಾಣ ಗುರುಮೂರ್ತಿ ವಿ ನಿರ್ದೇಶನದ "ಶಿಖಂಡಿ" ಚಿತ್ರ ಈ ವಾರ ಬಿಡುಗಡೆಯಾಗುತ್ತಿದೆ.

ನಾಯಕನಾಗಿ ಯುವರಾಜ್ ಗೌಡ ಎಂಬ ನೂತನ ಪ್ರತಿಭೆ ನಾಯಕನಾಗಿ ನಟಿಸಿದ್ದಾರೆ. ಖ್ಯಾತಿ ಈ ಚಿತ್ರದ ನಾಯಕಿ. ನಿಖಿಲ್, ನಿಖಿತಸ್ವಾಮಿ, ದೀಪಕ್ ಶೆಟ್ಟಿ, ನೀತು ವನಜಾಕ್ಷಿ, ರಾಘವೇಂದ್ರ (ರಾಗು), ಚಾಂದಿನಿ, ವೇದ, ಬಲ ರಾಜ್ವಾಡಿ, ನಯನ, ವಿಜಯ್ ಚೆಂಡೂರ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಮಂಜು ಕವಿ ಸಂಗೀತ ನಿರ್ದೇಶನವಿರುವ "ಶಿಖಂಡಿ" ಚಿತ್ರಕ್ಕೆ ಪ್ರದ್ಯೋತನ್ ಹಿನ್ನೆಲೆ ಸಂಗೀತ ನೀಡಿದ್ದಾರೆ. ಸ್ವಾಮಿ ಮೈಸೂರು ಛಾಯಾಗ್ರಹಣ ಹಾಗೂ ಚಕ್ರಂ ಸಾಯಿ ಸಂಕಲನ ಈ ಚಿತ್ರಕ್ಕಿದೆ.



# ತಿಕ್ಲುರಾಮ ಸಿನಿಮಾದ ಪುಸ್ತಕ ಬಿಡುಗಡೆ

ಪರಿಸರ ಪ್ರೇಮಿ, ಹೃದಯಸ್ಪರ್ಶಿ ಕಥೆಯನ್ನು ಹೊಂದಿರುವ ?ತಿಕ್ಲುರಾಮ? ಡಾ.ನಟರಾಜ ವಿರಚಿತ ಕಾದಂಬರಿಯಾಗಿದ್ದು ಸಿನಿಮಾರೂಪದಲ್ಲಿ ಬರುತ್ತಿದೆ. ಈಗಾಗಲೇ ಶೇಕಡ 40ರಷ್ಟು ಚಿತ್ರೀಕರಣ ನಡೆದಿದೆ. ಮೊನ್ನೆಯಷ್ಟೇ ಕಾದಂಬರಿ ಬಿಡುಗಡೆ ಸಮಾರಂಭವು ಮಂತ್ರಿ ಮಾಲ್‌ದಲ್ಲಿ ಅದ್ದೂರಿಯಾಗಿ ನಡೆಯಿತು. ಪದ್ಮಶ್ರೀ ಡಾ.ದೊಡ್ಡರಂಗೇಗೌಡ, ನಟ ನಿರ್ದೇಶಕ ಕೆ.ಸುಚೇಂದ್ರಪ್ರಸಾದ್, ಸಾಹಿತಿ ಮತ್ತು ನಿರ್ದೇಶಕ ಬಿ.ಶಿವಾನಂದ, ಡಾ.ಭರತ್ ಮುಂತಾದವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಹಾರೈಸಿದರು.

ಇನ್ನು ಸಿನಿಮಾಕ್ಕೆ ಮಂಜುಕವಿ ನಿರ್ದೇಶನ ಜವಬ್ದಾರಿಯನ್ನು ಹೊತ್ತುಕೊಂಡಿದ್ದು, ಡಾ.ರಾಜವೀರ್ ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಕರಿಷ್ಮ–ಶ್ರಾವ್ಯ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಶೃತಿ.ಜಿ.ಬಿ ಮತ್ತು ಕೋಮಲ ನಟರಾಜು ಜಂಟಿಯಾಗಿ ನಿರ್ಮಾಣ ಮಾಡುತ್ತಿದ್ದಾರೆ. ತಾರಾಗಣದಲ್ಲಿ ಸುಚೇಂದ್ರ ಪಸ್ರಾದ್, ಜಹಾಂಗೀರ್, ಚೈತ್ರರಾಮ್, ಹಾಸ್ಯ ನಟ ಗಿರೀಶ್. ಇವರೊಂದಿಗೆ ವಿನೋದ್ ಪವಿತ್ರ, ನಿಖಿತಸ್ವಾಮಿ, ಶ್ರಾವ್ಯ ಸೇರಿದಂತೆ ಅನೇಕ ಹೆಸರಾಂತ ಕಲಾವಿದರು ಅಭಿನಯಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು, ಪುಸ್ತಕವನ್ನು ಪ್ರತಿಯೊಬ್ಬರು ಓದಬೇಕು. ಓದಿದವರು ಖಂಡಿತ ಒಂದಷ್ಟು ಜನ ಬದಲಾವಣೆ ಆಗ್ತಾರೆ. ಪರಿಸರ ಬಗ್ಗೆ ಯಾವ ರೀತಿ ಕಾಳಜಿ ವಹಿಸಬೇಕು. ಪ್ರಕೃತಿ ಎಲ್ಲವನ್ನು ಕೊಟ್ಟಿದೆ. ಇನ್ನು ಮುಂತಾದ ವಿಷಯಗಳ ಬಗ್ಗೆ ವರ್ಣನೆ ಮಾಡಲಾಗಿದೆ. ಸುಚೇಂದ್ರಪ್ರಸಾದ್ ಶಾಸಕರಾಗಿ ಬಣ್ಣ ಹಚ್ಚುತ್ತಿದ್ದಾರೆ. ಬೇರೆ ಟೈಟಲ್ ಇಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ತಿಳಿಸಲಾಗುವುದೆಂದು ಮಂಜುಕವಿ ತಿಳಿಸಿದರು.

ಬಿಇ ಮುಗಿಸಿದ ನನಗೆ, ನಾನು ಕಥೆ ಬರೆದಿರುವುದು ಸೋಜಿಗ ಅನಿಸಿದೆ. ಪ್ರೌಡಶಾಲೆಯಲ್ಲಿದ್ದಾಗ ದೊಡ್ಡರಂಗೇಗೌಡರ ಪ್ರವಚನ ಕೇಳಿ ಪ್ರೇರಣೆಯಾಗಿ, ಅವರಂತೆ ಜೀವನದಲ್ಲಿ ನಡೀಬೇಕು ಅಂದುಕೊಂಡಿದ್ದೆ, ಇಂದು ಹಲವು ಕಥೆಗಳನ್ನು ಬರೆಯಲು ಸಹಕಾರಿ ಆಯಿತು. ಸರ್ಕಾರಿ ಕೆಲಸದಲ್ಲಿ ಕಂಡಂತ, ಸುತ್ತಮುತ್ತಲಿನ ವಿದ್ಯಾಮಾನಗಳನ್ನು ಅಕ್ಷರರೂಪದಲ್ಲಿ ತಂದಿದ್ದೇನೆ. ಕೊನೆಗೆ ತಿಕ್ಲುರಾಮ ಹೆಸರು ಇಡಲಾಗಿದ್ದಕ್ಕೆ ಕಾರಣವೇನು ಎಂಬುದಕ್ಕೆ ಡಾ.ರಾಜ್‌ವೀರ್ ವಿವರಣೆ ಕೊಟ್ಟರು.

ಕನ್ನಡ ಸಾಹಿತ್ಯ ಲೋಕದಲ್ಲಿ ಹಲವು ವಿಶಿಷ್ಟ ಕೊಡುಗೆಗಳಾದ ಬರಹಗಳು, ಸೃಜನಶೀಲ ಸಾಹಿತ್ಯಗಳು. ರಾಷ್ಟ್ರೀಯ, ಅಂತರರಾಷ್ಟ್ರೀಯ ಸಂದರ್ಭಗಳಲ್ಲಿ ನಮ್ಮ ಭಾಷೆಯು ದೊಡ್ಡ ಮಟ್ಟದಲ್ಲಿ ಬೆಳವಣಿಗೆ ಕಂಡು, ಕನ್ನಡ ಸಂಸ್ಕೃತಿ ಎಲ್ಲಾ ಕಡೆ ರಾರಾಜಿಸುತ್ತಿದೆ. ತಿಕ್ಲುರಾಮ ಕಾದಂಬರಿ ಚೆನ್ನಾಗಿದೆ. ಸಿನಿಮಾ ನೋಡಲು ಕಾತುರನಾಗಿದ್ದೇನೆಂದು ಡಾ.ದೊಡ್ಡರಂಗೇಗೌಡರು ಹೇಳಿದರು. ಸುಚೇಂದ್ರಪ್ರಸಾದ್ ಹೇಳುವಂತೆ, ಪುಸ್ತಕದಲ್ಲಿ ಗ್ರಾಮೀಣ ಸೊಗಡು, ಪರಿಸರ ಕಾಳಜಿ ಓದುಗರನ್ನು ಆಸಕ್ತಿ ತರಿಸುವಂತಿದೆ. ತಿಕ್ಲುರಾಮ ಸಿನಿಮಾ ರೂಪದಲ್ಲಿ ಸಾಕ್ಷಿಯಾಗಿರುವುದು, ಗಮನೀಯ ಮತ್ತು ಮಾದರಿ ಅನಿಸುತ್ತೆ. ಇಂತಹ ಕೃತಿಗಳು ನಿರಂತವಾಗಿ ಹೊರಬರಲಿ. ಮನದ ಗದ್ದಲ ದೂರ ಮಾಡಿಕೊಳ್ಳಲು, ಪುಸ್ತಕ ಸಹಕಾರಿಯಾಗಿ, ಮನಸ್ಸಿಗೆ ಮುದ ನೀಡುತ್ತದೆ. ಮಂಜುಕವಿ ಶ್ರಮಕ್ಕೆ ಫಲ ಸಿಗಲಿ ಎಂದರು.



# `ಸೆಪ್ಟೆಂಬರ್ 21' ಚಿತ್ರಕ್ಕೆ ಉಪೇಂದ್ರ ಸಾಥ್

ಪ್ರಿಯಾಂಕ ಉಪೇಂದ್ರ ಅಭಿನಯದ ಹಾಗೂ ಕರೆನ್ ಕ್ರಿಷ್ಠಿ ಸುವರ್ಣ ನಿರ್ದೇಶನದ ಈ ಚಿತ್ರ ಮೇ 22 ರಂದು ತೆರೆಗೆ ಬರುತ್ತಿದೆ. ಈಗ ಟ್ರೇಲರ್ ಬಿಡುಗಡೆಯಾಗಿದೆ. ಕಾರ್ಯಕ್ರಮಕ್ಕೆ ನಟ ಉಪೇಂದ್ರ ಆಗಮಿಸಿ ಚಿತ್ರತಂಡಕ್ಕೆ ಶುಭ ಕೋರಿದರು

"ಸೆಪ್ಟೆಂಬರ್ 21" ಹಿಂದಿ ಮತ್ತು ಕನ್ನಡ ಭಾಷೆಯಲ್ಲಿ ಏಕಕಾಲಕ್ಕೆ ಚಿತ್ರೀಕರಣಗೊಂಡಿದೆ. ಅದಕ್ಕೂ ಮುನ್ನ ಹೆಸರಾಂತ ಕಾನ್ಸ್ ಫಿಲಂ ಫೆಸ್ಟಿವಲ್ ನಲ್ಲಿ ನಮ್ಮ ಚಿತ್ರ ಮೇ 15 ರಂದು ಪ್ರದರ್ಶನವಾಗುತ್ತಿದೆ. ನನ್ನ ಮೊದಲ ನಿರ್ದೇಶನದ ಚಿತ್ರ ಕಾನ್ಸ್ ಫಿಲಂ ಫೆಸ್ಟಿವಲ್ ನಲ್ಲಿ ಪ್ರದರ್ಶನವಾಗುತ್ತಿರುವುದು ಖುಷಿಯಾಗಿದೆ. ಆಲ್ಝೈಮರ್ ಖಾಯಿಲೆ (Alzheimer's disease)ಸುತ್ತ ನಡೆಯುವ ಕಥೆ ಇದಾಗಿದ್ದು, "ರೋಗಿಗಿಂತ ಅವನ ಪಾಲನೆ ಮಾಡುವವರು ತೆಗೆದುಕೊಳ್ಳುವ ನಿರ್ಧಾರ ತುಂಬಾ ಮುಖ್ಯ "ಎಂಬುದು ಚಿತ್ರದ ಅಡಿಬರಹವಾಗಿದೆ. ಪ್ರಿಯಾಂಕ ಉಪೇಂದ್ರ ಅವರು ರೋಗಿಯನ್ನು ಶುಶ್ರೂಷೆ ಮಾಡುವವರ ಪಾತ್ರದಲ್ಲಿ ಅಭಿನಯಿಸಿದ್ದಾರೆ. ಅವರು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ ಎಂದು ನಿರ್ದೇಶಕಿ ಕರೆನ್ ಕ್ರಿಷ್ಠಿ ಸುವರ್ಣ ತಿಳಿಸಿದರು.

ನನಗೆ ನಿರ್ದೇಶಕಿ ಕರೆನ್ ಕ್ರಿಷ್ಠಿ ಸುವರ್ಣ ಅವರು ಕಥೆ ಹೇಳಿದ ಪರಿ ಇಷ್ಟವಾಯಿತು. ನಾನು ಈವರೆಗೂ ಮಾಡಿರದ ಪಾತ್ರದಲ್ಲಿ ಅಭಿನಯಿಸಿದ್ದೇನೆ. ನಾನು ಕೂಡ ನಮ್ಮ ಕುಟುಂಬದಲ್ಲಿ ಆಲ್ಝೈಮರ್ ಖಾಯಿಲೆಯಿಂದ ಬಳಲುತ್ತಿರುವವರನ್ನು ಹತ್ತಿರದಿಂದ ನೋಡಿದ್ದೇನೆ. ಆಲ್ಝೈಮರ್ ಖಾಯಿಲೆಯಿಂದ ಬಳಲುತ್ತಿರುವ ರೋಗಿ ಹಾಗೂ ರೋಗಿಯನ್ನು ಶುಶ್ರೂಷೆ ಮಾಡುವವರ ಸುತ್ತ ನಡೆಯುವ ಕಥಾಹಂದರ ಈ ಚಿತ್ರ ಹೊಂದಿದೆ. ಎಂದರು

ಆಲ್ಝೈಮರ್ ಖಾಯಿಲೆಯಿಂದ ಬಳಲುತ್ತಿರುವ ರೋಗಿಯ ಪಾತ್ರದಲ್ಲಿ ಅಭಿನಯಿಸಿರುವುದಾಗಿ ನಟ ಪ್ರವೀಣ್ ಸಿಂಗ್ ಸಿಸೋಡಿಯಾ ಹೇಳಿದರು. ಕಥೆಯ ಕುರಿತು ಕಥೆಗಾರ ರಾಜಶೇಖರ್ ಹಾಗೂ ಹಾಡುಗಳ ಬಗ್ಗೆ ಸಂಗೀತ ನಿರ್ದೇಶಕ ವಿನಯ್ ಚಂದ್ರ ಮಾಹಿತಿ ನೀಡಿದರು. ನಿರ್ಮಾಪಕರಾದ ವಿಜಯ್ ಚೌಧರಿ, ಶ್ರೀನಿವಾಸ್ ಬೆಟ್ಟದಪುರ, ರಮೇಶ್ ಭಂಡಾರಿ ಹಾಗೂ ಅಭಿಷೇಕ್ ಗೌತಮ್, ಅಜಿತ್ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,